# ಬೆಳಗಾವಿ ವರದಿ

ಪ್ರಧಾನ ಸಂಪಾದಕ : ಸತೀಶ್. ಬಿ. ಗುಡಗೇನಟ್ಟಿ

BELAGAVI VARADI KANNADA DAILY NEWS PAPER

ಗಡಿ ಜಿಲ್ಲೆಯ ಧ್ವನಿ...

VOL.04 ISSUE. 303 ₹4, TUESDAY, 30 JANUARY 2024 NEWSBELAGAVI@GMAIL.COM 9900332089 RNI. KARKAN/2020/79084 REG.NO G-2/PMG/KA/NK/BM/139/2024-26




## ಕೆಜಿಗೆ 500 ರೂ. ದಾಟಿದ ಬೆಳ್ಳುಳ್ಳಿ ದರ

ಬೆಂಗಳೂರು: ಬೆಲೆ ಏರಿಕೆಯಿಂದ ತತ್ತರಿಸಿರುವ ಜನಸಾಮಾನ್ಯರಿಗೆ ಇದೀಗ ಬೆಳ್ಳುಳ್ಳಿ ಬೆಲೆ ಏರಿಕೆಯ ಬಿಸಿ ತಟ್ಟಿದೆ.

ಬೆಳ್ಳುಳ್ಳಿ ಕೆಜಿಗೆ 400 ರಿಂದ 500 ರೂ. ತಲುಪಿದೆ. ಕಳೆದ ವಾರ ಕೆ.ಜಿಗೆ 200 ರಿಂದ 300 ರೂ. ಇದ್ದ ಬೆಳ್ಳುಳ್ಳಿ ದರ ಈಗ 400–500 ರೂ.ವರೆಗೆ ಏರಿಕೆಯಾಗಿದೆ. ಸದ್ಯಕ್ಕೆ ಬೆಳ್ಳುಳ್ಳಿ ಬೆಲೆ ಕಡಿಮೆಯಾಗುವ ಲಕ್ಷಣಗಳು ಕಾಣುತ್ತಿಲ್ಲ. ಮುಂದಿನ ಫೆಬ್ರವರಿವರೆಗೂ ಬೆಳ್ಳುಳ್ಳಿ ದರ ಮತ್ತಷ್ಟು ಏರಿಕೆಯಾಗುವ ಸಾಧ್ಯತೆ ಇದೆ.

ಕಳೆದ ಎರಡು ತಿಂಗಳಿಣಿಂದ ಏರುಗತಿಯಲ್ಲೇ ಇರುವ ಬೆಳ್ಳುಳ್ಳಿ ದರ ಇದೀಗ ಒಂದು ಕೆಜಿಗೆ 400 ರಿಂದ 500 ರೂ. ವರೆಗೆ ಮುಟ್ಟಿದೆ. ಟೊಮೆಟೊ, ಈರುಳ್ಳಿ ಬೆಲೆ ನಿಯಂತ್ರಣಕ್ಕೆ ಬಂದ ಬೆನ್ನಲ್ಲೇ ಬೆಳ್ಳುಳ್ಳಿ ಬೆಲೆಯಲ್ಲಿ ಏರಿಕೆಯಾಗಿರುವುದು ಜನಸಾಮಾನ್ಯರಿಗೆ ಬೆಲೆ ಏರಿಕೆ ಬಿಸಿ ತಟ್ಟಿದೆ.

## ಸಿಎಂ ಸಿದ್ದು ಕೈ ಬಲಪಡಿಸಿ, ನಾವೆಲ್ಲ ಸೈನಿಕರಾಗಿ ನಿಲ್ಲಬೇಕಿದೆ: ಸಚಿವ ಸತೀಶ್ ಜಾರಕಿಹೊಳಿ

ಚಿತ್ರದುರ್ಗ: ಸಿಎಂ ಸಿದ್ದರಾಮಯ್ಯನವರ ನೇತೃತ್ವದಲ್ಲಿ ಇಂದು ಜಾಗೃತಿ ಸಮಾವೇಶ ನಡೆಯುತ್ತಿದ್ದು, ಬರುವ ದಿನಗಳಲ್ಲಿ ನಾವೆಲ್ಲ ಒಗ್ಗಟ್ಟಾಗಿ, ಜತೆಯಾಗಿ ಸಿದ್ದರಾಮಯ್ಯನವರ ಕೈ ಇನ್ನಷ್ಟು ಬಲಪಡಿಸಬೇಕು. ಅವರ ಹಿಂದೆ ನಾವೆಲ್ಲ ಸೈನಿಕರಾಗಿ ನಿಲ್ಲಬೇಕೆಂದು ಲೋಕೋಪಯೋಗಿ ಇಲಾಖೆ ಸಚಿವ ಸತೀಶ್ ಜಾರಕಿಹೊಳಿ ಅವರು ಕರೆ ನೀಡಿದರು.

ಕರ್ನಾಟಕ ಶೋಷಿತ ಜಾತಿ–ಸಮುದಾಯಗಳ ಮಹಾ ಒಕ್ಕೂಟ ಮತ್ತು ಕರ್ನಾಟಕ ರಾಜ್ಯ ಹಿಂದುಳಿದ ಜಾತಿಗಳ ಒಕ್ಕೂಟ ಆಯೋಜಿಸಿದ್ದ "ಶೋಷಿತರ ಜಾಗೃತಿ ಸಮಾವೇಶ"ದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಸಿಎಂ ಸಿದ್ದರಾಮಯ್ಯ ನಮ್ಮ ನಾಯಕರು.

ಅವರು ಅಧಿಕಾರಕ್ಕೆ ಬಂದ ಮೇಲೆ ಕರ್ನಾಟಕದಲ್ಲಿ ಅನೇಕ ರಾಜಕೀಯ ಬದಲಾವಅಣೆಗಳು ಆಗಿವೆ. ಹಿಂದಿನ ಮುಖ್ಯಮಂತ್ರಿಗಳಾದ ದೇವರಾಜ ಅರಸು, ಬಂಗಾರಪ್ಪ ಅವರಂತೆಯೇ ಶೋಷಿತ ಸಮುದಾಯಕ್ಕಾಗಿ ಸಿದ್ದರಾಮಯ್ಯನವರು ದುಡಿಯುತ್ತಿದ್ದು, ಶೋಷಿತ ಸಮುದಾಯಕ್ಕಾಗಿ ಅನೇಕ ಬದಲಾವಣೆಗಳನ್ನು ತಂದಿದ್ದಾರೆ ಎಂದರು.

ವಿಶೇಷವಾಗಿ ಎಸ್ಸಿ, ಎಸ್ಟಿ ಸಮುದಾಯದವರಿಗೆ ಜನಸಂಖ್ಯೆ ಅನುಗುಣವಾಗಿ ಹಿಂದಿನ ಅವರ ಆಡಳಿತದಲ್ಲಿ ಸಾವಿರಾರು ಕೋಟಿ ರೂಪಾಯಿ ಅನುದಾನ ನೀಡಿದ್ದಾರೆ. ಎಸ್ಸಿ, ಎಸ್ಟಿ ಸೇರಿದಂತೆ ಎಲ್ಲಾ ಸಮುದಾಯಗಳನ್ನು



ಮೇಲೆತ್ತುವ ಕೆಲಸ ಹಿಂದಿನ ಅವಧಿಯಲ್ಲಿ ಅವರು ಮಾಡಿದ್ದಾರೆ. ಈ ಬಾರಿಯೂ ಗ್ಯಾರಂಟಿಗಳನ್ನು ಜಾರಿಗೆ ತರುವ ಮೂಲಕ ಎಲ್ಲ ಸಮುದಾಯಗಳನ್ನು ಮೇಲೆತ್ತುವ ಕೆಲಸ ಮಾಡುತ್ತಿದ್ದಾರೆ.

ಆದ್ದರಿಂದ ಅವರಿಗೆ ನಾವು ಇನ್ನಷ್ಟು ಶಕ್ತಿ ನೀಡಿ ಲಾಭವನ್ನು ಪಡೆಯಬೇಕೆಂದು ತಿಳಿಸಿದರು.

ಶೋಷಿತರಿಗೆ ಆದ ಅನ್ಯಾಯ, ಅವರು ಕಳೆದುಕೊಂಡ ಹಕ್ಕು, ಅಧಿಕಾರ ಮುಂದಿನ ದಿನಗಳಲ್ಲಿ ಹೇಗೆ ವಾಪಸ್ಸ ಪಡೆಯಬೇಕು ಎಂಬುವುದಕ್ಕಾಗಿ ಈ ಸಮಾವೇಶ ಹಮ್ಮಿಕೊಳ್ಳಲಾಗಿದೆ.

ಸಾವಿರಾರು, ನೂರಾರು ವರ್ಷಗಳಿಂದ ಶೋಷಿತರು ಸೌಲಭ್ಯಗಳಿಂದ ವಂಚಿತರಾಗಿದ್ದು, ತಾವೆಲ್ಲ ಸದಾ ಜಾಗೃತರಾಗಿ ಇರಬೇಕೆಂಬ ಉದ್ದೇಶದಿಂದ ಐತಿಹಾಸಿಕ ಜಾಗೃತಿ ಸಮಾವೇಶ ಮಾಡುತ್ತಿದ್ದೇವೆ,

ಇದು ಒಂದು ಜಾತಿಗೆ ಸೀಮಿತಾದ ಸಮಾವೇಶವಲ್ಲ. ಆರ್ಥಿಕವಾಗಿ, ಸಾಮಾಜಿಕವಾಗಿ, ರಾಜಕೀವಾಗಿ, ಸಮಾನತೆಗಾಗಿ ಹೋರಾಟ ನಡೆಸುವ, ನಮ್ಮ ಹಕ್ಕನ್ನು ಪಡೆಯುವ ಉದ್ದೇಶಕ್ಕಾಗಿ ಈ ಸಮಾವೇಶ ಮಾಡುತ್ತಿದ್ದೇವೆ. ಶೋಷಿತರನ್ನು ಜಾಗೃತಿಗೊಳಿಸುವುದು ಕೆಲಸವನ್ನು ನಿರಂತರವಾಗಿ ಮಾಡಬೇಕಿದೆ ಎಂದು ತಿಳಿಸಿದರು.

ಈ ವೇಳೆ ಸಮಾವೇಶದಲ್ಲಿ ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿ.ಕೆ. ಶಿವಕುಮಾರ್, ಸಚಿವರುಗಳಾದ ಎಚ್.ಸಿ.ಮಹದೇವಪ್ಪ, ಜಮೀರ್ ಅಹ್ಮದ್ ಖಾನ್, ಬೋಸ್ ರಾಜು, ಕೆ.ಎಚ್. ಮುನಿಯಪ್ಪ, ಬೈರತಿ ಸುರೇಶ್, ಸಂತೋಷ್ ಲಾಡ್, ಮಧು ಬಂಗಾರಪ್ಪ, ದಿನೇಶ್ ಗುಂಡೂರಾವ್, ಆರ್.ಬಿ.ತಿಮ್ಮಾಪುರ್, ನಾಗೇಂದ್ರ, ಡಿ.ಸುಧಾಕರ್, ಶಿವರಾಜ್ ತಂಗಡಗಿ, ರಹೀಂಖಾನ್, ಕರ್ನಾಟಕ ಶೋಷಿತ ಸಮುದಾಯಗಳ ಮಹಾ ಒಕ್ಕೂಟದ ಅಧ್ಯಕ್ಷರಾದ ರಾಮಚಂದ್ರಪ್ಪ, ದಲಿತ ಸಂಘರ್ಷ ಸಮಿತಿ ಮುಖಂಡರಾದ ಮಾವಳ್ಳಿ ಶಂಕರ್, ಮಾಜಿ ಸಚಿವ ಎಚ್.ಎಂ.ರೇವಣ್ಣ, ಎಚ್.ಆಂಜನೇಯ, ಮಾಜಿ ಸಂಸದ ಉಗ್ರಪ್ಪ ಹಾಗೂ ಶಾಸಕರುಗಳಾದ ಪ್ರಕಾಶ್ ರಾಥೋಡ್, ನಾಗರಾಜ್ ಯಾದವ್, ಅಜಯ್ ಸಿಂಗ್, ನಸೀರ್ ಅಹಮದ್ ಸೇರಿ 20ಕ್ಕೂ ಹೆಚ್ಚು ಶಾಸಕರುಗಳು ಉಪಸ್ಥಿತರಿದ್ದರು.

## ಬಿಜೆಪಿ –ಜೆಡಿಎಸ್ ನಾಯಕರ ಬಂಧನ



ಮಂಡ್ಯ : ಕೆರಗೋಡು ಹನುಮಾನ್ ಧ್ವಜ ಪ್ರಕರಣ ವಿವಾದಕ್ಕೆ ಸಂಬಂಧಿಸಿದಂತೆ ಕಾಂಗ್ರೆಸ್ ಸರ್ಕಾರದ ಕ್ರಮವನ್ನು ವಿರೋಧಿಸಿ ಪ್ರತಿಭಟನಾ ಪಾದಯಾತ್ರೆ ನಡೆಸುತ್ತಿದ್ದ ಬಿಜೆಪಿ ಮತ್ತು ಜೆಡಿಎಸ್ ಪಕ್ಷದ ನಾಯಕರನ್ನು ಪೊಲೀಸರು ಬಂಧಿಸಿದ್ದಾರೆ.

ಹಲವು ಹಿಂದೂಪರ ಸಂಘಟನೆಗಳ ನಾಯಕರನ್ನೂ ಸಹ ಪೊಲೀಸರು ವಶಕ್ಕೆ ಪಡೆದಿದ್ದಾರೆ. ಕಾಂಗ್ರೆಸ್ ಸರ್ಕಾರ ಹಾಗೂ ಸಿಎಂ ಸಿದ್ದರಾಮಯ್ಯ ವಿರುದ್ಧ ಘೋಷಣೆಗಳನ್ನು ಕೂಗಿದ ಪ್ರತಿಭಟನಾಕಾರರು ಜಿಲ್ಲಾ ಕಚೇರಿಗೆ ಮುತ್ತಿಗೆ ಹಾಕಲು ಮುಂದಾಗಿದ್ದರು.

ಎಲ್ಲಾ ಜಿಲ್ಲಾಕೇಂದ್ರ ಹಾಗೂ ತಾಲೂಕು ಕೇಂದ್ರಗಳಲ್ಲಿಯೂ ಬಿಜೆಪಿ ಮತ್ತು ಜೆಡಿಎಸ್ ಕಾರ್ಯಕರ್ತರು ಜಂಟಿಯಾಗಿ ಪ್ರತಿಭಟನೆ ನಡೆಸುತ್ತಿದ್ದು, ಬೆಂಗಳೂರಿನ ಮೈಸೂರು ಬ್ಯಾಂಕ್ ವೃತ್ತದಲ್ಲಿಯೂ ಸಹ ಪ್ರತಿಭಟನಾಕಾರರನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ.

## ಡಿಕ್ಕಿ ಹೊಡೆದ ಕಾರು: ಹುಲಿ ಸ್ಥಳದಲ್ಲೇ ಸಾವು



ಮೈಸೂರು: ವೇಗವಾಗಿ ಸಾಗುತ್ತಿದ್ದ ಕಾರೊಂದು ರಸ್ತೆ ದಾಟುತ್ತಿದ್ದ ಹುಲಿಗೆ ಡಿಕ್ಕಿ ಹೊಡೆದು ಹುಲಿ ಸ್ಥಳದಲ್ಲೇ ಮೃತಪಟ್ಟಿದೆ. ಮೈಸೂರು–ನಂಜನಗೂಡು ರಸ್ತೆಯ ಮಂಡಕಳ್ಳಿ ವಿಮಾನ ನಿಲ್ದಾಣದ ಬಳಿ ಘಟನೆ ನಡೆದಿರುವುದು ಭಾರಿ ಆತಂಕಕ್ಕೆ ಕಾರಣವಾಗಿದೆ.

ರಾಷ್ಟ್ರೀಯ ಪ್ರಾಣಿಯಾಗಿರುವ ಹುಲಿಯ ಸಾವು ಒಂದು ಕಡೆ ಆತಂಕಕ್ಕೆ ಕಾರಣವಾಗಿದ್ದರೆ, ಇನ್ನೊಂದು ಕಡೆ ಮಂಡಕಳ್ಳಿ ವಿಮಾನ ನಿಲ್ದಾಣ ರಸ್ತೆಯಲ್ಲಿ ಹುಲಿಗಳ ಸಂಚಾರವೂ ಆತಂಕ ಮೂಡಿಸಿದೆ. ಸುಮಾರು ಒಂದೂವರೆ ವರ್ಷದ ಗಂಡು ಹುಲಿ ಇದಾಗಿದೆ.

ಕಾರು ಡಿಕ್ಕಿ ಹೊಡೆದ ರಭಸಕ್ಕೆ ಹುಲಿ ಸ್ಥಳದಲ್ಲೇ ಸಾವನ್ನಪ್ಪಿರುವ ಸುದ್ದಿ ತಿಳಿಯುತ್ತಿದ್ದಂತೆಯೇ ಅರಣ್ಯ ಇಲಾಖೆ ಸಿಬ್ಬಂದಿ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಕಾರನ್ನು ವಶಕ್ಕೆ ಪಡೆದುಕೊಂಡು ಮುಂದಿನ ಕ್ರಮ ಕೈಗೊಂಡಿದ್ದಾರೆ.

## ರಾಜ್ಯಸಭಾ ಸ್ಥಾನಗಳ ಚುನಾವಣೆಗೆ ದಿನಾಂಕ ಪ್ರಕಟ




ನವದೆಹಲಿ: ಕೇಂದ್ರ ಚುನಾವಣಾ ಆಯೋಗವು 15 ರಾಜ್ಯಗಳ 56 ರಾಜ್ಯಸಭಾ ಸ್ಥಾನಗಳ ಚುನಾವಣೆಗೆ ಇಂದು ದಿನಾಂಕವನ್ನು ಪ್ರಕಟಿಸಿದೆ.

ಫೆಬ್ರವರಿ 27 ರಂದು ಚುನಾವಣೆ ನಡೆಯಲಿದ್ದು, ಅದೇ ದಿನ ಮತ ಎಣಿಕೆ ಕೂಡ ನಡೆಯಲಿದೆ. 56 ಸದಸ್ಯರ ಅಧಿಕಾರಾವಧಿಯು ಏಪ್ರಿಲ್ 2024 ರಲ್ಲಿ ಅವರ ನಿವೃತ್ತಿಯ ಮೇಲೆ ಮುಕ್ತಾಯಗೊಳ್ಳಲಿದೆ. ಕರ್ನಾಟಕ ಸೇರಿ ಒಟ್ಟು 13 ರಾಜ್ಯಗಳ 50 ರಾಜ್ಯಸಭಾ ಸದಸ್ಯರ ಅವಧಿ ಏಪ್ರಿಲ್ 2ರಂದು ಮುಗಿಯಲಿದ್ದರೆ, ಎರಡು ರಾಜ್ಯಗಳ ಉಳಿದ ಆರು ಸದಸ್ಯರು ಏಪ್ರಿಲ್ 3ರಂದು ನಿವೃತ್ತರಾಗಲಿದ್ದಾರೆ. ಕರ್ನಾಟಕದಲ್ಲಿ ನಾಲ್ಕು ಸ್ಥಾನಗಳು ಖಾಲಿಯಾಗಲಿದ್ದು, ಜಿ.ಸಿ ಚಂದ್ರಶೇಖರ್, ಎಲ್ ಹನುಮಂತಯ್ಯ, ನಾಸೀರ್ ಹುಸೇನ್, ರಾಜೀವ್ ಚಂದ್ರಶೇಖರ್ ಅವರ ಅವಧಿ ಅಂತ್ಯವಾಗಲಿದೆ.

ಚುನಾವಣಾ ಆಯೋಗದ ಪ್ರಕಾರ, ರಾಜ್ಯಸಭಾ ಚುನಾವಣೆಗೆ ಫೆ.8ರಿಂದ ನಾಮಪತ್ರ ಸಲ್ಲಿಕೆ ಆರಂಭವಾಗಲಿದ್ದು, ಫೆ.15 ಕೊನೆಯ ದಿನವಾಗಿದೆ. ಫೆ.16ರಂದು ನಾಮಪತ್ರಗಳ ಪರಿಶೀಲನೆ ನಡೆಯಲಿದೆ. ಫೆ.20 ರಂದು ನಾಮಪತ್ರ ಹಿಂಪಡೆಯಲು ಕೊನೆಯ ದಿನವಾಗಿದೆ. ಫೆಬ್ರವರಿ 27 ರಂದು ಬೆಳಗ್ಗೆ 9 ರಿಂದ ಸಂಜೆ 4 ರ ನಡುವೆ ಮತದಾನ ನಡೆಯಲಿದ್ದು, ಅದೇ ದಿನ ಸಂಜೆ 5 ಗಂಟೆಗೆ ಮತ ಎಣಿಕೆ ನಡೆಯಲಿದೆ.

ಚುನಾವಣೆ ನಡೆಯುವ ಸ್ಥಾನಗಳ ಸಂಖ್ಯೆ: ಆಂಧ್ರಪ್ರದೇಶ: 3, ಬಿಹಾರ್: 6, ಛತ್ತೀಸ್‌ಗಢ: 1, ಗುಜರಾತ್: 4, ಹರಿಯಾಣ: 1, ಹಿಮಾಚಲಪ್ರದೇಶ: 1, ಕರ್ನಾಟಕ: 4, ಮಧ್ಯಪ್ರದೇಶ: 5, ಮಹಾರಾಷ್ಟ್ರ: 6, ತೆಲಂಗಾಣ: 3, ಉತ್ತರಪ್ರದೇಶ: 10, ಉತ್ತರಾಖಂಡ್: 1, ಪಶ್ಚಿಮಬಂಗಾಳ: 5, ಒಡಿಶಾ: 3, ರಾಜಸ್ಥಾನ: 3 ಸ್ಥಾನಗಳಿಗೆ ಚುನಾವಣೆ ನಡೆಯಲಿದೆ.

## ಖರ್ಗೆ ವಿರುದ್ಧ ಅವಹೇಳನಕಾರಿ ಪದ ಬಳಕೆ: ಸೂಲಿಬೆಲೆ ವಿರುದ್ಧ ಎಫ್‌ಐಆರ್ ದಾಖಲು



ಬೆಂಗಳೂರು: ಯುವ ಬ್ರಿಗೇಡ್ ಸಂಸ್ಥಾಪಕ ಚಕ್ರವರ್ತಿ ಸೂಲಿಬೆಲೆ ವಿರುದ್ಧ ಅಟ್ರಾಸಿಟಿ ಕಾಯ್ದೆಯಡಿ ರಾಯಚೂರು ಪೊಲೀಸರು ಎಫ್‌ಐಆರ್ ದಾಖಲಿಸಿದ್ದಾರೆ.

ಮಲ್ಲಿಕಾರ್ಜುನ ಖರ್ಗೆ ವಿರುದ್ಧ ಚಕ್ರವರ್ತಿ ಸೂಲಿಬೆಲೆ, ಅಯೋಗ್ಯ ಪದವನ್ನು ಬಳಕೆ ಮಾಡಿದ್ದರು. ಇದೇ ಪ್ರಕರಣದಲ್ಲಿ ರಾಯಚೂರು ಪೊಲೀಸರು ಅವರ ವಿರುದ್ಧ ಅಟ್ರಾಸಿಟಿ ಕಾಯ್ದೆಯಡಿ ಪ್ರಕರಣ ದಾಖಲಿಸಿದ್ದಾರೆ.

ಕಳೆದ ನಾಲ್ಕು ದಿನಗಳ ಹಿಂದೆ ರಾಯಚೂರಿನ ಪೊಲೀಸರು ಸೂಲಿಬೆಲೆ ಅವರಿಗೆ ನೋಟಿಸ್ ನೀಡಲೆಂದು ಬೆಂಗಳೂರಿಗೆ ಬಂದಿದ್ದರು. ಬಸವೇಶ್ವರ ನಗರದಲ್ಲಿರುವ ಅವರ ನಿವಾಸಕ್ಕೆ ತೆರಳಿ ನೋಟಿಸ್ ನೀಡಬೇಕೆಂದು ಬಂದಿದ್ದರು. ಆದರೆ ಈ ಸಮಯದಲ್ಲಿ ಅವರು ಮನೆಯಲ್ಲಿ ಇರಲಿಲ್ಲ. ರಾಮಮಂದಿರ ಉದ್ಘಾನೆಯ ಹಿನ್ನಲೆ ಅವರು ಅಯೋಧ್ಯೆಗೆ ಹೋಗಿದ್ದರು. ಚಕ್ರವರ್ತಿ ಅಯೋಧ್ಯೆಯಲ್ಲಿ ಇದ್ದಿದ್ದರಿಂದ ಅವರ ಮನೆಗೆ ನೋಟಿಸ್ ನೀಡಿ ಪೊಲೀಸರು ರಾಯಚೂರಿಗೆ ವಾಪಸ್ ಆಗಿದ್ದರು. ಇದೀಗ ಅವರ ವಿರುದ್ಧ ರಾಯಚೂರು ಪೊಲೀಸರು ಎಫ್‌ಐಆರ್ ದಾಖಲಿಸಿದ್ದಾರೆ. ಚಕ್ರವರ್ತಿ ಸೂಲಿಬೆಲೆ ಈ ಪ್ರಕರಣದಲ್ಲಿ ನಿರೀಕ್ಷಣಾ ಜಾಮೀನು ಕೋರಲು ಮುಂದಾಗಿದ್ದಾರೆ.

## ರಾಷ್ಟ್ರಪತಿಗಳ ಬಗ್ಗೆ ಏಕವಚನ ಪ್ರಯೋಗ: ಸಿಎಂ ಸಿದ್ದರಾಮಯ್ಯ ವಿಷಾದ



ಬೆಂಗಳೂರು: ರಾಷ್ಟ್ರಪತಿ ದ್ರೌಪದಿ ಮುರ್ಮು ಅವರ ಬಗ್ಗೆ ಏಕವಚನ ಪ್ರಯೋಗ ಮಾಡಿದ್ದಕ್ಕೆ ತೀವ್ರ ಆಕ್ಷೇಪ ವ್ಯಕ್ತವಾದ ನಂತರ ಸಿಎಂ ಸಿದ್ದರಾಮಯ್ಯ ಅವರು ಕ್ಷಮೆಯಾಚಿಸಿದ್ದಾರೆ. ರಾಷ್ಟ್ರದ ಪ್ರಥಮ ಪ್ರಜೆ ಕುರಿತು ಏಕವಚನ ಬಳಸಿದ್ದಕ್ಕೆ ವಿಪಕ್ಷ ನಾಯಕರು ಆಕ್ರೋಶ ಹೊರಹಾಕಿದ ಹಿನ್ನೆಲೆಯಲ್ಲಿ ಸಿದ್ದರಾಮಯ್ಯ ಅವರು ಸೋಷಿಯಲ್ ಮೀಡಿಯಾ ಮೂಲಕ ವಿಷಾದ ವ್ಯಕ್ತಪಡಿಸಿದ್ದಾರೆ.

ದಲಿತ ಸಮುದಾಯಕ್ಕೆ ಸೇರಿದವರು ಎಂಬ ಕಾರಣಕ್ಕಾಗಿ ರಾಷ್ಟ್ರಪತಿಗಳಾಗಿರುವ ದ್ರೌಪದಿ ಮುರ್ಮು ಅವರಿಗೆ ಸಂಸತ್ ಭವನ ಉದ್ಘಾಟನೆಗೆ ಆಹ್ವಾನ ನೀಡದೆ ಬಿಜೆಪಿ ನಾಯಕರು ಅವಮಾನಿಸಿರುವುದು ನನಗೆ ತೀವ್ರ ನೋವು ಉಂಟುಮಾಡಿದ್ದು, ಮಾತ್ರವಲ್ಲ ನನ್ನಲ್ಲಿ ಆಕ್ರೋಶ ಹುಟ್ಟಿಸಿತ್ತು. ಶೋಷಿತರ ಜಾಗೃತಿ ಸಮಾವೇಶದಲ್ಲಿ ಸ್ವಲ್ಪ ಭಾವುಕನಾಗಿ ಈ ಆಕ್ರೋಶವನ್ನು ಹೊರಹಾಕುವ ಭರದಲ್ಲಿ ಬಾಯ್ತಪ್ಪಿನಿಂದ ರಾಷ್ಟ್ರಪತಿಗಳನ್ನು ಏಕವಚನದಲ್ಲಿ ಸಂಬೋಧಿಸಿದೆ.

ಗ್ರಾಮೀಣ ಪ್ರದೇಶದಿಂದ ಬಂದ ನನ್ನಂತಹವರು ಅಪ್ಪ–ಅಮ್ಮ ಸೇರಿದಂತೆ ಹಿರಿಯರನ್ನು ಕೂಡ ಏಕವಚನದಲ್ಲಿ ಸಂಬೋಧಿಸುವುದು ರೂಢಿ. ಗೌರವಾನ್ವಿತ ರಾಷ್ಟ್ರಪತಿಗಳು ನನ್ನಂತೆಯೇ ಶೋಷಿತ ಸಮಾಜದಿಂದ ಬಂದವರು, ಅವರ ಬಗ್ಗೆ ಅಪಾರ ಗೌರವವಿದೆ. ಅವರನ್ನು ಏಕವಚನದಲ್ಲಿ ಸಂಬೋಧಿಸಬಾರದಿತ್ತು. ಅಚಾತುರ್ಯದಿಂದ ಆಗಿರುವ ಈ ಪ್ರಮಾದಕ್ಕೆ ವಿಷಾದ ವ್ಯಕ್ತಪಡಿಸುತ್ತೇನೆ ಎಂದು ತಿಳಿಸಿದ್ದಾರೆ.

## ಬೆಂಗಳೂರು ಶಿಕ್ಷಕರ ಕ್ಷೇತ್ರದ ಉಪ ಚುನಾವಣೆಗೆ ನಾಮಪತ್ರ ಸಲ್ಲಿಸಿದ ಪುಟ್ಟಣ್ಣ

### ಭಾರೀ ಬಹುಮತದಿಂದ ಗೆಲುವು; ಸಚಿವರಾದ ಜಮೀರ್ ಅಹಮದ್ ಖಾನ್, ಡಾ. ಎಂ.ಸಿ. ಸುಧಾಕರ್ ವಿಶ್ವಾಸ



ಬೆಂಗಳೂರು: ಬೆಂಗಳೂರು ಶಿಕ್ಷಕರ ಕ್ಷೇತ್ರದಿಂದ ವಿಧಾನ ಪರಿಷತ್ ಗೆ ಫೆಬ್ರವರಿ 16 ರಂದು ನಡೆಯಲಿರುವ ಉಪ ಚುನಾವಣೆಗೆ ಕಾಂಗ್ರೆಸ್ ಅಭ್ಯರ್ಥಿಯಾಗಿ ಪುಟ್ಟಣ್ಣ ನಾಮಪತ್ರ ಸಲ್ಲಿಸಿದರು.

ಶಾಂತಿನಗರದ ಎಂಟಿಸಿ ಬಸ್ ನಿಲ್ದಾನದಲ್ಲಿರುವ ಚುನಾವಣಾಧಿಕಾರಿಗಳ ಕಚೇರಿಯಲ್ಲಿ ವಸತಿ ಮತ್ತು ವಕ್ಫ್ ಸಚಿವ ಜಮೀರ್ ಅಹಮದ್ ಖಾನ್, ಉನ್ನತ ಶಿಕ್ಷಣ ಸಚಿವ ಡಾ. ಎಂ.ಸಿ. ಸುಧಾಕರ್, ಮಾಗಡಿ ಶಾಸಕ ಬಾಲಕೃಷ್ಣ ಮತ್ತಿತರರ ಸಮ್ಮುಖದಲ್ಲಿ ನಾಮಪತ್ರ ಸಲ್ಲಿಸಿದರು. ಪಾದಯಾತ್ರೆಯಲ್ಲಿ ಸಾಗಿ ಬಂದ ಪುಟ್ಟಣ್ಣ ಅವರು ನಂತರ ಪಕ್ಷದ ಕಾರ್ಯಕರ್ತರು ಮತ್ತು ಮುಖಂಡರ ಅಮಿತೋತ್ಸಾಹದ ನಡುವೆ ತಮ್ಮ ಉಮೇದುವಾರಿಕೆ ಸಲ್ಲಿಸಿದರು.

ವಿಧಾನಪರಿಷತ್ ಸದಸ್ಯರಾಗಿದ್ದ ಪುಟ್ಟಣ್ಣ ಅವರು ಕಳೆದ ವಿಧಾನಸಭಾ ಚುನಾವಣೆಯಲ್ಲಿ ಸ್ಪರ್ಧಿಸಲು ರಾಜೀನಾಮೆ ಸಲ್ಲಿಸಿದ್ದರು. ಇದೀಗ ಅವರಿಂದ ತೆರವಾಗಿರುವ ಸ್ಥಾನಕ್ಕೆ ಸ್ವತಃ ಪುಟ್ಟಣ್ಣ ಅವರೇ ಕಣಕ್ಕಿಳಿದಿದ್ದಾರೆ. ಈ ಸಂದರ್ಭದಲ್ಲಿ ಸಚಿವ ಜಮೀರ್ ಅಹಮದ್ ಖಾನ್ ಮಾತನಾಡಿ, ಪುಟ್ಟಣ್ಣ ಅವರು ಶಿಕ್ಷಕರ ಸಮಸ್ಯೆಗಳಿಗೆ ಪರಿಣಾಮಕಾರಿಯಾಗಿ ಸ್ಪಂದಿಸುವ ನಾಯಕರಾಗಿದ್ದು, ಅವರು ಈ ಬಾರಿ ಚುನಾವಣೆಯಲ್ಲಿ ಭಾರೀ ಬಹುಮತದಿಂದ ಗೆಲುವು ಸಾಧಿಸಲಿದ್ದಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದರು. ಸಚಿವ ಸುಧಾಕರ್ ಮಾತನಾಡಿ, ಈಗಾಗಲೇ ನಾಲ್ಕು ಬಾರಿ ಮೇಲ್ಮನೆಗೆ ಆಯ್ಕೆಯಾಗಿದ್ದ ಪುಟ್ಟಣ್ಣ ಅವರು ಶಿಕ್ಷಕರ ಹಲವಾರು ಸಮಸ್ಯೆಗಳನ್ನು ಬಗೆಹರಿಸಿದ್ದಾರೆ. ಅತಿಥಿ ಉಪನ್ಯಾಸಕರ ಸಮಸ್ಯೆಗಳನ್ನು ಸರ್ಕಾರ ಬಗೆಹರಿಸಿದೆ. ಶಿಕ್ಷಕರು ಮತ್ತು ಶಿಕ್ಷಣದ ಅಭಿವೃದ್ಧಿಗೆ ಸರ್ಕಾರ ಬದ್ಧವಾಗಿದೆ. ಪಟ್ಟಣ್ಣ ಗೆಲುವು ನಿಶ್ಚಿತ ಎಂದು ಹೇಳಿದರು.

ಪುಟ್ಟಣ್ಣ ಮಾತನಾಡಿ, ಶಿಕ್ಷಕರ ಸಮಸ್ಯೆಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸ್ಪಂದಿಸುತ್ತಿದ್ದು, ಮುಂಬರುವ ದಿನಗಳಲ್ಲಿ ಶಿಕ್ಷಕ ಸಮುದಾಯದ ಪ್ರತಿಯೊಂದು ಬೇಡಿಕೆಗಳನ್ನು ಈಡೇರಿಸಲು ಆದ್ಯತೆ ನೀಡುತ್ತೇವೆ. ಶಿಕ್ಷಕ ಸಮುದಾಯ ಮತ್ತೊಮ್ಮೆ ತಮ್ಮನ್ನು ಬೆಂಬಲಿಸಲಿದೆ ಎಂದು ಹೇಳಿದರು. ಶಾಸಕ ಬಾಲಕೃಷ್ಣ ಮಾತನಾಡಿ, ಪುಟ್ಟಣ್ಣ ಸದಾ ಶಿಕ್ಷಕರ ಬಗ್ಗೆ ತುಡಿತ ಮತ್ತು ಕಾಳಜಿ ಇಟ್ಟುಕೊಂಡು ಕಾರ್ಯನಿರ್ವಹಿಸುತ್ತಿದೆ. ಪುಟ್ಟಣ್ಣ ಅವರು ಶಾಸಕರಾಗಲು ಪ್ರಯತ್ನಿಸಿದರು. ಆದರೆ ಶಿಕ್ಷಕರ ಸೆಳೆತ ಅವರನ್ನು ಮತ್ತೆ ಶಿಕ್ಷಕರ ಕ್ಷೇತ್ರಕ್ಕೆ ವಾಪಸ್ ಕರೆತಂದಿದೆ ಎಂದರು.

ಪದವೀಧರ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿಯಾದ ಆನೇಕಲ್ ರಾಮೋಜಿಗೌಡ ಮಾತನಾಡಿ, ಪಟ್ಟಣ್ಣ ಜನಾನುರಾಗಿ. ಅವರ ಗೆಲುವಿಗೆ ಪ್ರತಿಯೊಬ್ಬರೂ ಶ್ರಮಿಸುತ್ತೇವೆ ಎಂದರು.

## ಬಿಡಿಎ ನೂತನ ಅಧ್ಯಕ್ಷರಾಗಿ ಎನ್ .ಎ. ಹ್ಯಾರಿಸ್ ಅಧಿಕಾರ ಸ್ವೀಕಾರ



ಬೆಂಗಳೂರು: ಬೆಂಗಳೂರು ನಗರಾಭಿವೃದ್ಧಿ ಪ್ರಾಧಿಕಾರದ ನೂತನ ಅಧ್ಯಕ್ಷರಾಗಿ ಶಾಂತಿನಗರ ಶಾಸಕ ಎನ್.ಎ ಹ್ಯಾರಿಸ್ ನೇಮಕಗೊಂಡಿದ್ದಾರೆ.

ನಿಗಮ ಮಂಡಳಿ ಅಧ್ಯಕ್ಷರ ಮೊದಲ ಪಟ್ಟಿಯಲ್ಲಿ ಹ್ಯಾರೀಸ್ ಆಯ್ಕೆ ಆದರು. ಒಟ್ಟು 36 ಶಾಸಕರಿಗೆ ವಿವಿಧ ನಿಗಮ–ಮಂಡಳಿಗಳಲ್ಲಿ ಸ್ಥಾನ ಸಿಕ್ಕಿದ್ದು ಬಿಡಿಎ ಕೇಂದ್ರ ಕಚೇರಿಯಲ್ಲಿ ಡಿಸಿಎಂ ಡಿ.ಕೆ. ಶಿವಕುಮಾರ್ ಅವರ ಸಮ್ಮುಖದಲ್ಲಿ ಶಾಸಕ ಎನ್.ಎ. ಹ್ಯಾರಿಸ್ ಬಿಡಿಎ ನೂತನ ಅಧ್ಯಕ್ಷರಾಗಿ ಅಧಿಕಾರ ವಹಿಸಿಕೊಂಡರು. ಶಾಸಕ ಜಮೀರ್ ಅಹ್ಮದ್ ಕೂಡ ಕಚೇರಿಗೆ ಆಗಮಿಸಿ ಶುಭ ಕೋರಿದರು.

ಇನ್ನು ಈ ಬಗ್ಗೆ ಮಾತನಾಡಿದ ಹ್ಯಾರಿಸ್, ಜವಾಬ್ದಾರಿಯನ್ನ ನನಗೆ ವಹಿಸಿದ್ದಾರೆ. ಬೆಂಗಳೂರು ನಗರದ ಬಗ್ಗೆ ನನಗೆ ಗೊತ್ತಿದೆ. ಈಗಾಗಲೇ ನಾಲ್ಕು ಬಾರಿ ಶಾಸಕನಾಗಿ ಕೆಲಸ ಮಾಡಿದ್ದೇನೆ.

ಟ್ರಾನ್ಸ್ಪರೆನ್ಸಿ ತರುವಲ್ಲಿ ಪ್ರಯತ್ನಿಸುತ್ತೇನೆ. ಬಿಡಿಎಯನ್ನ ಜನಸ್ನೇಹಿ ಮಾಡಲು ಯತ್ನಿಸುತ್ತೇನೆ. ಸಿಎಂ, ಡಿಸಿಎಂ, ಬಿಡಿಎ ಜನಸ್ನೇಹಿ ಮಾಡಿ ಎಂದಿದ್ದಾರೆ. ಹೊಸ ಲೇಔಟ್ ಬಗ್ಗೆಯೂ ಯೋಜನೆ ಇದೆ ಎಂದು ತಿಳಿಸಿದರು.

ಶಾಂತಿನಗರ ಅಭಿವೃದ್ಧಿಯಾಗಿಲ್ಲ ಈಗ ನಿಮ್ಮನ್ನ ಬಿಡಿಎ ಅಧ್ಯಕ್ಷರನ್ನಾಗಿ ಮಾಡಿರುವುದಕ್ಕೆ ವಿರೋಧ ವ್ಯಕ್ತವಾಗಿದೆ ಎಂಬ ಮಾಧ್ಯಮಗಳ ಪ್ರಶ್ನೆಗೆ ಉತ್ತರಿಸಿದ ಹ್ಯಾರಿಸ್, ರಾಜಕೀಯವಾಗಿ ಮಾತನಾಡಿದ್ರೆ ನಾನು ರಾಜಕೀಯ ಮಾತನಾಡ್ತೇನೆ.

ಬೆಂಗಳೂರು ಎಲ್ಲವೂ ಬಿಡಿಎ ನಲ್ಲಿ ಬರಲ್ಲ. ಎಲ್ಲರ ಸಲಹೆಯನ್ನ ತೆಗೆದುಕೊಂಡು ಕೆಲಸ ಮಾಡ್ತೇನೆ. ಬಿಡಿಎಯನ್ನ ಇನ್ನಷ್ಟು ಅಭಿವೃದ್ಧಿ ಮಾಡ್ತೇವೆ. ಸಂಪನ್ಮೂಲಗಳ ಕ್ರೋಢಿಕರಣಕ್ಕೆ ಮುಂದಾಗ್ತೇವೆ ಎಂದರು.

## ಮಧ್ಯರಾತ್ರಿ ಬಾಲ ಬಿಚ್ಚೋ ಆಟೋ ಚಾಲಕರಿಗೆ ಬಿಸಿ ಮುಟ್ಟಿಸಲು ಪೊಲೀಸ್ ಇಲಾಖೆ ಹೊಸ ಅಸ್ತ್ರ



ಬೆಂಗಳೂರು: ಮಧ್ಯರಾತ್ರಿ ಬಾಲ ಬಿಚ್ಚೋ ಆಟೋ ಚಾಲಕರಿಗೆ ಬಿಸಿ ಮುಟ್ಟಿಸಲು ಪೊಲೀಸ್ ಇಲಾಖೆ ಸಖತ್ ಪ್ಲಾನ್ ಮಾಡಿದೆ. ಆ ಮೂಲಕ ರಾತ್ರಿ ಹೊತ್ತು ಒಂಟಿಯಾಗಿ ಪ್ರಯಾಣಿಸುವ ಹೆಣ್ಣುಮಕ್ಕಳಿಗೆ ಗುಡ್ ನ್ಯೂಸ್ ಕೊಟ್ಟಿದೆ. ರಿಕ್ಷಾದಲ್ಲಿ ಪ್ರಯಾಣಿಸುವ ಹೆಣ್ಣುಮಕ್ಕಳಿಗೆ ಯುಪಿಸ್ ನಂಬರ್ ತಕ್ಷಣ ಹೆಲ್ಪ್ ಮಾಡಲಿದೆ.

ಏನಿದು ಯುಪಿಎಸ್? ಹೇಗೆ ಕಾರ್ಯನಿರ್ವಹಿಸುತ್ತೆ? ಮೆಜೆಸ್ಟಿಕ್ ಸುತ್ತ ಮುತ್ತಲ ಆಟೋ ಡ್ರೈವರ್ ಗಳಿಗೆ ಯುಪಿಎಸ್ ನಂಬರ್ ಕೊಡಲಾಗಿದೆ. ಸ್ಥಳೀಯ ಠಾಣೆಯಲ್ಲಿ ಆಟೋ ಚಾಲಕರ ಸಂಪೂರ್ಣ ಮಾಹಿತಿ ಪಡೆದುಕೊಂಡು ನಂತರ ಅಂತಹ ಆಟೋ ಚಾಲಕರಿಗೆ ಯುಪಿಎಸ್ ನಂಬರ್ ನೀಡಲಾಗಿದೆ. ಚಾಲಕರು ಆ ಯುಪಿಎಸ್ ನಂಬರನ್ನ ಪ್ರಯಾಣಿಕರಿಗೆ ಕಾಣುವಂತೆ ಹಾಕಬೇಕು.

ಆಟೋದ ಮುಂಭಾಗ ಹಾಗೂ ಹಿಂಭಾಗದಲ್ಲಿ ಹಾಕಬೇಕು. ಯುಪಿಎಸ್ ನಂಬರ್ 2–3 ಡಿಜಿಟ್ ಇರೋದರಿಂದ ನೆನೆಪಿಟ್ಟುಕೊಳ್ಳೋದು ಸುಲಭವಾಗಿದೆ.

ಮಹಿಳೆಯರೇ ನೆನಪಿಟ್ಟುಕೊಳ್ಳಿ: ಮಹಿಳೆಯರು ರಾತ್ರಿ ಹೊತ್ತು ಮೆಜೆಸ್ಟಿಕ್ ನಲ್ಲಿ ಇಂತಹ ಯುಪಿಎಸ್ ನಂಬರ್ ಇರೋ ಆಟೋ ಹತ್ತೋದು ಸುರಕ್ಷಿತ. ಏನಾದ್ರೂ ಪ್ರಯಾಣದ ವೇಳೆ ತೊಂದ್ರೆಯಾದ್ರೆ ಪೊಲೀಸರಿಗೆ ಈ ಯುಪಿಎಸ್ ನಂಬರ್ ಹೇಳಿದರೆ ಸಾಕು.

ಕ್ಷಣಮಾತ್ರದಲ್ಲಿಯೇ ಆ ಆಟೋ ಚಾಲಕನ ಸಂಪೂರ್ಣ ಜಾತಕ ತೆರೆದುಕೊಳ್ಳಲಿದೆ. ಮಾತ್ರವಲ್ಲದೆ, ಕಿಡಿಗೇಡಿತನ ಪ್ರದರ್ಶನ ಮಾಡಿದ ಆಟೋ ಚಾಲಕರನ್ನ ಪತ್ತೆ ಹಚ್ಚೋದು ಪೊಲೀಸರಿಗೆ ಸುಲಭವಾಗಲಿದೆ.

## ಬಿಜೆಪಿ ಹೊಸ ಗ್ಯಾರೆಂಟಿ ಘೋಷಿಸಿದ ಬಸವರಾಜ ಬೊಮ್ಮಾಯಿ

ಕೋಲಾರ : ರಾಜ್ಯದಲ್ಲಿ 28 ಲೋಕಸಭಾ ಕ್ಷೇತ್ರದಲ್ಲಿ ಬಿಜೆಪಿ ಗೆಲುವು ಸಾಧಿಸಿದರೆ ಈ ಸರ್ಕಾರವನ್ನು ಒಂದು ತಿಂಗಳಲ್ಲಿ ಮನೆಗೆ ಕಳುಹಿಸುವ ಗ್ಯಾರೆಂಟಿ ನಾವು ಕೊಡುತ್ತೇವೆ. ಕಾಂಗ್ರೆಸ್‌ನ ಐದು ಗ್ಯಾರೆಂಟಿಗೆ ನಮ್ಮದು ಒಂದೇ ಗ್ಯಾರೆಂಟಿ ಎಂದು ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಹೇಳಿದ್ದಾರೆ.

ರಾಜ್ಯ ಸರ್ಕಾರದ ವೈಫಲ್ಯಗಳ ವಿರುದ್ಧ ಬಿಜೆಪಿ ವತಿಯಿಂದ ಕೋಲಾರದಲ್ಲಿ ಹಮ್ಮಿಕೊಂಡಿದ್ದ ಪ್ರತಿಭಟನೆಯಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ರಾಜ್ಯ ಸರ್ಕಾರ ಅನ್ನಭಾಗ್ಯದ ಬಗ್ಗೆ ಮಾತನಾಡುತ್ತದೆ. ಆದರೆ, ಅನ್ನ ಕೊಡುವಂತ ರೈತನ ಬಗ್ಗೆ ಯಾವುದೇ ರೀತಿಯ ಕಾಳಜಿ



ಇಲ್ಲ. ಗ್ಯಾರೆಂಟಿಗಳ ಬಗ್ಗೆ ಹೇಳಿದ್ದೇ ಹೇಳಿದ್ದು, ಚುನಾವಣೆಗೂ ಮುನ್ನ 10 ಕೆಜಿ ಅಕ್ಕಿ ಕೊಡುವುದಾಗಿ ಹೇಳಿದ್ದರು. ಈಗ ಕೊಡುತ್ತಿರುವ ಐದು ಕೆಜಿ ಕೂಡ ಕೇಂದ್ರದಿಂದ ಬರುತ್ತಿದೆ. ಇದು ಜನರಿಗೆ ಮಾಡುತ್ತಿರುವ ಮೋಸ. ಹೊಸ ರೇಷನ್ ಕಾರ್ಡ್ ಕೊಡುತ್ತಿಲ್ಲ. ರೇಷನ್ ಕಾರ್ಡ್ ಇಲ್ಲದಿದ್ದರೆ ಗೃಹ ಲಕ್ಷ್ಮೀ ಇಲ್ಲ ಎಂದು ಹೇಳಿದರು.

200 ಯುನಿಟ್ ಫ್ರಿ ವಿದ್ಯುತ್ ಅಂತ ಹೇಳಿದ್ದರು. ಆದರೆ, ರಾಜ್ಯದಲ್ಲಿ ಒಬ್ಬರಿಗೆ 200 ಯುನಿಟ್ ವಿದ್ಯುತ್ ನೀಡಿರುವ ದಾಖಲೆ ಇದ್ದರೆ ಕೊಡಿ, ಎಲ್ಲ ಬೆಲೆ ಹೆಚ್ಚಳ ಮಾಡಿದ್ದಾರೆ. ಸಾರಾಯಿ ಬೆಲೆ ಹೆಚ್ಚಳ ಮಾಡಿ, ಅವರ ದುಡ್ಡಿನಿಂದ ಸರ್ಕಾರ ನಡೆಸುತ್ತಿದ್ದಾರೆ. ಗ್ಯಾರೆಂಟಿ ಹೆಸರಿನಲ್ಲಿ ಮೋಸ ಮಾಡುತ್ತಿದ್ದಾರೆ. ಬಸ್‌ನಲ್ಲಿ ವಿದ್ಯಾರ್ಥಿಗಳಿಗೆ ಕೂಡಲು ಸೀಟ್ ಇಲ್ಲ. ಸರ್ಕಾರ ದಿವಾಳಿಯಾಗಿದೆ. ನಾವು ಇದ್ದಾಗ ಸರಪ್ಲಸ್ ಬಜೆಟ್ ನೀಡಿದ್ದೇವು. ಇವರು ಬಂದ ಮೇಲೆ 8 ಸಾವಿರ ಕೋಟಿ ಹೆಚ್ಚುವರಿ ಸಾಲ ಮಾಡಿದ್ದಾರೆ. ಈಗ ಪ್ರತಿಯೊಬ್ಬರ ತಲೆಯ ಮೇಲೆ ಒಂದು ಲಕ್ಷ ರೂ. ಸಾಲ ಇದೆ. ಅಧಿಕಾರಿಗಳ ವರ್ಗಾವಣೆ ಹರಾಜು ಆಗುತ್ತಿದೆ ಎಂದು ವಾಗ್ದಾಳಿ ನಡೆಸಿದರು.

ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಸಂಪೂರ್ಣ ಹಾಳಾಗಿದೆ. ಪೊಲಿಸರು ಹಣ ಕೊಟ್ಟು ಬಂದಿರುವುದರಿಂದ ಅವರು ಹಣ ವಸೂಲಿಗೆ ನಿಂತಿದ್ದಾರೆ. ದಲಿತ ಮಹಿಳೆಯನ್ನು ಬೆತ್ತಲೆ ಮಾಡಲಾಗಿದ್ದು, ತಪ್ಪಿತಸ್ಥರಿಗೆ ಶಿಕ್ಷೆ ನೀಡಲಿಲ್ಲ. ಅಲ್ಪ ಸಂಖ್ಯಾತ ಮಹಿಳೆಯ ಮೇಲೆ ಸಾಮೂಹಿಕ ಅತ್ಯಾಚಾರ ನಡೆದರೂ ಅದೇ ಜಿಲ್ಲೆಗೆ ಭೇಟಿ ನೀಡಿದರೂ, ಅವಳಿಗೆ ಸಿಎಂ ಸಾಂತ್ವನ ಕೂಡ ಹೇಳಲಿಲ್ಲ. ಇದೇನಾ ಇವರ ಅಲ್ಪ ಸಂಖ್ಯಾತ, ದಲಿತರಿಗೆ ಕೊಡುವ ಗೌರವ ಎಂದು ಪ್ರಶ್ನಿಸಿದರು.

## ಸಾಧಕ ವಿದ್ಯಾರ್ಥಿಗಳಿಗೆ ಡಾ.ಪ್ರಭಾಕರ ಕೋರೆಯವರಿಂದ ಅಭಿನಂದನೆ

ಲಿಂಗರಾಜ ಕಾಲೇಜಿನ ಎಂ.ಕಾಂ. ಮೊದಲ ಸೆಮಿಸ್ಟರ್‌ದಲ್ಲಿ ಓದುತ್ತಿರುವ ಸಾಹಿಲ್ ರಾಜಾರಾಮ್ ಜಾಧವ್ ಹಾಗೂ ಬಿ.ಕಾಂ. ಮೂರನೇ ಸೆಮಿಸ್ಟರ್‌ದಲ್ಲಿ ಓದುತ್ತಿರುವ ಸುಮಿತ್ ಸುಧೀರ್ ಮುತಗೇಕರ ಇಟಲಿಯ ಲೆಗನಾನ್‌ದಲ್ಲಿ ಮುಂದಿನ ತಿಂಗಳು ಜರುಗಲಿರುವ ಪ್ಯಾರಾ ಸ್ವಿಮಿಂಗ್ ವರ್ಲ್ಡ್ ಸಿರಿಜ್‌ದಲ್ಲಿ 100 ಮೀ.ಫ್ರೀ ಸ್ಟಾಯಲ್, 50 ಮೀ. ಮತ್ತು 100 ಮೀ. ಬಟರ್ 200 ಮೀ.ವೈಯುಕ್ತಿಕ ಈಜು ಸ್ಪರ್ಧೆಯಲ್ಲಿ ಪಾಲ್ಗೊಳ್ಳುತ್ತಿದ್ದಾರೆ.

ಅಂತೆಯೆ ಬಿ.ಕಾಂ.2ನೇ ವರ್ಷದ ಶ್ರೀನಾಥ ದಳವಿ, ಬಿಎ 1ನೇ ವರ್ಷದಲ್ಲಿ ಓದುತ್ತಿರುವ ಪ್ರವೀಣ ಕೆ. ಆಸ್ಸಾಂದ ಗೋಹಾಟಿಯಲ್ಲಿ ಮುಂದಿನ ತಿಂಗಳು ಜರುಗಲಿರುವ ಖೇಲೋ



ಇಂಡಿಯಾ ಗೇಮ್ಸ್‌ದಲ್ಲಿ 1 400 ರೀಲೆಯಲ್ಲಿ ಕಾಲೇಜನ್ನು ಪ್ರತಿನಿಧಿಸುತ್ತಿದ್ದಾರೆ.

ವಿದ್ಯಾರ್ಥಿಗಳ ಈ ಸಾಧನೆಗೆ ಕೆಎಲ್ಇ ಸಂಸ್ಥೆಯ ಕಾರ್ಯಾಧ್ಯಕ್ಷರಾದ ಡಾ.ಪ್ರಭಾಕರ ಕೋರೆಯವರು ಅಭಿನಂದಿಸಿದ್ದಾರೆ. ಈ ಸಂದರ್ಭದಲ್ಲಿ ಕಾಲೇಜಿನ ಪ್ರಾಚಾರ್ಯ ಡಾ.ಎಚ್.ಎಸ್.ಮೇಲಿನಮನಿ, ದೈಹಿಕ ನಿರ್ದೇಶಕ ಡಾ.ಸಿ.ರಾಮರಾವ್, ಉಮೇಶ ಕಲಘಟಗಿ, ಮಾಜಿ ಶಾಸಕ ಸಂಜಯ ಪಾಟೀಲ ಉಪಸ್ಥಿತರಿದ್ದರು.

# ಜಿಲ್ಲಾಧಿಕಾರಿ ಅಮಾನತಿಗೆ ಕುಮಾರಸ್ವಾಮಿ ಆಗ್ರಹ

ಕೆರಗೋಡು ಗ್ರಾಮದಲ್ಲಿ ಹನುಮಧ್ವಜ ಇಳಿಸಿ ಶಾಂತಿ ಕದಡಲು ಜಿಲ್ಲಾಡಳಿತವೇ ನೇರ ಕಾರಣ ಎಂದು ಗಂಭೀರ ಆರೋಪ ಮಾಡಿದ ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ ಅವರು, ಕೂಡಲೇ ಮಂಡ್ಯ ಜಿಲ್ಲಾಧಿಕಾರಿಯನ್ನು ಅಮಾನತು ಮಾಡಬೇಕು ಎಂದು ಒತ್ತಾಯಿಸಿದರು.

ಕೆರಗೋಡು ಪ್ರಕರಣಕ್ಕೆ ಸಂಬಂಧಿಸಿ ಮಂಡ್ಯದಲ್ಲಿ ಜೆಡಿಎಸ್ ಮತ್ತು ಬಿಜೆಪಿ ಜಂಟಿಯಾಗಿ ಆಯೋಜಿಸಿದ್ದ ಪ್ರತಿಭಟನೆಯಲ್ಲಿ ಮಾತನಾಡಿದ ಅವರು; ಶಾಂತಿಯಿಂದ ಇದ್ದ ಕೆರಗೋಡು ಗ್ರಾಮದಲ್ಲಿ ಅಶಾಂತಿ ಉಂಟಾಗಿದೆ. ಇದಕ್ಕೆ ಸರಕಾರ ಮತ್ತು ಜಿಲ್ಲಾಧಿಕಾರಿಯೇ ಹೊಣೆ ಎಂದು ದೂರಿದರು.

ನಾನು ಸರಕಾರಕ್ಕೆ ನೇರವಾಗಿ ಪ್ರಶ್ನೆ ಕೇಳುತ್ತೇನೆ. ಎಷ್ಟು ದಿನ ಈ ಉದ್ಧಟತನ? ಎಷ್ಟು ದಿನ ನಿಮ್ಮ ಆಟ? ಬಹಳ ದಿನ ನಡೆಯಲ್ಲ, ಎಚ್ಚರಿಕೆಯಿಂದ ಇರಿ ಎಂದ ಅವರು; ಪೊಲೀಸ್ ಅಧಿಕಾರಿಗಳು ಜವಾಬ್ದಾರಿ ವಹಿಸಿ ಕೆಲಸ ಮಾಡಬೇಕು. ಈ ಬಗ್ಗೆ ಶಾಂತಿ ಕಾಪಾಡುವಂತೆ ಜಿಲ್ಲಾಧಿಕಾರಿಗೆ ಮನವಿ ಮಾಡಿದ್ದೆ. ಗ್ರಾಮಸ್ಥರ ಜತೆ ಚರ್ಚೆ ಮಾಡಿ ತೀರ್ಮಾನ ಮಾಡಿ ಅಂತ ಹೇಳಿದ್ದೆ. ಆದರೆ, ಜಿಲ್ಲಾಧಿಕಾರಿ ಮಾಡಿದ್ದೇನು? ಕೆರಗೋಡು ಕೆಂಡವಾಗಿದೆ ಎಂದು ಅವರು ಆಕ್ರೋಶ ವ್ಯಕ್ತಪಡಿಸಿದರು.

ನಿಮ್ಮ ಪರವಾಗಿ ರಾಜ್ಯದಲ್ಲಿ ಪ್ರತಿಭಟನೆ ನಡೆಯುತ್ತಿದೆ. ಹನುಮಂತನ ಕೆಣಕಿ ಉಳಿದವರು ಯಾರೂ ಇಲ್ಲ. ರಾಜ್ಯದಲ್ಲಿ ಬರ ಪರಿಸ್ಥಿತಿ ಇದೆ. ಅದನ್ನು ಸರಿಪಡಿಸಿ. ರೈತರಿಗೆ ಪರಿಹಾರ ಕೊಡಿ. ಕೆರಗೋಡುನಲ್ಲಿ ನಡೆದ ಪ್ರಕರಣಕ್ಕೆ ಸಂಬಂಧಿಸಿ ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳಬೇಕು.

ಲಾಠಿ ಚಾರ್ಜ್ ಮಾಡುವ ಮೂಲಕ ಸರಕಾರ ದೌರ್ಜನ್ಯ ಪ್ರದರ್ಶನ ಮಾಡಿದೆ. ಜನ ವಿರೋಧಿ ಆಡಳಿತ ಮಾಡಲು ಜನರು ಇವರಿಗೆ ಅಧಿಕಾರ ಕೊಟ್ಟಿದ್ದಾರಾ? ಎಂದು ಅವರು ಖಾರವಾಗಿ ಪ್ರಶ್ನಿಸಿದರು.

ಕಾನೂನು ಉಲ್ಲಂಘನೆ ಮಾಡಿರುವ ಬಗ್ಗೆ ಸುಳ್ಳು ದಾಖಲೆ ಸೃಷ್ಟಿಸಿ ರಾಜಕೀಯ ಮಾಡಲಾಗಿದೆ.

ಅಧಿಕಾರಿಗಳನ್ನು ದುರುಪಯೋಗ ಮಾಡಿಕೊಂಡು ಈ ರೀತಿಯ ಕೆಲಸ ಮಾಡಲಾಗಿದೆ.

ನ್ಯಾಯ ಸಿಗುವವರೆಗೆ ನಾವು ಹೋರಾಟ ಮಾಡೋಣ. ರಾಷ್ಟ್ರಧ್ವಜ ಹಾರಿಸುವುದರಲ್ಲಿ ಕಾಂಗ್ರೆಸ್ ನವರಿಗಿಂತ ನಾವೇನು ಕಡಿಮೆ ಇಲ್ಲ ಎಂದು ಮಾಜಿ ಮುಖ್ಯಮಂತ್ರಿ ಅವರು ಹೇಳಿದರು.



ಗೌರಿಶಂಕರ ಟ್ರಸ್ಟ್ ನವರು ಧ್ವಜಸ್ತಂಭ ನಿರ್ಮಿಸಲು ಅನುಮತಿ ಕೋರಿದ್ದಾರೆ. ನಿಮಗಿಂತ ಹೆಚ್ಚು ಜವಾಬ್ದಾರಿ ನಮಗೆ ಇದೆ. ಸರ್ಕಾರಕ್ಕೆ ಜವಾಬ್ದಾರಿ ಇಲ್ಲ ಎಂದು ಅವರು ಕಿಡಿಕಾರಿದರು.

**ಸಿಎಂ ಸಿದ್ದರಾಮಯ್ಯ ಅವರಿಗೆ ಎಚ್ಚರಿಕೆ**

ಸಿದ್ದರಾಮಯ್ಯ ಅವರೇ ರಾಜಕಾರಣ ಮಾಡುತ್ತಿರುವುದು ನಿಮ್ಮ ಪಕ್ಷ. ಇದು ಎರಡೂ ನಿಮಿಷದಲ್ಲಿ ಬಗೆಹರಿಸುವ ವಿಷಯ..ಇಷ್ಟೊಂದು ದೊಡ್ಡ ಮಟ್ಟಕ್ಕೆ ತೆಗೆದುಕೊಂಡು ಹೋಗಿರೋದು ನಿಮ್ಮ ಪಕ್ಷದವರು. ರಾಜಕೀಯ ಮಾಡಿ ಲಾಭ ಪಡೆಯಬೇಕಿಲ್ಲ.

ಅಮಾಯಕರ ಮೇಲೆ ದೌರ್ಜನ್ಯ ಮಾಡಿದ್ದಾರೆ. ಪೊಲೀಸ್ ಇಲಾಖೆ, ಅಧಿಕಾರಿಗಳು ಪ್ರಚೋದನೆ ಕೊಟ್ಟಿದ್ದಾರೆ. ನಿಮಗೆ ಅಲ್ಪಸ್ವಲ್ಪ ಆಡಳಿತದ ಅನುಭವ ಇದೆ ಅಂತೀರಿ. 14 ಬಾರಿ ಬಜೆಟ್ ಕೊಟ್ಟವನು ಅಂತೀರಿ. ನಿಮಗೆ ಸ್ವಲ್ಪವಾದರೂ ಆಡಳಿತ ಪ್ರಜ್ಞೆ ಇದೆಯಾ? ಎಂದು ಕುಮಾರಸ್ವಾಮಿ ಅವರು ಆಕ್ರೋಶ ವ್ಯಕ್ತಪಡಿಸಿದರು.

ಲೋಕಸಭೆ ಚುನಾವಣೆ ಇಟ್ಟುಕೊಂಡು ಟಾರ್ಗೆಟ್ ಮಾಡಿದ್ದು ನಾವಲ್ಲ, ನೀವು. ಶೋಷಿತ ವರ್ಗಗಳ ಸಮಾವೇಶ ಮಾಡಿ ಮಟನ್ ಊಟ ಹಾಕಿಸಿದ್ದಾರೆ.

ಅದು ರಾಜಕೀಯ. ನೀವು ಎಷ್ಟು ವರ್ಷ ಮುಖ್ಯಮಂತ್ರಿ ಆಗಿದ್ದೀರಿ? 5 ವರ್ಷ ಪೂರ್ಣಾವಧಿ, ಈಗ 1 ವರ್ಷ. ಹಿಂದೆ ಡಿಸಿಎಂ ಆಗಿ ಎಷ್ಟು ವರ್ಷ ಇದ್ದಿರಿ? ನಿಮ್ಮನ್ನು ಯಾರು ಹಿಡಿದುಕೊಂಡಿದ್ದರು ಶೋಷಿತರ ಸಮಾಜ ಸರಿಪಡಿಸಬೇಡಿ ಎಂದು.

14 ಬಜೆಟ್ ಕೊಟ್ಟೆ ಅಂತ ಭಾಷಣ ಮಾಡ್ತಿರಾ, ಶೋಷಿತ ವರ್ಗಕ್ಕೆ ಏನು ಕೊಟ್ರಿ? ಎಂದು ಸಿಎಂ ಸಿದ್ದರಾಮಯ್ಯ ಅವರಿಗೆ ಟಾಂಗ್ ಕೊಟ್ಟರು ಕುಮಾರಸ್ವಾಮಿ.

**ಪೊಲೀಸರು ಫ್ಲೆಕ್ಸ್ ಗೆ ರಕ್ಷಣೆ ಕೊಡುತ್ತಿದ್ದಾರೆ!**

ಕೋರ್ಟ್ ಆದೇಶದ ಮೇಲೆ ಫ್ಲೆಕ್ಸ್ ಹಾಕುವುದಕ್ಕೆ ಅನುಮತಿ ಬೇಕು. ಹನುಮಧ್ವಜ ತೆಗೆದಿದ್ದೀರಿ, ರಸ್ತೆಯಲ್ಲಿ ಫ್ಲೆಕ್ಸ್ ಹಾಕಿದ್ದಿರಲ್ಲ, ಆ ಮಹಾನುಭಾವರು ಯಾರು? ಅದಕ್ಕೆ ಯಾರು ಅನುಮತಿ ಕೊಟ್ಟವರು? ಫ್ಲೆಕ್ಸ್ ತೆಗೆಯೋದಕ್ಕೆ ಹೋದವರ ಮೇಲೆ ಲಾಠಿಚಾರ್ಜ್ ಮಾಡೋದು ಎಷ್ಟು ಸರಿ? ಫ್ಲೆಕ್ಸ್ ಗಳಿಗೆ ಪೊಲೀಸರು ರಕ್ಷಣೆ ಕೊಡುತ್ತಿದ್ದಾರೆ. ಮುಂದೆ ರಸ್ತೆಯಲ್ಲಿ ಓಡಾಡದ ಪರಿಸ್ಥಿತಿಗೆ ಜನ ಬರುವ ಅಪಾಯ ಇದೆ.

ಕಾಂಗ್ರೆಸ್ ನವರು ಮಂಡ್ಯದಲ್ಲಿ ರಾಜಕಾರಣ ಶುರು ಮಾಡಿದ್ದಾರೆ. 35 ವರ್ಷಗಳ ಹಿಂದೆ ಇದೇ ಸಿದ್ದರಾಮಯ್ಯ ಅವರು ಧ್ವಜಸ್ತಂಭ ಉದ್ಘಾಟನೆ ಮಾಡಿದ್ದರು ಎಂದು ತಿರುಗೇಟು ಕೊಟ್ಟರು ಕುಮಾರಸ್ವಾಮಿ ಅವರು.

**ನಿಷೇಧಾಜ್ಞೆ ತೆಗೆಯಿರಿ ಎಂದು ಆಗ್ರಹ**

ಕೆರಗೋಡು ಗ್ರಾಮದಲ್ಲಿ 144 ಸೆಕ್ಷನ್ ವಾಪಸ್ ಪಡೆಯಿರಿ, ಶಾಂತಿ ಸ್ಥಾಪನೆಗೆ ನಾನು ಜವಾಬ್ದಾರಿ ಆಗುತ್ತೇನೆ.

ಇಲ್ಲ ನಾವೇ ಹೆಚ್ಚು ಜನ ಸೇರಿಸಿದರೆ ಏನಾಗುತ್ತದೆ, ಯೋಚನೆ ಮಾಡಿ. ರಾಜಕೀಯ ಬಿಟ್ಟು ಶಾಂತಿ ನೆಲೆಸುವಂತೆ ಮಾಡಲು ಕ್ರಮ ಕೈಗೊಳ್ಳಿ. ಜನರು ರೊಚ್ಚಿಗೆದ್ದರೆ ಯಾವ 144 ಸೆಕ್ಷನ್ ಉಳಿಯಲ್ಲ. ಮೊದಲು 144 ಸೆಕ್ಷನ್ ವಾಪಸ್ ಪಡೆಯಿರಿ ಎಂದು ಅವರು ಒತ್ತಾಯ ಮಾಡಿದರು.

ಬಿಜೆಪಿ ಹಿರಿಯ ನಾಯಕರಾದ ಸಿಟಿ ರವಿ, ಮಾಜಿ ಶಾಸಕರಾದ ಸುರೇಶ್ ಗೌಡ, ಸಿ.ಎಸ್.ಪುಟ್ಟರಾಜು, ಡಾ.ಕೆ.ಅನ್ನದಾನಿ ಸೇರಿ ಎರಡೂ ಪಕ್ಷಗಳ ರಾಜ್ಯ, ಜಿಲ್ಲಾ ಮುಖಂಡರು ಹಾಗೂ ಅಸಂಖ್ಯಾತ ಕಾರ್ಯಕರ್ತರು ಭಾಗಿಯಾಗಿದ್ದರು.

## ನಡು ರಸ್ತೆಯಲ್ಲಿ ಧಗಧಗನೇ ಹೊತ್ತಿ ಉರಿದ ವೋಲ್ವೋ ಎಲೆಕ್ಟ್ರಿಕ್ ಕಾರು



ಛತ್ತೀಸ್‌ಗಢ: ಹೆದ್ದಾರಿಯಲ್ಲಿ ಸಂಚರಿಸುವಾಗ ವೋಲ್ವೋ ಎಲೆಕ್ಟ್ರಿಕ್ ಕಾರು ಧಗಧಗನೇ ಹೊತ್ತಿ ಉರಿದಿರೋ ಘಟನೆ ಛತ್ತೀಸ್‌ಗಢದಲ್ಲಿ ನಡೆದಿದೆ.

ವೋಲ್ವೋ ಅ40 ರೀಚಾರ್ಜ್ ಎಲೆಕ್ಟ್ರಿಕ್ ಕಾರು ಇದಾಗಿದ್ದು ನಡುರಸ್ತೆಯಲ್ಲಿ ಬೆಂಕಿಗೆ ಆಹುತಿಯಾಗಿದೆ. ವೋಲ್ವೋ ಅ40 ಈ ಎಲೆಕ್ಟ್ರಿಕ್ ಕಾರಿನ ಬೆಲೆ ಬರೋಬ್ಬರಿ 58 ಲಕ್ಷ ರೂ. ಹೆದ್ದಾರಿಯಲ್ಲಿ ಸಂಚರಿಸುವಾಗ ಕಾರಿಗೆ ಬೆಂಕಿ ಬಿದ್ದು ಸಂಪೂರ್ಣ ಸುಟ್ಟು ಭಸ್ಮವಾಗಿದೆ.

ಇತ್ತೀಚೆಗೆ ದೇಶದಲ್ಲಿ ಎಲೆಕ್ಟ್ರಿಕ್ ಕಾರುಗಳಿಗೆ ಬೆಂಕಿ ಬೀಳುವ ಪ್ರಕರಣ ಹೆಚ್ಚಳವಾಗುತ್ತಿದೆ. ಎಲೆಕ್ಟ್ರಿಕ್ ಕಾರುಗಳ ಕಳಪೆ ಬ್ಯಾಟರಿ, ಸರಿಯಾದ ನಿರ್ವಹಣೆ ಇಲ್ಲದೇ ಈ ರೀತಿಯ ಅನಾಹುತ ಸಂಭವಿಸುತ್ತಿದೆ.

ಗುಣಮಟ್ಟದ ಎಲೆಕ್ಟ್ರಿಕ್ ಬ್ಯಾಟರಿ ಉತ್ಪಾದನೆಯಾಗದೇ ಎಲೆಕ್ಟ್ರಿಕ್ ಬೈಕ್, ಕಾರ್ ಗಳಿಗೆ ಪದೇ ಪದೇ ಬೆಂಕಿ ಬೀಳುತ್ತಿದೆ. ಎಲೆಕ್ಟ್ರಿಕ್ ಕಾರುಗಳಿಗೆ ಪದೇ ಪದೇ ಬೆಂಕಿ ಬಿದ್ದು ಹೊತ್ತಿಕೊಳ್ಳುತ್ತಿರುವುದು ವಾಹನ ಮಾಲೀಕರು, ಪ್ರಯಾಣಿಕರಿಗೆ ಆತಂಕ ಹೆಚ್ಚಿಸುತ್ತಿದೆ.

## ಶಿಕ್ಷಕ ಮರಲಕ್ಕನವರಿಗೆ ಸತ್ಕಾರ ಕಾರ್ಯಕ್ರಮ



ಬೆಳಗಾವಿ: ವಾರದ ವಚನೋತ್ಸವ ಕಾರ್ಯಕ್ರಮದಲ್ಲಿ ನ್ಯೂ. ಗಾಂಧಿನಗರ ನಂ 15ರ ಉರ್ದು ಶಾಲೆಯ ಕನ್ನಡ ಶಿಕ್ಷಕರಾಗಿ ಸೇವೆ ಸಲ್ಲಿಸುತ್ತಿರುವ ಎಂ.ಬಿ. ಮರಲಕ್ಕನವರ ಅವರಿಗೆ ಸತ್ಕರಿಸಿ ಗೌರವಿಸಲಾಯಿತು.

ಎಂ. ಬಿ. ಮರಲಕ್ಕನವರ ಅವರು ರಾಜ್ಯ ಸರಕಾರಿ ವಿಕಲಚೇತನ ನೌಕರ ಸಂಘದ ಬೆಳಗಾವಿ ನಗರ ವಲಯದ ಅಧ್ಯಕ್ಷರಾಗಿ ಸೇವೆ ಸಲ್ಲಿಸುತ್ತಿದ್ದಾರೆ. 34 ವರ್ಷಗಳಿಂದ ಶಿಕ್ಷಕರಾಗಿ ಸೇವೆ ಸಲ್ಲಿಸುತ್ತಿರುವ ಇವರಿಗೆ ರಾಜ್ಯ ಸರಕಾರಿ ನೌಕರರ ಕ್ಷೇಮಾಭಿವೃದ್ಧಿ ಸಂಘದ ಜಿಲ್ಲಾ ಘಟಕದವರು ಜಿಲ್ಲಾ ಮಟ್ಟದ ಅತ್ಯುತ್ತಮ ಗುರುರತ್ನ ಪ್ರಶಸ್ತಿ ನೀಡಿ ಗೌರವಿಸಿದ್ದಾರೆ. ಮಕ್ಕಳ ಶೈಕ್ಷಣಿಕ ಗುಣಮಟ್ಟ ಹೆಚ್ಚಿಸಲು ಇವರು ಅವಿರತ ಶ್ರಮಿಸುತ್ತಿದ್ದಾರೆ.

ವಚನೋತ್ಸವ ಕಾರ್ಯಕ್ರಮದ ಆರಂಭದಲ್ಲಿ ಮಲ್ಲಿಕಾರ್ಜುನ ಶಿರಗುಪ್ಪಿಶೆಟ್ಟರ ಪ್ರಾರ್ಥನೆ ಹೇಳಿದರು. ಅಭಿಲಾಷ, ಶಿವಲಿಂಗ ಬೆಂಡಿಗೇರಿ, ಶರಣಪ್ಪ ಗೊಂಗಡಶೆಟ್ಟರ, ಪ್ರೀತಂ ಕಲ್ಲೋಳಿಮಠ ಇವರು ಸಂಗೀತ ಸೇವೆ ನೀಡಿದರು. ಬಿ.ಎಚ್. ಮಾರದ, ನಿರುಪಾದಯ್ಯ ಕಲ್ಲೋಳಿಮಠ ಇವರು ಉಪನ್ಯಾಸ ನೀಡಿದರು. ಗೋಪಾಲ ಖಟಾವಕರ ನಿರೂಪಿಸಿದರು.

## ರಾಜ್ಯಕಾಂಗ್ರೇಸ್ ಸರ್ಕಾರದ ಹಿಂದೂ ವಿರೋಧಿ ನೀತಿ ಖಂಡಿಸಿ ಬಿಜೆಪಿ ಪ್ರತಿಭಟನೆ

ಬೆಳಗಾವಿ: ರಾಜ್ಯಕಾಂಗ್ರೆಸ್ ಸರ್ಕಾರದ ಹಿಂದೂ ವಿರೋಧಿ ನೀತಿ ಖಂಡಿಸಿ ಬೆಳಗಾವಿ ಚನ್ನಮ್ಮ ಸರ್ಕಲ್ ಬಳಿ ಬಿಜೆಪಿ ಪದಧಿಕಾರಿಗಳಿಂದ ಬೃಹತ ಪ್ರತಿಭಟನೆ ನಡೆಸಿ ಜಿಲ್ಲಾಧಿಕಾರಿಗಳ ಮೂಲಕ ರಾಜ್ಯಪಲರಿಗೆ ಮನವಿ ಸಲ್ಲಿಸಲಾಯಿತು.

ಮಂಡ್ಯ ಜಿಲ್ಲೆಯ ಕೆರಗೋಡುದಲ್ಲಿ ಕಾಂಗ್ರೆಸ್ ನೇತೃತ್ವದರಾಜ್ಯ ಸರ್ಕಾರ ನಡೆಸಿರುವ ಹಿಂದೂ ವಿರೋಧಿಕೃತ್ಯ ಖಂಡಿಸಿ ಹಾಗೂ ರಾಜ್ಯದಲ್ಲಿ ಕೋಮು ಸೌಹಾರ್ದತೆಗೆದಕ್ಕೆ ತರುಯತ್ತಿರುವ ರಾಜ್ಯ ಸರ್ಕಾರಕ್ಕೆ ತಕ್ಷಣ ಇಂತಹಕೆಲಸಗಳನ್ನು ನಡೆಸದಂತೆ ನಿರ್ದೇಶನ ನೀಡಬೇಕು ಎಲ್ಲದಿದ್ದರೆ ರಾಜ್ಯ ಸರ್ಕಾರವನ್ನು ವಜಾ ಮಾಡಬೇಕು ಎಂದು ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಅನಿಲ ಬೆನಕೆ ಮಂಡ್ಯಜಿಲ್ಲೆಯ ಕರಗೋಡುಗ್ರಾಮದಲ್ಲಿ ಸಮಸ್ತ ಹಿಂದೂಗಳು ರಾಮಮಂದಿರಉದ್ಘಾಟನೆಯ ನಿಮಿತ್ಯಗ್ರಾಮದಲ್ಲಿ 108 ಅಡಿಯ ನೂತನಧ್ವಜ ಸ್ಥಂಬ ನಿರ್ಮಿಸಿ,ಹಿಂದೂಗಳು ಹಣಮನ ಧ್ವಜಧ್ವಜಾರೋಹಣ ಮಾಡಿಸಂಭ್ರಮ ಆಚರಿಸಿದ್ದರು. ಕುಂಟು ನೆಪ ಒಡ್ಡಿಅಲ್ಪಸಂಖ್ಯಾತರಒಲೈಕೆಯಲ್ಲಿ ಮೂಳಗಿರುವ ರಾಜ್ಯಕಾಂಗ್ರೆಸ್‌ಸರ್ಕಾರಸಮಸ್ತ ಹಿಂದೂಗಳ ಭಾವನೆಗೆಧಕ್ಕೆ ತರುವದರೊಂದಿಗೆ ಹಿಂದೂಗಳನ್ನು ಹತ್ತಿಕ್ಕಲು ಹುನ್ನಾರು ನಡೆಸಿದೆ.



ಹಿಂದೂ ಸಂಘಟನೆಯದೇಶಭಕ್ತಿ ಚಟುವಟಿಕೆಗಳನ್ನು ಹತ್ತಿಕಲುಸಂಚು ನಡೆಸಿದೆ. ಹಿಂದೂಕಾರ್ಯಕರ್ತರಮೇಲೆ ಲಾಟಿಚಾರ್ಜ ಮಾಡಿದೆ. ಇದನ್ನು ಪ್ರತಿಭಟಿಸಿದ ನಮ್ಮ ನಾಯಕರು ಹಾಗೂ ವಿರೋಧ ಪಕ್ಷದ ನಾಯಕರಾದ ಶ್ರೀ ಆರ್ ಅಶೋಕ ಅವರನ್ನು ಬಂಧಿಸಿ ನಂತರ ಬಿಡುಗಡೆ ಮಾಡುವ ನಾಟಕಿಯಕೃತ್ಯೆಎಸಗುವ ದರೊಂದಿಗೆ,ಹಿಂದೂಧಾರ್ಮಿಕ ಧ್ವಜಗಳ ತೆರವು ಕಾರ್ಯಮಾಡಿ ಕೊಮು ಗಲಬೆ ಹರಡಲು ಪ್ರಚೋಧನೆ ಮಾಡುತ್ತಿರುವರಾಜ್ಯಕಾಂಗ್ರೆಸ್ ಸರ್ಕಾರಕ್ಕೆಖಡಕ್ ನಿರ್ದೇಶನ ನೀಡಬೇಕು. ಇವರು ಹೀಗೆ ಮುಂದುವರೆದರೆಕಾಂಗ್ರೆಸ್ ಸರ್ಕಾರವನ್ನುರಾಜ್ಯದಿಂದ ವಜಾಗೊಳಿಸಲು ಕ್ರಮ ಕೈಗೊಳ್ಳಬೇಕೆಂದು ಮಾನ್ಯರಾಜ್ಯಪಾಲರಲ್ಲಿ ನಾನು ಈ ಮೂಲಕ ವಿನಂತಿಸುತ್ತೆನೆಎಂದರು.

ಈ ಸಂದರ್ಭದಲ್ಲಿ ಬಿಜೆಪಿ ಮಹಾನಗರಜಿಲ್ಲಾಅಧ್ಯಕ್ಷರಾದಗೀತಾ ಸುತಾರ, ಬೆಳಗಾವಿ ಗ್ರಾಮಾಂತರಜಿಲ್ಲಾಧ್ಯಕ್ಷರಾದ ಸುಭಾಷ್ ಪಾಟೀಲ, ರಾಜ್ಯ ಬಿಜೆಪಿ ಉಪಾಧ್ಯಕ್ಷ ಅನಿಲ ಬೆನಕೆ, ಸಂಸದೆ ಮಂಗಲಾ ಅಂಗಡಿ, ರಾಜ್ಯಸಭಾ ಸದಸ್ಯಈರಣ್ಣಾಕಡಾಡಿ, ಮಾಜಿ ಶಾಸಕ ಸಂಜಯ ಪಾಟೀಲ, ಉಜ್ವಲಾ ಬಡವಾನಾಚೆ, ಎಂ.ಬಿ.ಜಿರ್ಲಿ ಸೇರಿದಂತೆಜಿಲ್ಲಾ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

## ಜನತಾ ದರ್ಶನ; ಸಾರ್ವಜನಿಕರಿಂದ 111 ಅಹವಾಲು ಸ್ವೀಕಾರ



ಧಾರವಾಡ: ಧಾರವಾಡ ಜಿಲ್ಲಾಡಳಿತದಿಂದ ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ಸೋಮವಾರ ಬೆಳಿಗ್ಗೆ ಆಯೋಜಿಸಿದ್ದ ಜಿಲ್ಲಾ ಮಟ್ಟದ 4ನೇಯ ಜನತಾದರ್ಶನ ಕಾರ್ಯಕ್ರಮದಲ್ಲಿ ವಿವಿಧ ಇಲಾಖೆಗಳಿಗೆ ಸಂಬಂಧಿಸಿದ 111 ಅಹವಾಲುಗಳನ್ನು ಸಾರ್ವಜನಿಕರಿಂದ ಸ್ವೀಕರಿಸಲಾಯಿತು.

ಜನತಾ ದರ್ಶನದ ಅಧ್ಯಕ್ಷತೆ ವಹಿಸಿದ್ದ ಕಾರ್ಮಿಕ ಇಲಾಖೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಲಾಡ್ ಅವರು ಸಾರ್ವಜನಿಕರ ಅಹವಾಲುಗಳನ್ನು ಸ್ವೀಕರಿಸಿ, ಸಮಾಲೋಚಿಸಿ ಶೀಘ್ರವಾಗಿ ಪರಿಹರಿಸಲು ಸಂಬಂಧಿಸಿದ ಅಧಿಕಾರಿಗಳಿಗೆ ಸ್ಥಳದಲ್ಲಿಯೇ ನಿರ್ದೇಶನ ನೀಡಿದರು.

ಜನತಾ ದರ್ಶನದಲ್ಲಿ ಜಿಲ್ಲೆಯ ವಿವಿಧ ಸ್ಥಳಗಳಿಂದ ಆಗಮಿಸಿದ್ದ ಸಾರ್ವಜನಿಕರು ಸಚಿವರಿಗೆ ಸುಮಾರು 111 ಅಹವಾಲುಗಳನ್ನು ಸಲ್ಲಿಸಿದರು.

ಜಿಲ್ಲಾಧಿಕಾರಿ ದಿವ್ಯ ಪ್ರಭು, ಮಹಾನಗರ ಪೊಲೀಸ್ ಆಯುಕ್ತರಾದ ರೇಣುಕಾ ಸುಕುಮಾರ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಗೋಪಾಲ ಬ್ಯಾಕೋಡ, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸ್ವರೂಪ ಟಿ.ಕೆ., ಮಹಾನಗರ ಪಾಲಿಕೆ ಆಯುಕ್ತ ಡಾ.ಈಶ್ವರ ಉಳ್ಳಾಗಡ್ಡಿ ವೇದಿಕೆಯಲ್ಲಿದ್ದರು.

ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು, ನಿಗಮ ಮಂಡಳಿಯ ಜಿಲ್ಲಾ ವ್ಯವಸ್ಥಾಪಕರು, ತಹಶಿಲ್ದಾರರು ಸೇರಿದಂತೆ ಇತರ ಅಧಿಕಾರಿಗಳು ಭಾಗವಹಿಸಿದ್ದರು. ಇಲಾಖೆವಾರು ಸಲ್ಲಿಕೆಯಾದ ಅಹವಾಲುಗಳ ವಿವರ: ಇವುಗಳಲ್ಲಿ ಹೆಸ್ಕಾಂ 02, ಗೃಹ ಇಲಾಖೆ 03, ಅರಣ್ಯ ಇಲಾಖೆ 01, ಸಮಾಜ ಕಲ್ಯಾಣ ಇಲಾಖೆ 02, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ 05, ಕಾರ್ಮಿಕ ಇಲಾಖೆ 12, ಶಾಲಾ ಶಿಕ್ಷಣ ಇಲಾಖೆ 04, ಆರೋಗ್ಯ ಇಲಾಖೆ 03, ಸಾರಿಗೆ ಇಲಾಖೆ 01, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ 02, ಕಂದಾಯ ಇಲಾಖೆ 26, ಹುಬ್ಬಳ್ಳಿ–ಧಾರವಾಡ ಮಹಾನಗರಪಾಲಿಕೆ 31, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ ರಾಜ್ ಇಲಾಖೆ 17 ಸೇರಿದಂತೆ ಒಟ್ಟು 111 ಅಹವಾಲುಗಳನ್ನು ಸಚಿವರು ಸ್ವೀಕರಿಸಿದರು.

# ಸಂವಿಧಾನದ ಜಾಗೃತಿ ಅನಿವಾರ್ಯ: ಡಾ.ಮೋಹನ್ ದಾಸ್

ಬಳ್ಳಾರಿ: ಭಾರತ ಸ್ವಾತಂತ್ರ್ಯ ಪಡೆದು 75 ವರ್ಷಗಳಾದ ನಂತರ ಸಂವಿಧಾನದ ನೈಜ ಆಶಯಗಳ ಕುರಿತು ಜಾಗೃತಿ ಮೂಡಿಸಬೇಕಾದ ಅನಿವಾರ್ಯತೆ ನಮಗೆ ಎದುರಾಗಿದೆ ಎಂದು ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯದ ರಾಜ್ಯಶಾಸ್ತ್ರ ಅಧ್ಯಯನ ವಿಭಾಗದ ಸಹಾಯಕ ಪ್ರಾಧ್ಯಾಪಕರಾದ ಡಾ.ಮೋಹನ್ ದಾಸ್.ಕೆ ಅವರು ಹೇಳಿದರು.

ಸಮಾಜ ಕಲ್ಯಾಣ ಇಲಾಖೆ ಮತ್ತು ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯ ವಿದ್ಯಾರ್ಥಿ ಕಲ್ಯಾಣ ಘಟಕ ಇವರ ಸಂಯುಕ್ತಾಶ್ರಯದಲ್ಲಿ ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯದ ಡಾ.ಬಿ.ಆರ್.ಅಂಬೇಡ್ಕರ್ ಸಭಾಂಗಣದಲ್ಲಿ ಏರ್ಪಡಿಸಿದ್ದ 'ಸಂವಿಧಾನ ಜಾಗೃತಿ ಜಾಥ' ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಅವರು ಮಾತನಾಡಿದರು.

ದೇಶಕ್ಕೆ ಸ್ವಾತಂತ್ರ್ಯ ಹೇಗೆ ಸುಲಭವಾಗಿ ಲಭಿಸಲಿಲ್ಲವೋ, ಸಂವಿಧಾನವೂ ಸುಲಭವಾಗಿ ಸಿಕ್ಕಿಲ್ಲ. ಅಂಬೇಡ್ಕರ್ ಅವರು ಸಂವಿಧಾನ ಕರಡು ರಚನಾ ಸಮಿತಿ ಅಧ್ಯಕ್ಷರಾದ ಬಳಿಕ ಇಂಗ್ಲೇಂಡ್, ಫ್ರಾನ್ಸ್, ಐರ್ಲ್ಯಾಂಡ್, ಕೆನಡಾ, ರಷ್ಯಾ ಜಪಾನ್ ಮತ್ತು ಆಸ್ಟ್ರೇಲಿಯಾ ರಾಷ್ಟ್ರಗಳ ಸಂವಿಧಾನ ಅಧ್ಯಯನ



ಮಾಡಿ 141 ದಿನಗಳಲ್ಲಿ ಕರಡು ಸಮಿತಿಗೆ ಕರಡು ಪ್ರತಿಯನ್ನು ಸಲ್ಲಿಸುತ್ತಾರೆ. ಎರಡು ವರ್ಷ 11 ತಿಂಗಳ 18 ದಿನಗಳ, 20 ಸಾವಿರ ಪುಟಗಳ ಕರಡು ಪ್ರತಿಯಲ್ಲಿರುವ ಅಂಶಗಳನ್ನು ಚರ್ಚೆಗೆ ಒಳಪಡಿಸಿದ ಬಳಿಕ ಸಮಾನತೆ, ಸಮಬಾಳು ಮತ್ತು ಸಮಪಾಲಿನ ಆಧಾರದ ಮೇಲೆ ರಚಿಸಲಾಗಿರುವ ಕರಡು ಸಂವಿಧಾನವಾಗಿ ಅಂಗೀಕರಿಸಲಾಯಿತು ಎಂದು ಸಂವಿಧಾನ ರಚನೆಯ ಕುರಿತು ವಿವರಿಸಿದರು.

ಸಂವಿಧಾನವು ಪೂಜ್ಯನೀಯ ಗ್ರಂಥವಾಗಿದ್ದು, ಸಂವಿಧಾನದ ಮಹತ್ವ ಹಾಗೂ ಮೌಲ್ಯದ ಕುರಿತು ಅರಿವು ಮೂಡಿಸುವುದು ಇಂದು ಅನಿವಾರ್ಯವಾಗಿದೆ. ನಮ್ಮ ದೇಶವು ಇಂದು ಯಾವುದೇ ಧರ್ಮಗ್ರಂಥಗಳ ತತ್ವದ ಮೇಲೆ ನಡೆಯುತ್ತಿಲ್ಲ. ಬದಲಿಗೆ ಸಂವಿಧಾನದ ಆಶಯಗಳ ಮೇಲೆ ನಡೆಯುತ್ತಿದೆ. ಅಂತಹ ಅದ್ಭುತವಾದ ಸಂವಿಧಾನ ನೀಡಿದ ಶ್ರೇಯಸ್ಸು ಬಾಬಾ ಸಾಹೇಬ್ ಡಾ.ಬಿ.ಆರ್.ಅಂಬೇಡ್ಕರ್ ಅವರಿಗೆ ಸಲ್ಲುತ್ತದೆ. ಮಾಧ್ಯಮಗಳು ಸಹ ಇಂದು ಸಂವಿಧಾನ ಸ್ಥಿತಿಗತಿಗಳ ಕುರಿತಾಗಿ ಎಚ್ಚರಿಸುತ್ತಿವೆ. ದೇಶದ ಜನತೆಗೆ ಸಂವಿಧಾನ ನೀಡಿರುವ ಹಕ್ಕುಗಳ ಅರಿವು ಮೂಡಿಸಲು ಸಂವಿಧಾನ ಅರ್ಥ ಮಾಡಿಕೊಳ್ಳಬೇಕು. ಸಂವಿಧಾನವನ್ನು ಅರ್ಥಮಾಡಿಕೊಳ್ಳುವ ಸಮಯ ನಮಗೆ ಸರ್ಕಾರವು ಒದಗಿಸಿದೆ ಎಂದು ಹೇಳಿದರು.

ವಿವಿಯ ಕುಲಸಚಿವರಾದ ರುದ್ರೇಶ. ಎಸ್.ಎನ್ ಅವರು ಪ್ರಾಸ್ತಾವಿಕವಾಗಿ ಮಾತನಾಡಿ, ಭಾರತ ಸಂವಿಧಾನವು ನಮ್ಮ ಧರ್ಮಗ್ರಂಥವಿದ್ದಂತೆ, ಅದನ್ನು ಪವಿತ್ರವಾಗಿ ಕಾಣಬೇಕು.

ಸಂವಿಧಾನದ ಚೌಕಟ್ಟಿನಡಿ ಎಲ್ಲರೂ ಸಮಾನರು ಎಂಬ ತತ್ವ ಸಾರಿದವರು ಡಾ. ಅಂಬೇಡ್ಕರ್ ಅವರು. ಸಂವಿಧಾನದ 14 ರಿಂದ 19 ಆರ್ಟಿಕಲ್ಗಳು ನಮ್ಮ ಜ್ಞಾನ ಮತ್ತು ಆತ್ಮವಿಶ್ವಾಸವನ್ನು ಹೆಚ್ಚಿಸುತ್ತವೆ. ಸಾಮಾನ್ಯ ಪ್ರಜೆಯಾದ ದೇಶದ ಅತ್ಯುನ್ನತ ಸ್ಥಾನ ಅಲಂಕರಿಸಲು ಸಂವಿಧಾನವೇ ಕಾರಣ ಎಂದು ತಿಳಿಸಿದರು.

ವಿಶ್ವವಿದ್ಯಾಲಯದ ಪ್ರಭಾರ ಕುಲಪತಿಗಳಾದ ಪ್ರೊ.ಅನಂತ ಎಲ್ ಝುಂಡೇಕರ್ ಅವರು ಅಧ್ಯಕ್ಷತೆ ವಹಿಸಿ ಮಾತನಾಡಿ, ಸಂವಿಧಾನವು ಪ್ರತಿಯೊಬ್ಬ ಮನುಷ್ಯನ ಜ್ಞಾನ, ಸಮಾನತೆ, ಸ್ವಾತಂತ್ರ ಮತ್ತು ನ್ಯಾಯಾಂಗವನ್ನು ಒಳಗೊಂಡಿದೆ. ಸಂವಿಧಾನ ಮಹಿಳೆಯರಿಗೆ ಹಲವಾರು ಸ್ಥಾನಮಾನಗಳನ್ನು ನೀಡಿದೆ.

ಸರ್ಕಾರದ ಈ ಸಂವಿಧಾನದ ಅರಿವು ಮೂಡಿಸುವ ಕಾರ್ಯವು ಶ್ಲಾಘನೀಯವಾಗಿದೆ ಎಂದರು.

ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ಸತೀಶ್ ಕೆ.ಹೆಚ್ ಅವರು, ವಿದ್ಯಾರ್ಥಿಗಳಿಗೆ, ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗೆ ಸಂವಿಧಾನದ ಪೀಠಿಕೆಯ ಪ್ರತಿಜ್ಞಾ ವಿಧಿಯನ್ನು ಸಾಮೂಹಿಕವಾಗಿ ಬೋಧಿಸಿದರು.

ಸಂವಿಧಾನ ಜಾಗೃತಿ ಜಾಥಾ ಸ್ತಬ್ಧಚಿತ್ರದ ಮೆರವಣಿಗೆಯನ್ನು ಡೊಳ್ಳು ಬಾರಿಸುವ ಮೂಲಕ ಬರಮಾಡಿಕೊಳ್ಳಲಾಯಿತು. ಸಂವಿಧಾನ ಪೀಠಿಕೆ ವಾಚನ, ನ್ಯಾಯ, ಸಾಮಾಜಿಕ, ಆರ್ಥಿಕ ಮತ್ತು ರಾಜಕೀಯ ಕುರಿತಾದ ಅಂಶಗಳನ್ನು ವೀಕ್ಷಣೆ ಮಾಡಲಾಯಿತು.

ಈ ಸಂದರ್ಭದಲ್ಲಿ ವಿಶ್ವವಿದ್ಯಾಲಯದ ಮೌಲ್ಯಮಾಪನ ಕುಲಸಚಿವರಾದ ಪ್ರೊ. ರಮೇಶ ಓ ಓಲೇಕಾರ್, ಹಣಕಾಸು ಅಧಿಕಾರಿಗಳಾದ ಪ್ರೊ. ಸದ್ಯೋಜಾತಪ್ಪ, ವಿದ್ಯಾರ್ಥಿ ಕಲ್ಯಾಣ ಘಟಕದ ನಿರ್ದೇಶಕ ಡಾ.ಶಶಿಕಾಂತ್ ಎಚ್ ಮಜಗಿ, ದೈಹಿಕ ಶಿಕ್ಷಣ ಅಧ್ಯಯನ ವಿಭಾಗದ ಸಹಾಯಕ ಪ್ರಾಧ್ಯಾಪಕ ಡಾ.ಶಶಿಧರ ಕೆಲ್ಲೂರ್ ಸೇರಿದಂತೆ ವಿವಿಧ ನಿಕಾಯಗಳ ಡೀನರು, ವಿವಿಧ ವಿಭಾಗಗಳ ಮುಖ್ಯಸ್ಥರು, ಸಂಯೋಜಕರು, ಬೋಧಕರು, ಸಂಶೋಧನಾ ವಿದ್ಯಾರ್ಥಿಗಳು, ಬೋಧಕೇತರ ಸಿಬ್ಬಂದಿ, ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಸಂವಿಧಾನ ಜಾಥಾಗೆ ವಿವಿಧೆಡೆ ಸ್ವಾಗತ

ಮಂಗಳೂರು: ಸಂವಿಧಾನದ ಆಶಯ ಮತ್ತು ಮೌಲ್ಯಗಳನ್ನು ಒಳಗೊಂಡ ಸಂವಿಧಾನ ಜಾಗೃತಿ ಜಾಥಾ ಸ್ತಬ್ದ ಚಿತ್ರ ಜಿಲ್ಲೆಯ ವಿವಿದೆಡೆ ಸಂಚರಿಸಿತು.

ತಲಪಾಡಿ ಗ್ರಾಮ ಪಂಚಾಯತಿ ವ್ಯಾಪ್ತಿಯ ಕೆ.ಸಿ.ರೋಡ್ನಲ್ಲಿ ಪ್ರದರ್ಶಿಸಲಾಯಿತು. ಭಾರತ ಸಂವಿಧಾನದ ಆಚರಣೆ ಮತ್ತು ಅದರ ಬಗ್ಗೆ ಜಾಗೃತಿ ಮೂಡಿಸಲಾಯಿತು. ಸಾರ್ವಜನಿಕರಿಗೆ ಡಾ.ಬಿ.ಆರ್. ಅಂಬೇಡ್ಕರ್ ರವರ ಸಾಧನೆ ಬಗ್ಗೆ ಬರೆದ ಪುಸ್ತಕಗಳನ್ನು ನೀಡಿ ಸ್ವಾಗತಿಸಲಾಯಿತು.

ಬಳಿಕ ಸಂವಿಧಾನ ಜಾಗೃತಿ ಜಾಥಾ ಸ್ತಬ್ದ ಚಿತ್ರವನ್ನು ಉಳ್ಳಾಲ ತಾಲೂಕು ಕಿನ್ಯಾ ಗ್ರಾಮ ಪಂಚಾಯತಿ ವ್ಯಾಪ್ತಿಯ ಕನಕಮುಗೇರು ಜಂಕ್ಷನ್ ಬಳಿ ಪ್ರದರ್ಶಿಸಲಾಯಿತು.

ಅಪರಾಹ್ನ ಸಂವಿಧಾನ ಜಾಗೃತಿ ಜಾಥಾ ಸ್ತಬ್ದ ಚಿತ್ರವನ್ನು ಉಳ್ಳಾಲ ತಾಲೂಕಿನ ಅಂಬ್ಲಮೊಗರು ಗ್ರಾಮ ಪಂಚಾಯತ್ ವ್ಯಾಪ್ತಿಯ ಮದಕ ಜಂಕ್ಷನ್ ಬಳಿ ಪ್ರದರ್ಶಿಸಲಾಯಿತು. ಕರ್ನಾಟಕ ಸರ್ಕಾರದ ಮಹತ್ವಕಾಂಕ್ಷಿ ಯೋಜನೆಗಳ ಬಗ್ಗೆ ಮಾಹಿತಿಯನ್ನು ಒಳಗೊಂಡ ಬೀದಿ ನಾಟಕವನ್ನು ಪ್ರದರ್ಶಿಸಲಾಯಿತು.

ಭಾನುವಾರದಂದು ಪೂರ್ವಾಹ್ನ ಸಂವಿಧಾನ ಜಾಗೃತಿ ಜಾಥಾ ಸ್ತಬ್ಧ ಚಿತ್ರವನ್ನು ಉಳ್ಳಾಲ ತಾಲೂಕು ಹರೇಕಳ ಗ್ರಾಮ ಪಂಚಾಯತಿ ವ್ಯಾಪ್ತಿಯ ಕಿಸಾನ್ ನಗರ ಬಳಿ ಪ್ರದರ್ಶಿಸಲಾಯಿತು. ಭಾರತ ಸಂವಿಧಾನದ ಆಚರಣೆ ಮತ್ತು ಅದರ ಬಗ್ಗೆ ಜಾಗೃತಿ ಮೂಡಿಸಲಾಯಿತು. ಜೊತೆಗೆ ಕರ್ನಾಟಕ ಸರಕಾರದ ಮಹತ್ವಾಕಾಂಕ್ಷಿ ಯೋಜನೆಗಳ ಬಗ್ಗೆ ಮಾಹಿತಿಯನ್ನೊಳಗೊಂಡ ಬೀದಿ ನಾಟಕವನ್ನು ಪ್ರದರ್ಶಿಸಲಾಯಿತು.

ಅಪರಾಹ್ನ ಕೊಣಾಜೆ ಗ್ರಾಮ ಪಂಚಾಯತ್ ವ್ಯಾಪ್ತಿಯ ಕೊಣಾಜೆ ಜಂಕ್ಷನ್ ಬಸ್ಸು ನಿಲ್ದಾಣದ ಬಳಿ ಪ್ರದರ್ಶಿಸಲಾಯಿತು. ಸಂವಿಧಾನದ ಮಹತ್ವದ ಬಗ್ಗೆ ಸಾರ್ವಜನಿಕರಿಗೆ ಮಾಹಿತಿ ನೀಡಿ ಅರಿವು ಮೂಡಿಸಲಾಯಿತು.

ಬೆಳ್ಮ ಗ್ರಾಮ ಪಂಚಾಯತ್ ವ್ಯಾಪ್ತಿಯ ದೇರಳಕಟ್ಟೆ ಜಂಕ್ಷನ್ ಬಸ್ಸು ಮತ್ತು ರಿಕ್ಷಾ ನಿಲ್ದಾಣದ ಬಳಿ ಪ್ರದರ್ಶಿಸಲಾಯಿತು. ಮಂಜನಾಡಿ ಗ್ರಾಮ ಪಂಚಾಯತ್, ನರಿಂಗಾನ ಪಂಚಾಯತ್ ಎಡಪದವು ಗ್ರಾಮ ಪಂಚಾಯತ್, ಕುಪ್ಪೆಪದವು ಗ್ರಾಮ ಪಂಚಾಯತ್, ಮುಚ್ಚೂರು ಗ್ರಾಮ ಪಂಚಾಯತ್, ಬಡಗ ಎಡಪದವು ಗ್ರಾಮ ಪಂಚಾಯತ್,ಮುತ್ತೂರು ಗ್ರಾಮ ಪಂಚಾಯತ್ ಗಳಲ್ಲಿ ಸಂವಿಧಾನ ರಥ ಸಂಚರಿಸಿ ಭಾರತ ಸಂವಿಧಾನದ ಆಚರಣೆ ಮತ್ತು ಅದರ ಬಗ್ಗೆ ಜಾಗೃತಿ ಮೂಡಿಸಲಾಯಿತು.

ವಿವಿದೆಡೆ ಜಾಥಾ ಆಗಮನ ಸಂದರ್ಭದಲ್ಲಿ ಸ್ಥಳೀಯ ಗ್ರಾಮ ಪಂಚಾಯತ್ ಅಧ್ಯಕ್ಷರು, ಸದಸ್ಯರು, ವಿವಿಧ ಸಂಘ ಸಂಸ್ಥೆಗಳ ಸದಸ್ಯರು, ಸಾರ್ವಜನಿಕರು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ ಸಂವಿಧಾನ ಪೀಠಿಕೆ ಓದುವುದು, ಉಪನ್ಯಾಸ, ಸಂವಿಧಾನ ಗೀತೆ ಗಾಯನ, ಕಲಾ ಪ್ರದರ್ಶನ ಏರ್ಪಡಿಸಲಾಗಿತ್ತು.

## ಹಿಂದುಳಿದ ವರ್ಗಗಳ ವಿದ್ಯಾರ್ಥಿವೇತನ: ಅರ್ಜಿ ಅವಧಿ ವಿಸ್ತರಣೆ

ಮಂಗಳೂರು: 2023–24ನೇ ಸಾಲಿನ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಅಲೆಮಾರಿ/ ಅರೆ ಅಲೆಮಾರಿ ಪ್ರವರ್ಗ–1 ರ ವಿದ್ಯಾರ್ಥಿಗಳಿಂದ ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನ ಮತ್ತು ಶುಲ್ಕ ವಿನಾಯಿತಿ ಸೌಲಭ್ಯಕ್ಕಾಗಿ ಆನ್ಲೈನ್ ಮೂಲಕ ಅರ್ಜಿ ಸಲ್ಲಿಸುವ ಅವಧಿಯನ್ನು ಫೆಬ್ರವರಿ 15ರವರೆಗೆ ವಿಸ್ತರಿಸಲಾಗಿದೆ.

ವಿದ್ಯಾರ್ಥಿಗಳು ಆನ್ಲೈನ್ ಮೂಲಕ ವೆಬ್ಸೈಟ್: **https://ssp.postmatric.karnataka.gov.in** ರಲ್ಲಿ ಅರ್ಜಿ ಸಲ್ಲಿಸಬಹುದು. ಕಾರ್ಯಕ್ರಮಗಳ ವಿವರ ಅರ್ಹತೆ ಸಲ್ಲಿಸಬೇಕಾದ ದಾಖಲೆಗಳು ಹಾಗೂ ವಿದ್ಯಾರ್ಥಿ ವೇತನಕ್ಕೆ ಸಂಬಂಧಿಸಿದ ಸರ್ಕಾರಿ ಆದೇಶಗಳ ಬಗ್ಗೆ ವೆಬ್ಸೈಟ್ ವಿಳಾಸ: https://bcwd.karnataka.gov.in ನೋಡಬಹುದು.

ಹೆಚ್ಚಿನ ಮಾಹಿತಿಗೆ ಇಲಾಖೆ ಸಹಾಯವಾಣಿ ಸಂಖ್ಯೆ 8050770005, ಇ–ಮೇಲ್ bcwdhelpline@gmail.com, ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶದ ಸಹಾಯವಾಣಿ ಸಂಖ್ಯೆ:080– 35254757 ಇ–ಮೇಲ್ postmatrichelp@karnataka.gov.in ಗೆ ಸಂಪರ್ಕಿಸುವಂತೆ ಹಿಂದುಳಿದ ವರ್ಗಗಳ ಕಲ್ಯಾಣ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಉಚಿತ 10 ದಿನಗಳ ಉದ್ಯಮಶೀಲತಾ ಅಭಿವೃದ್ಧಿ ತರಬೇತಿ: ಅರ್ಜಿ ಆಹ್ವಾನ

ಬಳ್ಳಾರಿ: ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ಹಾಗೂ ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮ ಇವರ ಪ್ರಾಯೋಜಕತ್ವದಲ್ಲಿ ಕರ್ನಾಟಕ ಉದ್ಯಮಶೀಲತಾ ಅಭಿವೃದ್ಧಿ ಕೇಂದ್ರ(ಸಿಡಾಕ್) ದ ವತಿಯಿಂದ ಸ್ವಂತ ಉದ್ಯೋಗ ಸ್ಥಾಪಿಸಲು ಇಚ್ಚಿಸುವವರಿಗಾಗಿ 10 ದಿನಗಳ ಉದ್ಯಮಶೀಲತಾ ಅಭಿವೃದ್ಧಿ ತರಬೇತಿ ಹಮ್ಮಿಕೊಳ್ಳಲಾಗುತ್ತಿದ್ದು, ಆಸಕ್ತರಿಂದ ಅರ್ಜಿ ಆಹ್ವಾನಿಸಲಾಗಿದೆ.

ತರಬೇತಿ ಕಾರ್ಯಕ್ರಮವನ್ನು ಫೆಬ್ರುವರಿ ಮೂರನೇ ವಾರದಲ್ಲಿ ಹಮ್ಮಿಕೊಳ್ಳಲಾಗುತ್ತದೆ. ತರಬೇತಿಯಲ್ಲಿ ಸ್ವಂತ ಉದ್ಯಮವನ್ನು ಸ್ಥಾಪಿಸಲು ಅನುಸರಿಸಬೇಕಾದ ಕ್ರಮಗಳು, ಸರ್ಕಾರದ ಸ್ವಂತ ಉದ್ಯೋಗ ಯೋಜನೆಗಳು, ಬ್ಯಾಂಕಿನ ವ್ಯವಹಾರ, ಮಾರುಕಟ್ಟೆ ಸಮೀಕ್ಷೆ, ಯೋಜನಾ ವರದಿ ತಯಾರಿಕೆ, ಹಾಗೂ ಉದ್ಯಮ ನಿರ್ವಹಣೆ, ಇತ್ಯಾದಿ ವಿಷಯಗಳ ಕುರಿತು ತರಬೇತಿಯನ್ನು ನೀಡಲಾಗುವುದು. ಬಳ್ಳಾರಿ ಜಿಲ್ಲೆಯ ಆಸಕ್ತ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದು.

ಅಭ್ಯರ್ಥಿಗಳು 18 ವರ್ಷ ದಿಂದ 45 ವರ್ಷ ವಯಸ್ಸಿನವರಾಗಿರಬೇಕು. ಓದಲು/ಬರೆಯಲು ಬರುತ್ತಿರಬೇಕು. ಮಹಿಳೆಯರಿಗೆ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗದವರಿಗೆ ಆದ್ಯತೆ ನೀಡಲಾಗುವುದು.

ಅರ್ಜಿಗಳನ್ನು ಕರ್ನಾಟಕ ಉದ್ಯಮಶೀಲತಾ ಅಭಿವೃದ್ಧಿ ಕೇಂದ್ರದ ಜಂಟಿ ನಿರ್ದೇಶಕರ ಕಚೇರಿಯಲ್ಲಿ ಪಡೆಯಬಹುದು ಅಥವಾ ದೂರವಾಣಿ ಸಂಖ್ಯೆಯ ಮೂಲಕ ನೊಂದಾಯಿಸಿಕೊಳ್ಳಬಹುದು.

ಅರ್ಜಿ ಸಲ್ಲಿಸಲು ಫೆ.07 ಕೊನೆಯ ದಿನವಾಗಿದೆ.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಕೈಗಾರಿಕಾ ಕೇಂದ್ರದ ಕಚೇರಿ ಕಟ್ಟಡದ ಸಿಡಾಕ್ನ ಜಂಟಿ ನಿರ್ದೇಶಕರ ಕಚೇರಿ ಅಥವಾ ಮೊ.7483538942/ 9449226221 ಗೆ ಸಂಪರ್ಕಿಸಬಹುದು ಎಂದು ಕರ್ನಾಟಕ ಉದ್ಯಮಶೀಲತಾ ಅಭಿವೃದ್ಧಿ ಕೇಂದ್ರದ ಜಂಟಿ ನಿರ್ದೇಶಕ ಸೋಮಶೇಖರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅರ್ಜಿ ಸಲ್ಲಿಸುವ ಅವಧಿ ವಿಸ್ತರಣೆ

ಬಳ್ಳಾರಿ: ಮೆಟ್ರಿಕ್ ನಂತರದ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಅರ್ಹ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಪ್ರವರ್ಗ–1 ಅಲೆಮಾರಿ, ಅರೆ ಅಲೆಮಾರಿ ವಿದ್ಯಾರ್ಥಿಗಳಿಂದ, 2023–24ನೇ ಸಾಲಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೂಲಕ ನೀಡಲಾಗುತ್ತಿರುವ "ಮೆಟ್ರಿಕ್–ನಂತರದ ವಿದ್ಯಾರ್ಥಿವೇತನ", "ಶುಲ್ಕ ಮರುಪಾವತಿ" ಮತ್ತು "ವಿದ್ಯಾಸಿರಿ–ಊಟ ಮತ್ತು ವಸತಿ ಸಹಾಯ ಯೋಜನೆ", ಸೌಲಭ್ಯಕ್ಕಾಗಿ ಆನ್ಲೈನ್ ಮೂಲಕ ಈಗಾಗಲೇ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿ ಸಲ್ಲಿಸುವ ಅಂತಿಮ ದಿನಾಂಕವನ್ನು ಫೆ.15 ರ ವರೆಗೆ ವಿಸ್ತರಿಸಲಾಗಿದೆ ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಎ.ಕೆ.ಜಲಾಲಪ್ಪ ಅವರು ತಿಳಿಸಿದ್ದಾರೆ.

ಅರ್ಜಿ ಸಲ್ಲಿಸುವ ದಿನಾಂಕವನ್ನು ವಿಸ್ತರಿಸುವಂತೆ ಪೋಷಕರು, ವಿದ್ಯಾರ್ಥಿಗಳು, ಶಿಕ್ಷಣ ಸಂಸ್ಥೆಗಳು ಮನವಿ ಸಲ್ಲಿಸಿದ್ದು, ಪ್ರಯುಕ್ತ ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಅರ್ಜಿ ಸಲ್ಲಿಸುವ ಕೊನೆಯ ದಿನಾಂಕವನ್ನು ವಿಸ್ತರಿಸಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ಜೋಳದರಾಶಿ ದೊಡ್ಡನಗೌಡ ರಂಗಮಂದಿರ ಹತ್ತಿರದ ಡಿ.ದೇವರಾಜ ಅರಸು ಭವನದ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಅಧಿಕಾರಿಗಳ ಕಚೇರಿ ಅಥವಾ ದೂ. 08392–275751 ಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಫೆ.02 ರಂದು ಜಿಲ್ಲೆಯಲ್ಲಿ ಟೆಲಿ ಐಸಿಯು ಹಬ್ ಆರಂಭ; ವೈದ್ಯರಿಗೆ ಮೂರು ದಿನಗಳ ತರಬೇತಿ

# ತುರ್ತು ಚಿಕಿತ್ಸೆಗೆ ಆರೈಕೆ ಮಾಡಲು ಟೆಲಿ ಐಸಿಯು ಹಬ್ ಸಹಕಾರಿ: ಡಾ.ಕೃಷ್ಣ

ಬಳ್ಳಾರಿ: ಗ್ರಾಮ ಮತ್ತು ತಾಲ್ಲೂಕುಗಳ ಆಸ್ಪತ್ರೆಗಳಲ್ಲಿ ದಾಖಲಾಗುವ ರೋಗಿಗಳಿಗೆ ತಜ್ಞ ವೈದ್ಯಕೀಯ ಸಲಹೆ ನೀಡಲು ಟೆಲಿ ಐಸಿಯು ಹಬ್ ಸಹಾಯವಾಗಲಿದೆ ಎಂದು ವಿಜಯನಗರ ವೈದ್ಯಕೀಯ ವಿಜ್ಞಾನ ಸಂಸ್ಥೆಯ ಪ್ರಭಾರಿ ನಿರ್ದೇಶಕ ಡಾ.ಕೃಷ್ಣ ಅವರು ಹೇಳಿದರು.

ನಗರದ ಜಿಲ್ಲಾ ಆಸ್ಪತ್ರೆಯ ಡಿಎನ್ಬಿ ಸಭಾಂಗಣದಲ್ಲಿ ಸೋಮವಾರದಿಂದ ಹಮ್ಮಿಕೊಂಡಿದ್ದ ಟೆಲಿ ಐಸಿಯು ಹಬ್ನ ಮೂರು ದಿನಗಳ ತರಬೇತಿ ಶಿಬಿರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಟೆಲಿ ಐಸಿಯು ಹಬ್ ಮೂಲಕ ಗ್ರಾಮ ಮತ್ತು ತಾಲ್ಲೂಕುಗಳ ಆಸ್ಪತ್ರೆಗಳಲ್ಲಿ ದಾಖಲಾದ ರೋಗಿಗಳಿಗೆ ತುರ್ತು ಚಿಕಿತ್ಸೆ ನೀಡಲು ಮತ್ತು ಆರೈಕೆ ಮಾಡಲು ಇದು ಸಹಕಾರಿಯಾಗಲಿದೆ ಎಂದರು.

ಜಿಲ್ಲಾ ಶಸ್ತ್ರ ಚಿಕಿತ್ಸಕ ಡಾ.ಎನ್.ಬಸರೆಡ್ಡಿ ಅವರು ಅಧ್ಯಕ್ಷತೆ ವಹಿಸಿ ಮಾತನಾಡಿ, ಈಗಾಗಲೇ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಅವರು, ಬೆಂಗಳೂರು ಮತ್ತು ಬಳ್ಳಾರಿಯಲ್ಲಿ ಟೆಲಿ ಐಸಿಯು ಹಬ್ಗಳನ್ನು ಆರಂಭಿಸಲು ಉದ್ದೇಶಿಸಿದ್ದು, ಫೆ.02 ರಂದು ಜಿಲ್ಲಾ ಆಸ್ಪತ್ರೆಯಲ್ಲಿ ಉದ್ಘಾಟನಾ ಸಮಾರಂಭ ನಡೆಯಲಿದೆ.

ಮೊದಲ ಭಾಗವಾಗಿ ಜಿಲ್ಲಾ ಆಸ್ಪತ್ರೆಯಿಂದ ಸಂಡೂರು ಮತ್ತು ಸಿರುಗುಪ್ಪ ತಾಲ್ಲೂಕುಗಳನ್ನು ಆಯ್ಕೆ ಮಾಡಲಾಗಿದ್ದು, ಇದರ ಪೂರ್ವಭಾವಿಯಾಗಿ ಎರಡು ತಾಲ್ಲೂಕಿನ ವೈದ್ಯರು, ಶುಶ್ರೂಷಕರು ಮತ್ತು ಸಿಬ್ಬಂದಿಗಳಿಗೆ ತರಬೇತಿ ನೀಡಲಾಗುತ್ತಿದೆ ಎಂದು ತಿಳಿಸಿದರು.

ಟೆಲಿ ಐಸಿಯು ಹಬ್ ಸೌಲಭ್ಯದ ಮೂಲಕ ವೈದ್ಯರು ರೋಗಿಗಳ ಆರೋಗ್ಯದ ನಿಯತಾಂಕಗಳ ಬಗ್ಗೆ ಆಸ್ಪತ್ರೆಗಳಿಂದ ವಿವರಗಳನ್ನು ಪಡೆದು ಅವರಿಗೆ ನೀಡಬೇಕಾದ ಚಿಕಿತ್ಸೆಯ ಬಗ್ಗೆ ಸಲಹೆ ನೀಡಲು ಸಾಧ್ಯವಾಗುತ್ತದೆ ಎಂದು ತಿಳಿಸಿದರು.



ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ವೈ.ರಮೇಶ್ ಬಾಬು ಅವರು ಮಾತನಾಡಿ, ಟೆಲಿ ಐಸಿಯು ಹಬ್ ಮೂಲಕ ವೈದ್ಯರು ರೋಗಿಗಳೊಂದಿಗೆ ನೇರವಾಗಿ ಆಡಿಯೋ ಮೂಲಕ ಮಾತನಾಡಿ, ಅಗತ್ಯ ಚಿಕಿತ್ಸೆ ನೀಡುತ್ತಾರೆ. ಇದು ಸ್ವಯಂಚಾಲಿತವಾಗಿ ನಗರದ ಆಸ್ಪತ್ರೆಗಳಿಗೆ ದಾಖಲಾಗುವ ರೋಗಿಗಳ ಸಂಖ್ಯೆಯನ್ನೂ ಕಡಿಮೆ ಮಾಡುತ್ತದೆ ಎಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಟೆಲಿ ಐಸಿಯು ಹಬ್ನ ನೋಡೆಲ್ ಅಧಿಕಾರಿ ಡಾ.ದಿನೇಶ್, ಟೆಲಿ-ಐಸಿಯು ಹಬ್ ಒಂದು ರಿಮೋಟ್ ಸೈಟ್ ಆಗಿದ್ದು, ಅದು ತೀವ್ರವಾಗಿ ಅಸ್ವಸ್ಥರಾಗಿರುವ ರೋಗಿಗಳನ್ನು ಮೇಲ್ವಿಚಾರಣೆ ಮಾಡಲು ಒಂದು ನುರಿತ ವೈದ್ಯತಂಡವನ್ನು ಒಳಗೊಂಡಿರುತ್ತದೆ ಎಂದು ತಿಳಿಸಿದರು.

ಹಬ್ನಲ್ಲಿ ಸಂವಹನತೆಯಿಂದ ಕೂಡಿದ ತಾಂತ್ರಿಕ ಸಾಫ್ಟ್ವೇರ್ ಮತ್ತು ಪರವಾನಿಗೆಗಳು, ನೆಟ್ವರ್ಕಿಂಗ್ ಸಲಕರಣೆಗಳಿಂದ ಕೂಡಿ ಟೆಲಿ ಐಸಿಯು ಹಬ್ ಕಾರ್ಯನಿರ್ವಹಿಸುತ್ತದೆ ಎಂಬುದನ್ನು ವಿವರಿಸಿದರು.

ತರಬೇತಿಯಲ್ಲಿ ವೈದ್ಯಕೀಯ ಸಲಹೆ ಮತ್ತು ಸಮಾಲೋಚನೆಗಾಗಿ ಕೃತಕ ಬುದ್ಧಿಮತ್ತೆ ಮತ್ತು ಇತರ ಸುಧಾರಿತ ತಂತ್ರಜ್ಞಾನಗಳನ್ನು ಪರಿಣಾಮಕಾರಿಯಾಗಿ ಬಳಸಿಕೊಳ್ಳುವ ಅಗತ್ಯ ಕುರಿತು ಜಿಲ್ಲಾ ಶಸ್ತ್ರ ಚಿಕಿತ್ಸಕ ಡಾ.ಬಸರೆಡ್ಡಿ ಅವರು ಪ್ರಾತ್ಯಕ್ಷಿಕೆ ತೋರಿಸಿದರು.

ಈ ಸಂದರ್ಭದಲ್ಲಿ ವಿಜಯನಗರ ವೈದ್ಯಕೀಯ ಸಂಸ್ಥೆಯ ಪ್ರಾಚಾರ್ಯರಾದ ಡಾ.ಕೃಷ್ಣಸ್ವಾಮಿ, ಜಿಲ್ಲಾ ಆಸ್ಪತ್ರೆಯ ಸ್ಥಾನಿಕ ವೈದ್ಯಾಧಿಕಾರಿ ಡಾ.ವಿಶ್ವನಾಥ, ಜಿಲ್ಲಾ ಕುಷ್ಠರೋಗ ನಿರ್ಮೂಲನಾಧಿಕಾರಿ ಡಾ.ವೀರೇಂದ್ರ ಕುಮಾರ್, ಜಿಲ್ಲಾ ಅರವಳಿಕೆ ತಜ್ಞ ಡಾ.ಬಾಲ ಭಾಸ್ಕರ್ ರಾವ್, ಜಿಲ್ಲಾ ಆಸ್ಪತ್ರೆಯ ನೋಡೆಲ್ ಅಧಿಕಾರಿಗಳಾದ ಡಾ.ವಿಮಲಾ, ಡಾ.ಜೋಶ್ನಾ ಸೇರಿದಂತೆ ಸಂಡೂರು ಮತ್ತು ಸಿರುಗುಪ್ಪ ತಾಲ್ಲೂಕು ವೈದ್ಯರು, ಶುಶ್ರೂಷಕರು, ಸಿಬ್ಬಂದಿಗಳು ಹಾಗೂ ಇನ್ನಿತರರು ಉಪಸ್ಥಿತರಿದ್ದರು.

## ಜ.30 ರಂದು ಉದ್ಯೋಗ ಮೇಳ

ಶಿವಮೊಗ್ಗ: ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆಯು ಜ.30 ರಂದು ಬೆಳಗ್ಗೆ 10.00ಕ್ಕೆ ಶಿವಮೊಗ್ಗದ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ, ಗುತ್ಯಪ್ಪ ಕಾಲೋನಿ, ಪಂಪಾನಗರ, 2ನೇ ಕ್ರಾಸ್, ಸಾಗರ ರಸ್ತೆ ಇಲ್ಲಿ ಉದ್ಯೋಗ ಮೇಳವನ್ನು ಆಯೋಜಿಸಲಾಗಿದೆ.

ಸಂದರ್ಶನದಲ್ಲಿ ಪ್ರತಿಷ್ಠಿತ ಖಾಸಗಿ ಕಂಪನಿಗಳು ಭಾಗವಹಿಸಲಿದ್ದು, ಎಸ್ಎಸ್ಎಲ್ಸಿ/ಪಿಯುಸಿ/ ಐಟಿಐ/ ಡಿಪ್ಲೊಮಾ/ಬಿಇ ಮತ್ತು ಪದವಿ/ ಸ್ನಾತಕೋತ್ತರ ಪದವಿ ಉತ್ತೀರ್ಣ ಹೊಂದಿದ ಅಭ್ಯರ್ಥಿಗಳು ಬಯೋಡಾಟಾ ಮತ್ತು ಆಧಾರ್ ಕಾರ್ಡ್ ಪ್ರತಿಯೊಂದಿಗೆ ಸಂದರ್ಶನದಲ್ಲಿ ಭಾಗವಹಿಸುವುದು.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಉದ್ಯೋಗ ವಿನಿಯಮ ಕಚೇರಿ, ದೂ.ಸಂ.: 08182-255293/ 9380663606 /8151093947/ 9482023412 ಇವರನ್ನು ಖುದ್ದಾಗಿ ಸಂಪರ್ಕಿಸುವಂತೆ ಉದ್ಯೋಗಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜ.31 ರಂದು ವಿದ್ಯುತ್ ವ್ಯತ್ಯಯ

ಶಿವಮೊಗ್ಗ: ಶಿವಮೊಗ್ಗ ಮೆಗ್ಗಾನ್ ವಿದ್ಯುತ್ ವಿತರಣಾ ಕೇಂದ್ರದಿಂದ ಸರಬರಾಜಾಗುವ ಫೀಡರ್ ಎಂ.ಜಿ.ಎಫ್-2 ರಲ್ಲಿ ತುರ್ತು ನಿರ್ವಹಣೆ ಕಾಮಗಾರಿ ಹಮ್ಮಿಕೊಂಡಿರುವುದರಿಂದ ಜ.31 ರ ಬೆಳಗ್ಗೆ 09.00 ರಿಂದ ಮಧ್ಯಾಹ್ನ 01.00 ಗಂಟೆಯವರೆಗೆ ಮಿಷನ್ ಕಾಂಪೌಂಡ್, ಜ್ಯುವೆಲ್ ರಾಕ್ ಹೊಟೇಲ್ ಮತ್ತು ಸುತ್ತಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದ್ದು, ಗ್ರಾಹಕರು ಸಹಕರಿಸುವಂತೆ ಮೆಸ್ಕಾಂ ಪ್ರಕಟಣೆ ತಿಳಿಸಿದೆ.

## ಶ್ರೀ ಮಡಿವಾಳ ಮಾಚಿದೇವ ಜಯಂತಿ

ಶಿವಮೊಗ್ಗ: ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಾನಗರ ಪಾಲಿಕೆ, ಕನ್ನಡ ಮತ್ತು ಸಂಸ್ಕೃತಿಕ ಇಲಾಖೆ, ಜಿಲ್ಲಾ ಮಡಿವಾಳ ಸಮಾಜ ಸಂಘ, ಶಿವಮೊಗ್ಗ ಇವರ ಸಂಯುಕ್ತಾಶ್ರಯದಲ್ಲಿ ಫೆಬ್ರವರಿ 01 ರಂದು ಬೆಳಿಗ್ಗೆ 11 ಗಂಟೆಗೆ ಶ್ರೀ ಮಡಿವಾಳ ಮಾಚಿದೇವ ಜಯಂತಿಯನ್ನು ಕುವೆಂಪು ರಂಗಮಂದಿರದಲ್ಲಿ ಆಯೋಜಿಸಲಾಗಿದೆ.

ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖಾ ಹಾಗೂ ಶಿವಮೊಗ್ಗ ಜಿಲ್ಲಾ ಉಸ್ತುವಾರಿ ಸಚಿವ ಎಸ್. ಮಧುಬಂಗಾರಪ್ಪ ಇವರು ಕಾರ್ಯಕ್ರಮದ ಉದ್ಘಾಟನೆ ನೆರವೇರಿಸುವರು. ಶಾಸಕರಾದ ಎಸ್. ಎನ್. ಚನ್ನಬಸಪ್ಪರವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು. ಕನ್ನಡ ಮತ್ತು ಸಂಸ್ಕೃತಿಕ ಇಲಾಖೆ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವ ತಂಗಡಗಿ ಶಿವರಾಜ್ ಸಂಗಪ್ಪ ಮತ್ತು ಯೋಜನೆ ಮತ್ತು ಸಾಂಖ್ಯಿಕ ಇಲಾಖೆ ಸಚಿವ ಹಾಗೂ ಮಲೆನಾಡು ಪ್ರದೇಶ ಅಭಿವೃದ್ಧಿ ಮಂಡಳಿ ಅಧ್ಯಕ್ಷ ಡಿ. ಸುಧಾಕರ್ ಇವರುಗಳು ವಿಶೇಷ ಆಹ್ವಾನಿತರಾಗಿ ಉಪಸ್ಥಿತರಿರಲಿದ್ದಾರೆ.

ಸಂಸದರು, ವಿಧಾನಸಭಾ, ವಿಧಾನ ಪರಿಷತ್ ಶಾಸಕರು, ವಿವಿಧ ನಿಗಮ, ಮಂಡಳಿ, ಪ್ರಾಧಿಕಾರದ ಅಧ್ಯಕ್ಷರು, ಮಹಾನಗರಪಾಲಿಕೆ ಮಹಾಪೌರರು, ಕರ್ನಾಟಕ ಮಡಿವಾಳ ಮಾಚಿದೇವ ಅಭಿವೃದ್ಧಿ ನಿಗಮದ ನಾಮ ನಿರ್ದೇಶಕರು, ಜಿಲ್ಲಾ ಮಡಿವಾಳ ಸಮಾಜದ ಅಧ್ಯಕ್ಷರು, ಜಿಲ್ಲಾಧಿಕಾರಿಗಳು, ಜಿಲ್ಲಾ ಪೊಲೀಸ್ ವರಿಗಣ್ಠಧಿಕಾರಿಗಳು, ಜಿ.ಪಂ ಸಿಇಓ, ಪಾಲಿಕೆ ಆಯುಕ್ತರು, ಕನ್ನಡ ಮತ್ತು ಸಂಸ್ಕೃತಿಕ ಇಲಾಖೆಯ ಸಹಾಯಕ ನಿರ್ದೇಶಕರು, ಜನಪ್ರತಿನಿಧಿಗಳು, ಸರ್ಕಾರಿ ಅಧಿಕಾರಿಗಳು ಸೇರಿದಂತೆ ವಿವಿಧ ಸಂಘಟನೆ ಮುಖಂಡರು ಪಾಲ್ಗೊಳ್ಳುವರು. ಶ್ರೀ ಆದಿಚುಂಚನಗಿರಿ ಅನುದಾನಿತ ಕನ್ನಡ ಶಾಲೆಯ ಶಿಕ್ಷಕ ಮಧುಕುಮಾರ ಎಂ.ಎನ್. ರವರು ವಿಶೇಷ ಉಪನ್ಯಾಸ ನೀಡುವರು.

## ಧಾರವಾಡ ಕೃಷಿ ವಿಶ್ವವಿದ್ಯಾಲಯದ ಸಮುದಾಯ ವಿಜ್ಞಾನ ಮಹಾವಿದ್ಯಾಲಯದಲ್ಲಿ ಖಾಲಿ ಇವರು ಹುದ್ದೆಗಳಿಗೆ ಅರ್ಜಿ ಆಹ್ವಾನ

ಧಾರವಾಡ: ಜಿಲ್ಲೆಯ ಕೃಷಿ ವಿಶ್ವವಿದ್ಯಾಲಯದಲ್ಲಿರುವ, ಸಮುದಾಯ ವಿಜ್ಞಾನ ಮಹಾವಿದ್ಯಾಲಯದ, ಕುಟುಂಬ ವಿಭಾಗದಲ್ಲಿ ಖಾಲಿ ಇರುವ ಪ್ರಯೋಗಾಲಯ ಸಹಾಯಕ, ಕಾರ್ಯಕ್ರಮ ಅಧಿಕಾರಿ, ಕಾರ್ಯಕ್ರಮ ನಿರ್ವಾಹಕರು ಮತ್ತು ಹಿರಿಯ ಕಾರ್ಯಕ್ರಮ ಅಧಿಕಾರಿ ಸೇರಿ ತಾತ್ಕಾಲಿಕ 4 ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಆಸಕ್ತರು ಅರ್ಜಿ ನಮೂನೆಯ ಎರಡು ಪ್ರತಿಗಳೊಂದಿಗೆ ಫೆಬ್ರವರಿ 12, 2024 ರಂದು ಬೆಳಿಗ್ಗೆ 10.30 ಗಂಟೆಗೆ ವಿದ್ಯಾಧಿಕಾರಿಗಳು (ಸವಿ), ಸಮುದಾಯ ವಿಜ್ಞಾನ ಮಹಾವಿದ್ಯಾಲಯದ ಕಚೇರಿಯಲ್ಲಿ ಸಂದರ್ಶನಕ್ಕೆ ಹಾಜರಾಗಬಹುದು.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ. 0836-2214234 ಹಾಗೂ ಕೃಷಿ ವಿಶ್ವವಿದ್ಯಾಲಯದ ಜಾಲತಾಣ ತಿತಿತಿ.ಣಚಿಜ.ಜಜಣ ಗೆ ಸಂಪರ್ಕಿಸಬಹುದೆಂದು ಧಾರವಾಡ ಕೃಷಿ ವಿಶ್ವವಿದ್ಯಾಲಯದ ಸಮುದಾಯ ವಿಜ್ಞಾನ ಮಹಾವಿದ್ಯಾಲಯದ ಡೀನ್ (ಸವಿ) ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜ.30 ರಿಂದ ಫೆ.13ರವರೆಗೆ ಜಿಲ್ಲೆಯಲ್ಲಿ ಸ್ಪರ್ಶ ಕುಷ್ಠರೋಗ ಜಾಗೃತಿ ಅಭಿಯಾನ

ಧಾರವಾಡ: ಬರುವ ಜನವರಿ 30 ರಿಂದ ಫೆಬ್ರುವರಿ 13 ರವರೆಗೆ ಜಿಲ್ಲೆಯಾದ್ಯಂತ ಸ್ಪರ್ಶ ಕುಷ್ಠರೋಗ ಜಾಗೃತಿ ಅಭಿಯಾನವನ್ನು ಹಮ್ಮಿಕೊಳ್ಳಲಾಗಿದ್ದು, ಜನವರಿ 30 ರಂದು ಬೆಳಿಗ್ಗೆ 10 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಭವನದಲ್ಲಿ ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಚಾಲನೆ ನೀಡಲಿದ್ದಾರೆ.

ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯತ ಸಿಇಓ ಸ್ವರೂಪ ಟಿ.ಕೆ., ಸೇರಿದಂತೆ ಜಿಲ್ಲಾ ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು ಭಾಗವಹಿಸಲಿದ್ದಾರೆ.

# ಯೋಜನೆಗಳನ್ನು ಜವಾಬ್ದಾರಿಯಿಂದ ಬಳಸಿಕೊಂಡಾಗ ಸಾರ್ಥಕ: ಎಸ್.ಮಧು ಬಂಗಾರಪ್ಪ

ಶಿವಮೊಗ್ಗ: ತುಂಗಾ ನದಿ ಉತ್ತರದಂಡೆ ಪಾದಚಾರಿ ಸೇತುವೆ, ವಾಯುವಿಹಾರ, ಸಾರ್ವಜನಿಕ ಬೈಸಿಕಲ್ ಯೋಜನೆ ಮುಂತಾದವುಗಳನ್ನು ಸಾರ್ವಜನಿಕರು ಜವಾಬ್ದಾರಿಯಿಂದ ಬಳಸಿಕೊಳ್ಳಬೇಕು. ಹೀಗೆ ಬಳಸಿಕೊಂಡಾಗ ಮಾತ್ರ ಸಾರ್ಥಕವಾಗುತ್ತದೆ ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರಣೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಮಧು ಬಂಗಾರಪ್ಪ ನುಡಿದರು.

ಶಿವಮೊಗ್ಗ ಸ್ಮಾರ್ಟ್ ಸಿಟಿ ಲಿಮಿಟೆಡ್ ವತಿಯಿಂದ ನಿರ್ಮಿಸಲಾಗಿರುವ ತುಂಗಾ ರಿವರ್ ಫ್ರಂಟ್ ಪ್ರಾಜೆಕ್ಟ್ ಹಾಗೂ ಸಾರ್ವಜನಿಕ ಬೈಸಿಕಲ್ ಯೋಜನೆಯನ್ನು ಇಂದು ಸಾರ್ವಜನಿಕರಿಗೆ ಮುಕ್ತಗೊಳಿಸಿ ಅವರು ಮಾತನಾಡಿದರು.

ಜನರು ಕಟ್ಟುವ ಕಂದಾಯದ ಹಣದಿಂದಲೇ ನಿರ್ಮಾಣವಾಗಿರುವ ಸ್ಮಾರ್ಟ್ಸಿಟಿ ಯೋಜನೆಗಳ ಜವಾಬ್ದಾರಿ ನಮ್ಮೆಲ್ಲರ ಮೇಲೆ



ಹಾಗೂ ಸಾರ್ವಜನಿಕರ ಮೇಲಿದೆ. ಈ ಯೋಜನೆಯ ಉಪಯೋಗವನ್ನು ಎಲ್ಲರೂ ಪಡೆಯಬೇಕು. ಸಾರ್ವಜನಿಕರು ತುಂಗಾ ನದಿ ಉದ್ಯಾನವನದಲ್ಲಿ ಓಡಾಡಬೇಕು. ಆಗ ಮಾತ್ರ ಉದ್ಯಾನವನ ನಿರ್ಮಾಣ ಸಾರ್ಥಕವಾಗುತ್ತದೆ.

ಕೇಂದ್ರ ಮತ್ತು ರಾಜ್ಯ ಸರ್ಕಾರ ಶೇ.50.50 ಅನುದಾನದಲ್ಲಿ ಕೆಲಸಗಳು ನಡೆದಿದ್ದು, ತುಂಗಾ ರಿವರ್ ಫ್ರಂಟ್ ಪ್ರಾಜೆಕ್ಟ್ನ್ನು ರೂ.103 ಕೋಟಿ ವೆಚ್ಚದಲ್ಲಿ ನಿರ್ಮಿಸಲಾಗಿದೆ. ಸಾರ್ವಜನಿಕರು ಈ ಯೋಜನೆಗಳನ್ನು ತಮ್ಮ ಆಸ್ತಿ ಎಂದು ಅರಿತು ಸ್ವಚ್ಚತೆ ಹಾಗೂ ಕಾಳಜಿಯಿಂದ ನೋಡಿಕೊಳ್ಳಬೇಕು. ಉದ್ಯಾನವನದಲ್ಲಿ ಮಹಿಳೆಯರು, ಮಕ್ಕಳಿಗೆ ಯಾವುದೇ ತೊಂದರೆ ಆಗದಂತೆ ರಕ್ಷಣಾ ವ್ಯವಸ್ಥೆ, ಸಿಸಿಟಿವಿ ಅವಳವಡಿಸುವುದು, ರಾತ್ರಿ ವೇಳೆ ವಿದ್ಯುದ್ದೀಪ ಸೇರಿದಂತೆ ಯಾವುದೇ ಅಹಿತಕರ ಘಟನೆ ನಡೆಯದಂತೆ ಅಧಿಕಾರಿಗಳು ನೋಡಿಕೊಳ್ಳಬೇಕು ಎಂದರು.

ಉದ್ಯಾನವನ ನಿರ್ವಹಣೆಗಾಗಿ ಸಾರ್ವಜನಿಕರಿಗೆ ಹೊರೆಯಾಗದಂತೆ ಪ್ರವೇಶ ಶುಲ್ಕ ತೆಗೆದುಕೊಳ್ಳುವ ಬಗ್ಗೆ ಸ್ಮಾರ್ಟ್ಸಿಟಿ ಎಂಡಿ ಯವರು ನಿರ್ಧರಿಸುವರು. ಇಲ್ಲಿ ಹಸಿರು, ಸ್ವಚ್ಚತೆ, ಭದ್ರತೆಗೆ ಹೆಚ್ಚಿನ ಪ್ರಾಮುಖ್ಯತೆ ನಿಡಬೇಕು. ಅಂಗಡಿ, ಜಾಹಿರಾತು, ಮಳಿಗೆಗಳಿಗೆ ಅವಕಾಶ ನೀಡಿ ಪ್ರವಾಸೋದ್ಯಮವನ್ನು ಉತ್ತೇಜಿಸಬೇಕು. ಹಾಗೂ ಉತ್ತಮವಾಗಿ ನಿರ್ವಹಣೆ ಮಾಡಬೇಕೆಂದು ಹೇಳಿದರು.

ನಗರದ ಹೃದಯಭಾಗ ಶಿವಪ್ಪನಾಯಕ ವೃತ್ತದಲ್ಲಿ ಪಾಲಿಕೆಗೆ ಹೊಂದಿಕೊಂಡಂತೆ ಹೂವು ಹಣ್ಣು ಮಾಕುಟ್ಟೆಗಾಗಿ 118 ಮಳಿಗೆ, ಮಲ್ಟಿಲೆವೆಲ್ ಕಾರ್ಪಾರ್ಕಿಂಗ್ಗೆ ಒಟ್ಟು 172 ಕಾರು ಮತ್ತು 78 ಬೈಕ್ ನಿಲುಗಡೆಗೆ ವ್ಯವಸ್ಥೆ ಮಾಡಲಾಗಿದೆ.

ಶಾಸಕರಾದ ಎಸ್ ಎನ್ ಚನ್ನಬಸಪ್ಪ ಮಾತನಾಡಿ, ಸ್ಮಾರ್ಟ್ಸಿಟಿ ಕಾಮಗಾರಿಗಳು ಉತ್ತಮವಾಗಿ ಆಗಿದ್ದು ಇಂದು ಸಾರ್ವಜನಿಕರಿಗೆ ಮುಕ್ತಗೊಳಿಸುವ ಕಾರ್ಯ ನಡೆದಿದೆ. ಈ ಸ್ಮಾರ್ಟ್ಸಿಟಿ ಯೋಜನೆ ಮಂಜೂರಾತಿ ಮತ್ತು ಅನುಷ್ಠಾನದಲ್ಲಿ ಅನೇಕರ ನಾಯಕರ ಪ್ರಯತ್ನ ಮತ್ತು ಶ್ರಮವಿದೆ.

ನಗರದ 6 ವಾರ್ಡ್ಗಳಲ್ಲಿ ಪೂರ್ಣ ಪ್ರಮಾಣ ಮತ್ತು 9 ವಾರ್ಡುಗಳಲ್ಲಿ ಭಾಗಶಃ ಸ್ಮಾರ್ಟ್ಸಿಟಿ ಕೆಲಸಗಳು ಆಗಿವೆ. ಮುಂದಿನ ಹಂತದಲ್ಲಿ ಇತರೆ ವಾರ್ಡುಗಳನ್ನು ಪರಿಗಣಿಸಲಾಗುವುದು ಎಂದರು.


ಕಾರ್ಯಕ್ರಮದಲ್ಲಿ ಮಾಜಿ ವಿಧಾನಪರಿಷತ್ ಶಾಸಕರಾದ ಆಯನೂರು ಮಂಜುನಾಥ್, ಮಹಾನಗರಪಾಲಿಕೆ ಮಾಜಿ ಸದಸ್ಯ ಯೋಗೇಶ್, ಗನ್ನಿ ಶಂಕರ್, ಧೀರರಾಜ್ ಹೊನ್ನವಿಲೆ, ಶಬನಾ ಖಾನಂ, ಸ್ವತಂತ್ರ ನಿರ್ದೇಶಕಿ ಲಕ್ಷ್ಮಿ ಗೋಪಿನಾಥ್, ಸ್ಮಾರ್ಟ್ ಸಿಟಿ ಎಂಡಿ ಕೆ. ಮಾಯಾಣ್ಣಗೌಡ, ಮುಖ್ಯಇಂಜನಿಯರ್ ರಂಗನಾಥ ಮತ್ತು ಅಧಿಕಾರಿಗಳು ಸಿಬ್ಬಂದಿಗಳು ಇದ್ದರು.

## ಹಾಸ್ಟೆಲ್‌ನಲ್ಲಿಯೇ ಹೆಣ್ಣು ಮಗುವಿಗೆ ಜನ್ಮ ನೀಡಿದ ವಿದ್ಯಾರ್ಥಿನಿ ಸಾವು

ವಿಜಯವಾಡ: ಆಂಧ್ರಪ್ರದೇಶದ ನಂದ್ಯಾಲ ಜಿಲ್ಲೆಯ ಪಾಣ್ಯಂ ಮಂಡಲದಲ್ಲಿರುವ ಇಂಜಿನಿಯರಿಂಗ್ ಕಾಲೇಜಿನಲ್ಲಿ ಓದುತ್ತಿದ್ದ ವಿದ್ಯಾರ್ಥಿನಿ ಹಾಸ್ಟೆಲ್‌ನಲ್ಲಿ ಮಗುವಿಗೆ ಜನ್ಮ ನೀಡಿದ್ದಾಳೆ. ಹೆಣ್ಣು ಮಗುವಿಗೆ ಜನ್ಮ ನೀಡಿದ ಬಳಿಕ ತೀವ್ರ ರಕ್ತಸ್ರಾವದಿಂದ ವಿದ್ಯಾರ್ಥಿನಿ ಸಾವನ್ನಪ್ಪಿದ್ದಾಳೆ.

ಈ ವಿಷಯ ಬೆಳಕಿಗೆ ಬಂದ ನಂತರ ಪೊಲೀಸರು ತನಿಖೆ ಕೈಗೊಂಡಿದ್ದಾರೆ. ಕಸದ ತೊಟ್ಟಿಯಲ್ಲಿ ಮಗುವಿನ ಮೃತದೇಹ ಪತ್ತೆಯಾಗಿದೆ. ಗರ್ಭಪಾತ ಮಾತ್ರೆ ಹೆಚ್ಚಾಗಿ ಸೇವಿಸಿದ್ದರಿಂದ ತೀವ್ರ ರಕ್ತಸ್ರಾವದಿಂದ ವಿದ್ಯಾರ್ಥಿನಿ ಸಾವನ್ನಪ್ಪಿದ್ದಾಳೆ ಎಂದು ವೈದ್ಯರು ತಿಳಿಸಿದ್ದಾರೆ.

ಮೃತ ವಿದ್ಯಾರ್ಥಿನಿಗೆ ಸಾಮಾಜಿಕ ಜಾಲತಾಣದ ಮೂಲಕ ಪರಿಚಯವಾಗಿ ಕ್ಯಾಬ್ ಚಾಲಕನ ಮೇಲೆ ಪ್ರೇಮಾಂಕುರವಾಗಿತ್ತು. ಆಗಾಗ್ಗೆ ಭೇಟಿಯಾಗುತ್ತಿದ್ದರು.



ಮೊಬೈಲ್ನಲ್ಲಿ ಹೆಚ್ಚು ಮಾತನಾಡುತ್ತಿದ್ದರು. ಹುಡುಗಿ ಹಾಸ್ಟೆಲ್ನಿಂದ ಮನೆಗೆ ಹೋದಾಗ ಈತನೇ ಕ್ಯಾಬ್ನಲ್ಲಿ ಡ್ರಾಪ್ ಮಾಡುತ್ತಿದ್ದ ಎಂದು ಪ್ರಾಥಮಿಕ ವರದಿಯಲ್ಲಿ ತಿಳಿದು ಬಂದಿದೆ ಈ ಘಟನೆ ಶನಿವಾರ ಬೆಳಕಿಗೆ ಬಂದಿದೆ.

ಐಫ್ಐಆರ್ ಮಾಹಿತಿ ಪ್ರಕಾರ, 3 ತಿಂಗಳ ಹಿಂದೆ ನಂದ್ಯಾಲ ಜಿಲ್ಲೆಯ ಪಾಣ್ಯಂ ಮಂಡಲದ ಇಂಜಿನಿಯರಿಂಗ್ ಕಾಲೇಜಿನಲ್ಲಿ ಎರಡನೇ ವರ್ಷ ಓದುತ್ತಿದ್ದಾಳೆ. ಈಕೆ ಕಾಲೇಜಿನ ಹಾಸ್ಟೆಲ್ನಲ್ಲಿ ಉಳಿದುಕೊಂಡಿದ್ದಳು.

ಏಪ್ರಿಲ್ 8 ರಂದು ಅನಾರೋಗ್ಯದ ಕಾರಣಕ್ಕಾಗಿ ಕಾಲೇಜಿಗೆ ಹೋಗದೆ ಹಾಸ್ಟೆಲ್ನಲ್ಲಿ ಉಳಿದುಕೊಂಡಿದ್ದಳು. ಮಧ್ಯಾಹ್ನ ತನ್ನ ಸ್ನೇಹಿತರು ಬಂದು ನೋಡಿದಾಗ ರಕ್ತದ ಮಡುವಿನಲ್ಲಿ ಪ್ರಜ್ಞಾಹೀನ ಸ್ಥಿತಿಯಲ್ಲಿ ಬಿದ್ದಿರುವುದು ಕಂಡು ಬಂದಿದೆ. ಬಳಿಕ ಕಸದ ಡಬ್ಬಿಯಲ್ಲಿ ಮಗುವಿನ ಶವ ಪತ್ತೆ ಹಚ್ಚಿದ್ದಾರೆ.

ವಿದ್ಯಾರ್ಥಿನಿ ಗರ್ಭಿಣಿ ಎಂಬ ಅಂಶವನ್ನು ಕಾಲೇಜು ಆಡಳಿತ ಮಂಡಳಿ ಗುರುತಿಸದಿರುವುದು ಖಂಡನೀಯವಾದದ್ದು ಎಂದು ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ. ಈ ಕುರಿತು ಪೊಲೀಸರು ಪ್ರಕರಣ ದಾಖಲಿಸಿಕೊಂಡು ತನಿಖೆ ನಡೆಸುತ್ತಿದ್ದಾರೆ.

## ಮೃತದೇಹ ಪತ್ತೆ



ಬೆಳಗಾವಿ: ಜ.21 ರಂದು ರೈಲ್ವೆ ಸ್ಟೇಷನ ಹತ್ತಿರ ಇರುವ ಗೋವಾ ಬಸ್ ನಿಲ್ದಾಣದ ಹತ್ತಿರ ಅನಾರೋಗ್ಯದಿಂದ ಸಿಕ್ಕಿದ್ದು, ಅಂದಿನಿಂದ ಜ.28 ರವರೆಗೆ ಜಿಲ್ಲಾ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾಗ ಚಿಕಿತ್ಸೆ ಫಲಿಸದೆ ಜ.28 ರಂದು ಮೃತಪಟ್ಟಿದ್ದಾನೆ.

ಮೃತ ವ್ಯಕ್ತಿಯ 40-45 ವರ್ಷ ವಯಸ್ಸು ಇರುತ್ತದೆ. ಶವವು ವಾರಸುದಾರರು ಯಾರೂ ಇಲ್ಲದೇ ಇರುವುದರಿಂದ ಮೃತನ ಶವವನ್ನು ಜ. 29 ರಿಂದ 31 ರವರೆಗೆ ಮೂರು ದಿನಗಳ ಮಟ್ಟಿಗೆ ಜಿಲ್ಲಾ ಆಸ್ಪತ್ರೆ ಶವಾಗಾರದ ಶೀತಾಗಾರದಲ್ಲಿ ಇರಿಸಲಾಗಿದೆ.

ಮೃತನ ಚಹರೆ:
ಎತ್ತರ 5 ಪೂಟ 2 ಇಂಚ. ಉದ್ದ ಮುಖ, ಅಗಲ ಮೂಗು, ಗೋಧಿ ಮೈಬಣ್ಣ. 1 ಇಂಚ ಕರಿ ಗಡ್ಡ ಇರುತ್ತವೆ. ನೀಲಿ ಬಣ್ಣದ ಟೀ ಶರ್ಟ್, ಕಪ್ಪು ಬಣ್ಣದ ಟ್ರ್ಯಾಕ್‌ಸೂಟ್ ಪ್ಯಾಂಟ್ ಧರಿಸಿರುತ್ತಾನೆ.

ಸದರಿ ಮೃತನ ಬಗ್ಗೆ ಮಾಹಿತಿ ಸಿಕ್ಕಲ್ಲಿ ಜಿಲ್ಲೆಯ ಕ್ಯಾಂಪ್ ಪೋಲೀಸ್ ಠಾಣೆ ಸಂಖ್ಯೆ 0831-2405234/0831-2405255 ಪೊಲೀಸ್ ಕಂಟ್ರೋಲ್ ರೂಂ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಪಘಾತ: ನಾಲ್ವರು ವಿದ್ಯಾರ್ಥಿಗಳ ದುರ್ಮರಣ




ಬಾಗಲಕೋಟೆ: ಶಾಲಾ ಬಸ್ ಹಾಗೂ ಟ್ಯಾಕ್ಟರ್ ನಡುವೆ ಸಂಭವಿಸಿದ ಭೀಕರ ಅಪಘಾತದಲ್ಲಿ ನಾಲ್ವರು ವಿದ್ಯಾರ್ಥಿಗಳು ದುರ್ಮರಣಕ್ಕೀಡಾಗಿರುವ ಘಟನೆ ಬಾಗಲಕೋಟೆಯ ಜಿಲ್ಲೆ ಜಮಖಂಡಿ ತಾಲ್ಲೂಕಿನ ಅಲಗೂರು ಗ್ರಾಮದಲ್ಲಿ ನಡೆದಿದೆ.

ತಡರಾತ್ರಿ ನಡೆದ ಘಟನೆಯಲ್ಲಿ ಓರ್ವ ವಿದ್ಯಾರ್ಥಿನಿ ಸೇರಿದಂತೆ ನಾಲ್ವರು ವಿದ್ಯಾರ್ಥಿಗಳು ಸಾವನ್ನಪ್ಪಿದ್ದು, 8ಕ್ಕೂ ಹೆಚ್ಚು ವಿದ್ಯಾರ್ಥಿಗಳು ಗಾಯಗೊಂಡಿದ್ದಾರೆ. ಸಾಗರ ಕಡಕೋಳ (17), ಶ್ವೇತಾ (13), ಗೋವಿಂದ(13), ಬಸವರಾಜ (17) ಮೃತ ವಿದ್ಯಾರ್ಥಿಗಳು.

ಮೃತರು ವರ್ಧಮಾನ ಶಿಕ್ಷಣ ಸಂಸ್ಥೆಯ ವಿದ್ಯಾರ್ಥಿಗಳಾಗಿದ್ದು, ಇಬ್ಬರು ಪಿಯುಸಿ, ಮತ್ತಿಬ್ಬರು 9ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿದ್ದರು ಎಂದು ಪ್ರಾಥಮಿಕ ಮೂಲಗಳು ತಿಳಿಸಿವೆ. ಭಾನುವಾರ ಸ್ನೇಹಿತರೊಟ್ಟಿಗೆ ಕಾರ್ಯಕ್ರಮ ಮುಗಿಸಿಕೊಂಡು ಕವಟಗಿ ಗ್ರಾಮದ ಕಡೆಗೆ ಸ್ಕೂಲ್‌ಬಸ್ ಹೊರಟಿತ್ತು. ರಾತ್ರಿ 12 ಗಂಟೆ ಸುಮಾರಿಗೆ ಅಪಘಾತ ಸಂಭವಿಸಿದೆ. ಸದ್ಯ ಘಟನೆಗೆ ನಿಖರ ಕಾರಣ ತಿಳಿದುಬಂದಿಲ್ಲ. ಇನ್ನೋವಾ ಕಾರ್ ಟೈಯರ್ ಬ್ಲಾಸ್ಟ್: ಅತೀ ವೇಗವಾಗಿ ಬರುತ್ತಿದ್ದ ಇನ್ನೋವಾ ಕಾರಿನ ಟಯರ್ ಬ್ಲಾಸ್ಟ್ ಆಗಿದ್ದು, ನೋಡನೋಡ್ತಿದ್ದಂತೆ ಆಟೋಗೆ ಡಿಕ್ಕಿಯೊಡೆದಿದೆ. ಇನ್ನೋವಾ ಕಾರ್ ಗುದ್ದಿದ ರಭಸಕ್ಕೆ ಮನೆಯ ಕಾಂಪೌಂಡ್ ಉಡೀಸ್ ಆಗಿರೋ ಘಟನೆ ಬೆಂಗಳೂರಿನ ಲಾಲ್‌ಬಾಗ್ ರಸ್ತೆಯಲ್ಲಿ ನಡೆದಿದೆ.

ಅಪಘಾತದ ಭಯನಕ ದೃಶ್ಯ ಸಿಸಿಟಿಯಲ್ಲಿ ಸೆರೆಯಾಗಿದೆ. ಖಾಲಿ ರಸ್ತೆಯಲ್ಲಿ ಅತಿ ವೇಗವಾಗಿ ಲಾಲ್‌ಬಾಗ್ ರಸ್ತೆ ಮೂಲಕ ಜಯ ನಗರದ ಕಡೆ ಹೋಗುತ್ತಿದ್ದ ಕಾರ್‌ನ ಟಯರ್ ಇದ್ದಕ್ಕಿದ್ದಂತೆ ಬ್ಲಾಸ್ಟ್ ಆಗಿದೆ. ಬ್ಲಾಸ್ಟ್ ಆದ ಕ್ಷಣದಲ್ಲೇ ಯಮ ಸ್ವರೂಪಿಯಂತೆ ಕಾರು ನುಗ್ಗಿದ್ದು, ಕೂದಲೆಳೆ ಅಂತರಲ್ಲಿ ವೃದ್ಧ ಪಾರಾಗಿದ್ದಾರೆ. ಘಟನೆಯಲ್ಲಿ ಕಾಂಪೌಂಡ್ ನೆಲಕ್ಕುರುಳಿದ್ದು, ಆಟೋ ಹಾಗೂ ಕಾರು ಜಖಂಗೊಂಡಿದೆ. ಘಟನೆ ಸಂಬಂಧ ವಿವಿಪುರಂ ಸಂಚಾರ ಪೊಲೀಸ್ ಠಾಣೆಯಲ್ಲಿ ಕೇಸ್ ದಾಖಲಾಗಿದೆ.

## ಪಿ.ಎಚ್.ಡಿ ಪದವಿ ಪ್ರಧಾನ



ಧಾರವಾಡ: ಧಾರವಾಡ ನಿವಾಸಿ ಆಗಿರುವ ಸಹಾಯಕ ಪ್ರಾಧ್ಯಾಪಕಿ ಈರವ್ವ ಮಾಡಳ್ಳಿ ಅವರಿಗೆ ರಾಜ್ಯಶಾಸ್ತ್ರ ವಿಷಯದಲ್ಲಿ ಮಂಡಿಸಿದ್ದ ಮಹಾಪ್ರಬಂಧಕ್ಕೆ ಶಿವಮೊಗ್ಗದ ಕುವೆಂಪು ವಿಶ್ವವಿದ್ಯಾಲಯವು ಪಿಎಚ್ಡಿ ಪದವಿ ಪ್ರಧಾನಮಾಡಿದೆ.

ಸಹಾಯಕ ಪ್ರಾಧ್ಯಾಪಕಿ ಈರವ್ವ ಮಾಡಳ್ಳಿ ಅವರು ಚಿತ್ರದುರ್ಗದ ಎಸ್.ವಾಯ್.ಬಿ ಮಹಿಳಾ ಪ್ರಥಮ ದರ್ಜೆ ಕಾಲೇಜಿನಲ್ಲಿ ರಾಜ್ಯಶಾಸ್ತ್ರ ವಿಭಾಗದ ಸಹಾಯಕ ಪ್ರಾಧ್ಯಾಪಕಿಯಾಗಿ ಸೇವೆ ಸಲ್ಲಿಸುತ್ತಿದ್ದಾರೆ.

ಈರವ್ವ ಮಹಾಂತೇಶ ಮಾಡಳ್ಳಿ ಅವರು ಮಾನವ ಹಕ್ಕುಗಳು ಮತ್ತು ಮಹಿಳಾ ಸಬಲೀಕರಣ ಧಾರವಾಡ ಜಿಲ್ಲೆಯ ಒಂದು ಅಧ್ಯಯನ ವಿಷಯ ಕುರಿತು ತುಮಕೂರು ವಶ್ವವಿದ್ಯಾಲಯದ ಕುಲಸಚಿವರಾದ ಪ್ರೊ. ಪ್ರಸನ್ನಕುಮಾರ. ಕೆ. ಇವರು ಮಾರ್ಗದರ್ಶನದಲ್ಲಿ ಮಂಡಿಸಿದ ಮಹಾಪ್ರಬಂಧವನ್ನು ಮನ್ನಿಸಿ ಶಿವಮೊಗ್ಗದ ಕುವೆಂಪು ವಿಶ್ವವಿದ್ಯಾಲಯವು ಪಿ.ಎಚ್.ಡಿ ಪದವಿ ಪ್ರಧಾನ ಮಾಡಿದೆ.

# ಚಿನ್ನದ ಅಂಗಡಿ ಮೇಲೆ ನಕಲಿ ಅಧಿಕಾರಿಗಳ ದಾಳಿ; ಆರೋಪಿಗಳು ಅರೆಸ್ಟ್

ಬೆಂಗಳೂರು: ಬ್ಯೂರೋ ಆಫ್ ಇಂಡಿಯನ್ ಸ್ಟ್ಯಾಂಡರ್ಡ್ಸ್ ಅಧಿಕಾರಿಗಳು ಅಂತ ಹೇಳಿ ಇದೇ ತಿಂಗಳು 27 ರಂದು ಇನೋವ್ ಕಾರ್ನಲ್ಲಿ ಎಂಟ್ರಿ ಕೊಟ್ಟಿದ್ದ ನಾಲ್ವರು ಕೆಆಪುರಂನಲ್ಲಿರುವ ಮಹಾಲಕ್ಷ್ಮಿ ಜ್ಯುವೆಲರ್ಸ್ ಮೇಲೆ ದಾಳಿ ಮಾಡಿದ್ದರು.

ಬೆಂಗಳೂರಿನ ಹಲವು ಬಂಗಾರದ ಅಂಗಡಿಗಳ ಮೇಲೆ ದಾಳಿ ಮಾಡಲಾಗಿದೆ ಅದರಲ್ಲಿ ನಿಮ್ಮದೂ ಒಂದು. ಹಾಲ್ ಮಾರ್ಕ್ ಇಲ್ಲದೆ ಅಕ್ರಮವಾಗಿ ನೀವು ಚಿನ್ನ ಮಾರಾಟ ಮಾಡುತ್ತಿದ್ದೀರಿ ಎಂಬ ಮಾಹಿತಿ ನಮಗೆ ದೊರೆತಿದೆ. ಹೀಗಾಗಿ ದಾಳಿ ಮಾಡಿದ್ದೇವೆ ಎಂದು ನಕಲಿ ಅಧಿಕಾರಿಗಳು ಹೇಳಿದ್ದಾರೆ. ಬಳಿಕ 45 ನಿಮಿಷ ಕಾರ್ಯಾಚರಣೆ ನಡೆಸಿದ ನಕಲಿ ಅಧಿಕಾರಿಗಳು, ಅಂಗಡಿಯಲ್ಲಿದ್ದ 80 ಲಕ್ಷ ರೂ. ಮೌಲ್ಯದ 1 ಕೆಜಿಗೂ ಅಧಿಕ ಚಿನ್ನ ತೆಗೆದುಕೊಂಡರು.



ಇವೆಲ್ಲವನ್ನೂ ಸೀಜ್ ಮಾಡುವುದಾಗಿ ನಕಲಿ ಅಧಿಕಾರಿಗಳು ಹೇಳಿದ್ದರು. ಬಳಿಕ ಅಂಗಡಿ ಮಾಲಿಕನ ಕೈಗೆ ನಕಲಿ ನೋಟಿಸ್ ನೀಡಿ, ಮುಂದಿನ ವಾರ ತಮಿಳುನಾಡಿನ ಕಚೇರಿಗೆ ಬರುವಂತೆ ಹೇಳಿ ಹೋದರು. ಹೀಗೆ ಹೋಗುವಾಗ ನಕಲಿ ಅಧಿಕಾರಿಗಳು ಎಡವಟ್ಟು ಮಾಡಿಕೊಂಡಿದ್ದಾರೆ.

ನಕಲಿ ಅಧಿಕಾರಿಗಳು ಚಿನ್ನದ ಅಂಗಡಿಯಿಂದ ಹೊರಡುವಾಗ ಸಿಸಿಟಿವಿ ಡಿವಿಆರ್ ತೆಗೆದುಕೊಂಡು ಹೋಗಿದ್ದಾರೆ. ಇದನ್ನು ಕಂಡು ಅನುಮಾನಗೊಂಡ ಚಿನ್ನದ ಅಂಗಡಿ ಕೆಲ ಸಿಬ್ಬಂದಿಗಳು, ನಕಲಿ ಅಧಿಕಾರಿಗಳನ್ನು ಹಿಂಬಾಲಿಸಿಕೊಂಡು ಹೋಗಿದ್ದಾರೆ.

ಇದನ್ನು ತಿಳಿದ ನಕಲಿ ಅಧಿಕಾರಿಗಳು, ತಪ್ಪಿಸಿಕೊಳ್ಳುವ ಬರದಲ್ಲಿ ಟಿಸಿ ಪಾಳ್ಯದಲ್ಲಿ ಬೈಕ್ಗಳಿಗೆ ಗುದ್ದಿದ್ದಾರೆ.

ಇತ್ತ ಅಂಗಡಿ ಮಾಲಿಕರಿಗೂ ಅನುಮಾನ ಬಂದು ಕೆಆಪುರಂ ಪೊಲೀಸರಿಗೆ ದೂರು ನೀಡಿದ್ದಾರೆ. ದೂರು ದಾಖಲಾಗುತಿದ್ದಂತೆ, ಪೊಲೀಸರಿಗೆ ಸರಣಿ ಅಪಘಾತದ ಮಾಹಿತಿ ದೊರೆತಿದೆ. ಕೂಡಲೇ ಅಲರ್ಟ್ ಆದ ಪೊಲೀಸರು ಟಿಸಿ ಪಾಳ್ಯದ ಕಡೆಗೆ ಹೋಗಿದ್ದಾರೆ. ಪೊಲೀಸರು ಬರುವುದನ್ನು ಕಂಡ ನಕಲಿ ಅಧಿಕಾರಿಗಳು ಪರಾರಿಯಾಗಲು ಯತ್ನಿಸಿದ್ದಾರೆ. ಪೊಲೀಸರು ಚೇಸ್ ಮಾಡಿ ಆರೋಪಿಗಳನ್ನು ಬಂಧಿಸಿದ್ದಾರೆ.

ಸಂಪತ್ ಕುಮಾರ್, ಜೊಶಿ ಥಾಮಸ್, ಅವಿನಾಶ್, ಸಂದೀಪ್ ಬಂಧಿತಕ ನಕಲಿ ಅಧಿಕಾರಿಗಳು. ಸಂಪತ್ ಈ ಹಿಂದೆ ಮಂಡ್ಯದಲ್ಲಿ ಸಹ ಕಳ್ಳತನ ಕೃತ್ಯ ಎಸಗಿದ್ದನು. ಈ ಪ್ರಕರಣ ಸಂಬಂಧ ಜೈಲು ವಾಸ ಅನುಭವಿಸಿ ಬಿಡುಗಡೆಯಾಗಿದ್ದನು. ಅದಾದ ಬಳಿಕ ತಮಿಳುನಾಡು ಮೂಲದ ಓರ್ವ ವ್ಯಕ್ತಿಯ ಸಂಪರ್ಕಕ್ಕೆ ಬಂದಿದ್ದಾನೆ. ಆತನ ನಿರ್ದೇಶನದಂತೆ ಈ ಕೃತ್ಯಕ್ಕೆ ಕೈ ಹಾಕಿದ್ದಾನೆ.

ಆರೋಪಿಗಳು ಅರೆಸ್ಟ್ ಆಗುತ್ತಿದ್ದಂತೆ ತಮಿಳುನಾಡು ಮೂಲದ ಮಾಸ್ಟರ್ ಮೈಂಡ್ ನಾಪತ್ತೆಯಾಗಿದ್ದಾನೆ. ಕೆಆಪುರಂ ಪೊಲೀಸರು ಆರೋಪಿಗಾಗಿ ಬಲೆ ಬೀಸಿದ್ದಾರೆ. ಕಳ್ಳತನವಾಗಿದ್ದ ಸಂಪೂರ್ಣ ಚಿನ್ನವನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ.

## ಡಾ.ಪ್ರಭಾಕರ ಕೋರೆಯವರಿಗೆ ಶ್ರೇಷ್ಠ ಕನ್ನಡಿಗ ಪ್ರಶಸ್ತಿ



ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿಯವರ 64ನೇ ಹುಟ್ಟುಹಬ್ಬದ ನಿಮಿತ್ತವಾಗಿ ಶಿಗ್ಗಾವಿಯಲ್ಲಿ ಜರುಗಿದ ಸಮಾರಂಭವದಲ್ಲಿ ಕೆಎಲ್‌ಇ ಸಂಸ್ಥೆಯ ಕಾರ್ಯಾಧ್ಯಕ್ಷರಾದ ಡಾ.ಪ್ರಭಾಕರ ಕೋರೆಯವರಿಗೆ ಹಾಗೂ ಆಳ್ವಾಸ ಶಿಕ್ಷಣದ ಸಂಸ್ಥೆಯ ಮುಖ್ಯಸ್ಥರಾದ ಮೋಹನ್ ಆಳ್ವಾ ಅವರಿಗೆ ಶ್ರೇಷ್ಠ ಕನ್ನಡಿಗ ಪ್ರಶಸ್ತಿಯನ್ನು ನೀಡಿ ಗೌರವಿಸಿದ್ದಾರೆ.

ಕನ್ನಡ ನಾಡು ನುಡಿ ಸೇವೆಯನ್ನು ಗೈದ ಸಾಧಕರಿಗೆ ಈ ಪ್ರಶಸ್ತಿಯನ್ನು ಕೊಡಮಾಡಲಾಗಿದ್ದು ಜರುಗಿದ ಸಮಾರಂಭದಲ್ಲಿ ಮಾಜಿ ಸಿಎಂ ಬಸವರಾಜ ಬೊಮ್ಮಾಯಿಯವರು ಪ್ರಶಸ್ತಿ ಪ್ರದಾನ ಮಾಡಿದರು. ಈ ಸಂದರ್ಭದಲ್ಲಿ ಮಾಜಿ ಸಚಿವ ಸಿ. ಸಿ. ಪಾಟೀಲ, ಹಾವೇರಿಯ ಶ್ರೀಗಳು ಮೊದಲಾದ ಗಣ್ಯರು ಉಪಸ್ಥಿತರಿದ್ದರು.

# ರಾಷ್ಟ್ರೀಯ ಪ್ರಥಮ ಮಹಿಳಾ ಸಮಾವೇಶ ಸಮಾರೋಪ

ಬೆಳಗಾವಿ: ಎರಡು ದಿನಗಳ ಕಾಲ ನಾಗನೂರು ರುದ್ರಾಕ್ಷಿ ಮಠದ ಆರ್ ಎನ್ ಶೆಟ್ಟಿ ಪಾಲಿಟೆಕ್ನಿಕ್ ಮಹಾವಿದ್ಯಾಲಯದ ಆವರಣದಲ್ಲಿ ಆಯೋಜಿಸಿದ್ದ ರಾಷ್ಟ್ರೀಯ ಪ್ರಥಮ ಮಹಿಳಾ ಸಮಾವೇಶ ಅತ್ಯಂತ ಯಶಸ್ವಿಯತವಾಗಿ ಸಮಾರೋಪಗೊಂಡಿತು.

ರಾಷ್ಟ್ರೀಯ ಪ್ರಥಮ ಮಹಿಳಾ ಸಮಾವೇಶದ ಸಮಾರೋಪ ಸಮಾರಂಭವನ್ನು ಉದ್ದೇಶಿಸಿ ಮಾತನಾಡಿದ ಸಮಾವೇಶದ ಸರ್ವಾಧ್ಯಕ್ಷೆ ಕೂಡಲಸಂಗಮ ಬಸವ ಧರ್ಮಪೀಠದ ಜಗದ್ಗುರು ಡಾ. ಗಂಗಾ ಮಾತಾಜಿ ಅವರು ಲಿಂಗಾಯತ ಸ್ವತಂತ್ರ ಧರ್ಮಕ್ಕೆ ಸಾಂವಿಧಾನಿಕ ಮಾನ್ಯತೆ ಪಡೆಯಲು ನಾವೆಲ್ಲರೂ ಇನ್ನೂ ಹೆಚ್ಚಿನ ಮಟ್ಟದಲ್ಲಿ ಹೋರಾಟ ಮುಂದುವರೆಸುವ ಅನಿವಾರ್ಯತೆ ಇದೆ. ಸಮಾಜ ಈಗ ಜಾಗೃತವಾಗಿದ್ದು, ಸರ್ಕಾರ ಸಹ ನಮ್ಮ ಮನವಿಗೆ ಸಕಾರಾತ್ಮಕವಾಗಿ ಸ್ಪಂದಿಸಬೇಕು ಎಂದರು.

ಸಮಾರೋಪ ನುಡಿಗಳನ್ನಾಡಿದ ತರಳಬಾಳು ಜಗದ್ಗುರು ಶಾಖಾ ಮಠದ ಪಂಡಿತಾರಾಧ್ಯ ಶಿವಾಚಾರ್ಯ ಸ್ವಾಮೀಜಿ ಮಾತನಾಡಿ 12ನೇ ಶತಮಾನದಲ್ಲಿ ಬಸವಾದಿ ಶಿವಶರಣರು ತಂದುಕೊಟ್ಟ ಸಮಾನತೆಯನ್ನು ಮುಂದುವರೆಸಿಕೊಂಡು ಹೋಗುವಲ್ಲಿ ನಾವು ವಿಫಲರಾಗಿದ್ದೇವೆ. ವೈಚಾರಿಕವಾಗಿ




ಬೌದ್ಧಿಕವಾಗಿ ಉನ್ನತ ಸ್ಥಾನದಲ್ಲಿ ಇರುವ ಆಧುನಿಕ ಮಹಿಳೆಯರು ಶರಣರು ಹಾಕಿಕೊಟ್ಟ ಮಾರ್ಗದಲ್ಲಿ ಛಲದಿಂದ ಮುಂದುವರರಯುತ್ತಾ ಕಾಡುವ, ಬೇಡುವ, ಪೀಡಿಸುವ ದೇವರನ್ನು ಮೂಲೆಗುಂಪು ಮಾಡಬೇಕು ಎಂದರು. ಬೇಕು ಬೇಕು ಎನ್ನುವ ದಾಹವನ್ನು ತೊರೆದು ಸಾಕು ಸಾಕು ಅನ್ನುವ ಸಂತೃಪ್ತ ಭಾವವನ್ನು ಹೊಂದಬೇಕು ಎಂದು ಕಿವಿಮಾತು ಹೇಳಿದರು.

ಸಮಾರೋಪ ಸಮಾರಂಭದಲ್ಲಿ ಆಶೀರ್ವಚನ ನೀಡಿದ ಬಾಲ್ಕಿ ಹಿರೇಮಠ ಸಂಸ್ಥಾನದ ಡಾ. ಬಸವಲಿಂಗ ಪಟ್ಟದ್ದೇವರು ಮಾತನಾಡಿ ಮಹಿಳೆಯರ ಬಗ್ಗೆ ಸಮಾಜದಲ್ಲಿದ್ದ ಕೀಳರಿಮೆಯನ್ನು ಹೋಗಲಾಡಿಸಿ ಶರಣರು ಮಹಿಳೆಯರನ್ನು ಮುನ್ನೆಲೆಗೆ ತಂದದ್ದು ಆಧುನಿಕವಾಗಿ ಅವರು ಸಾಧನೆ ಮಾಡಲು ಸಹಕಾರಿಯಾಗಿದೆ ಎಂದರು.

ಸಮಾರಂಭದ ನೇತೃತ್ವ ನುಡಿಗಳನ್ನು ಆಡಿದ ನಾಗನೂರು ರುದ್ರಾಕ್ಷಿ ಮಠದ ಡಾ. ಅಲ್ಲಮಪ್ರಭು ಮಹಾಸ್ವಾಮೀಜಿ ಮಾತನಾಡಿ ಶಿವಯೋಗ, ಲಿಂಗಾಯತ ಧರ್ಮದ ಆತ್ಮವಿದ್ದಂತೆ ಎಂದು ತಿಳಿಸುತ್ತಾ ಸಮಾವೇಶದಲ್ಲಿ ಉಪಸ್ಥಿತರಿದ್ದ ಮಹಿಳೆಯರಲ್ಲಿನ ಬಸವ ತತ್ವದ ಬೆಳಕನ್ನು ಕಂಡು ಹರ್ಷ ವ್ಯಕ್ತಪಡಿಸಿದರು.

ಇಳಕಲ್ ವಿಜಯ ಮಹಾಂತೇಶ್ವರ ಮಠದ ಗುರುಮಹಾಂತ ಮಹಾ ಸ್ವಾಮೀಜಿ ಸಮಾರಂಭದ ಅಧ್ಯಕ್ಷತೆ ವಹಿಸಿದ್ದರು.

ಇದೇ ಸಂದರ್ಭದಲ್ಲಿ ರಾಜ್ಯ ಸರ್ಕಾರದಿಂದ ಬಸವ ಶ್ರೀ ಪ್ರಶಸ್ತಿಗೆ ಪುರಸ್ಕೃತರಾದ ಖ್ಯಾತ ಸಾಹಿತಿ ಎಸ್.ಜಿ. ಮಹದೇವಪ್ಪ ಹಾಗೂ ನಿವೃತ್ತ ಪ್ರಾಧ್ಯಾಪಕ ವೀರಣ್ಣ ರಾಜೂರ ಅವರನ್ನು ಸನ್ಮಾನಿಸಲಾಯಿತು.

ವೇದಿಕೆಯ ಮೇಲೆ ಮುಡಿಗುಂಡ ವಿರಕ್ತ ಮಠದ ಡಾ. ಶ್ರೀಕಂಠ ಸ್ವಾಮೀಜಿ, ಶೇಗುಣಸಿ ವಿರಕ್ತ ಮಠದ ಡಾ. ಮಹಾಂತಪ್ರಭು ಸ್ವಾಮೀಜಿ, ಮಹಾರಾಷ್ಟ್ರ ರಾಜ್ಯ ಘಟಕದ ಜಾಗತಿಕ ಲಿಂಗಾಯತ ಮಹಾಸಭೆಯ ಸಂಚಾಲಕಿ ಸರಳಾತಾಯಿ ಪಾಟೀಲ ಉಪಸ್ಥಿತರಿದ್ದರು.

# ಸಾಲಗಾರರ ಕಾಟ ತಾಳಲಾರದೆ ಇಡೀ ಕುಟುಂಬ ನಾಪತ್ತೆ

ಮೈಸೂರು: ಸಾಲಗಾರರ ಕಾಟ ತಾಳಲಾರದೆ ಇಡೀ ಕುಟುಂಬ ನಿಗೂಢವಾಗಿ ನಾಪತ್ತೆಯಾಗಿರುವ ಘಟನೆ ಮೈಸೂರು ಜಿಲ್ಲೆಯ ಕೆಜಿ ಕೊಪ್ಪಲು ಬಡಾವಣೆಯಲ್ಲಿ ನಡೆದಿದೆ.

ಮಹೇಶ್(35), ಪತ್ನಿ ಭವಾನಿ(28), ಪುತ್ರಿ ಪ್ರೇಕ್ಷಾ(3), ಮಹೇಶ್ ತಂದೆ ಮಹದೇವಪ್ಪ(65), ತಾಯಿ ಸುಮಿತ್ರಾ(55) ನಾಪತ್ತೆಯಾದವರು. ಕೊಪ್ಪಲು ಬಡಾವಣೆ ನಿವಾಸಿಗಳಾಗಿದ್ದಾರೆ. ಕಳೆದ ಎಂಟು ದಿನಗಳಿಂದಲೂ ಯಾರ ಸಂಪರ್ಕಕ್ಕೂ ಸಿಗದ ಕುಟುಂಬ.

ಮಾರ್ಕೆಟಿಂಗ್ ಬ್ಯುಸಿನೆಸ್ ಮಾಡುತ್ತಿದ್ದ ಮಹೇಶ್‌ಗೆ ವೀರೇಶ್ ಎಂಬುವವರು




ವ್ಯವಹಾರದಲ್ಲಿ ಸಾಥ್ ನೀಡಿದ್ದರು. ಮಹೇಶ್ ಪರಿಚಯ ಹೇಳಿಕೊಂಡು ವೀರೇಶ ಎಂಬುವವನು 30 ರಿಂದ 35 ಲಕ್ಷ ರೂ. ಸಾಲ ಪಡೆದು ಮರುಪಾವತಿ ಮಾಡದೆ ಪರಾರಿಯಾಗಿದ್ದಾನೆ. ಆದರೆ ವೀರೇಶ್‌ಗೆ ಸಾಲ ನೀಡಿದವರು ಸಾಲ ಹಿಂತಿರುಗಿಸುವಂತೆ ಮಹೇಶರ ಮೇಲೆ ಒತ್ತಡ ಹಾಕಿದ್ದಾರೆ. ಸಾಲಗಾರರ ನಿರಂತರ ಮಾನಸಿಕ ಕಿರುಕುಳ, ಬೆದರಿಕೆಗೆ ಕುಟುಂಬ ಸಮೇತ ನಾಪತ್ತೆಯಾಗಿರುವ ಮಹೇಶ್. ನಾಪತ್ತೆಯಾಗುವ ಮುನ್ನ ಸ್ನೇಹಿತನಿಗೆ ವಾಟ್ಸಪ್ ಸಂದೇಶ ಕಳುಹಿಸಿರುವ ಮಹೇಶ್.

ವಾಟ್ಸಪ್ ಸಂದೇಶದಲ್ಲಿ ಏನಿದೆ? ನನ್ನ ಉದ್ಯಮದಲ್ಲಿ ಸಾಥ್ ನೀಡಿದ್ದ ವೀರೇಶ್ ಎಂಬುವವನಿಗೆ ಸಾಲ ಪಡೆಯಲು ಮಧ್ಯಸ್ಥಿಕೆ ವಹಿಸಿದ್ದೆ 30–35 ಲಕ್ಷ ರೂಪಾಯಿ ಸಾಲ ಪಡೆದು ಪರಾರಿಯಾಗಿರುವ ವೀರೇಶ್ ಇದೀಗ ಸಾಲಗಾರರು ನನಗೆ ನಿರಂತರ ಒತ್ತಡ ಕಿರುಕುಳ ನೀಡುತ್ತಿದ್ದಾರೆ. ನಾವು ಆತ್ಮಹತ್ಯೆ ಮಾಡಿಕೊಳ್ತೀವೆ ಸಾಲಗಾರರು ರಾಕ್ಷಸರಂತೆ ವರ್ತಿಸುತ್ತಿದ್ದಾರೆ. ನಾವು ಕೆರೆ ಬಾವಿಗೆ ಬಿದ್ದು ಆತ್ಮಹತ್ಯೆ ಮಾಡಿಕೊಳ್ತೀವೆ. ಒಂದು ವೇಳೆ ಮೃತದೇಹ ಸಿಕ್ಕರೆ ಅಂತ್ಯಕ್ರಿಯೆ ಮಾಡಿಕೊಳ್ಳುತ್ತೇವೆ ಆದರೆ ಅವರನ್ನಂತೂ ಬಿಡಬೇಡಿ ಎಂದು ಮಹೇಶ್ ವಾಯ್ಸ್ ಮೆಸೇಜ್ ಮೂಲಕ ತಿಳಿಸಿದ್ದಾನೆ. ರಂಜಿತಾ, ದಿನೇಶ್, ಚಂದ್ರು ಹಾಗೂ ನೇತ್ರ ಎಂಬುವವರ ಹೆಸರು ವಾಯ್ಸ್ ಮೆಸೇಜ್ ನಲ್ಲಿ ಉಲ್ಲೇಖಿಸಿದ್ದಾರೆ. ಇದೀಗ ನಾಪತ್ತೆಯಾಗಿರುವ ಬಗ್ಗೆ ಸರಸ್ವತಿಪುರಂ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದ್ದು, ಪೊಲೀಸರು ಕುಟುಂಬಸ್ಥರ ಶೋಧಕಾರ್ಯಾಚರಣೆ ನಡೆಸಿದ್ದಾರೆ.

# ಗಮಕ ಕಲೆಯನ್ನು ಉಳಿಸಿ ಬೆಳಸಿ: ಶಾಂತಾ ಹಗಡೆ

ಬೆಳಗಾವಿ: ಗಮಕ ಕಲೆ ನಶಿಸಿ ಹೋಗುತ್ತಿರುವ ಇಂದಿನ ದಿನಗಳಲ್ಲಿ ಉಳಿಸಿ ಬೆಳೆಸಿ ಮುಂದಿನ ಪೀಳಿಗೆಗೆ ಕೊಂಡೊಯ್ಯಬೇಕಾದುದು ನಮ್ಮೆಲ್ಲರ ಕರ್ತವ್ಯವಾಗಿದೆ ಎಂದು ಶ್ರೀಮತಿ ಶಾಂತಾ ಹೆಗಡೆಯವರು ಇಂದಿಲ್ಲಿ ಹೇಳಿದರು.

ಕರ್ನಾಟಕ ಗಮಕಕಲಾ ಪರಿಷತ್ತು, (ರಿ )ಬೆಂಗಳೂರು. ಬೆಳಗಾವಿ ಜಿಲ್ಲಾ ಘಟಕದವರು ನಮೋ ಕುಮಾರವ್ಯಾಸ ಕಾರ್ಯಕ್ರಮವನ್ನು ದಿ. 28 ಭಾನುವಾರ ಸಂಜೆ 5 ಗಂಟೆಗೆ ಚೆನ್ನಮ್ಮ ನಗರದ ಲಕ್ಷ್ಮೀ ದೇವಸ್ಥಾನದಲ್ಲಿ ಕುಮಾರವ್ಯಾಸ ಭಾರತದಿಂದ ಆಯ್ದ ವಿಶ್ವರೂಪ ದರ್ಶನ ಭಾಗದ ವಾಚನ



ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದರು. ಈ ಸಂದರ್ಭದಲ್ಲಿ ಅತಿಥಿಗಳಾಗಿ ಆಗಮಿಸಿದ್ದ ಶಾಂತಾ ಹೆಗಡೆಯವರು ಮೇಲಿನಂತೆ ಅಭಿಪ್ರಾಯ ಪಟ್ಟರು.

ಕರ್ನಾಟಕ ಕಲಾಶ್ರೀ ಶ್ರೀ ಗಣೇಶ ಉಡುಪ ಮತ್ತು ವಿದುಷಿ ಶ್ರೀಮತಿ ಮಂಜುಳಾ ಮರಾಠೆ ಅವರು ಹಾಗೂ ವ್ಯಾಖ್ಯಾನವನ್ನು ಸಂತಮೀರಾ ಶಾಲೆಯ ಮುಖ್ಯೋಪಾಧ್ಯಾಯಿನಿ, ಶ್ರೀಮತಿ ಸುಜಾತಾ ದಪ್ತರದಾರ ಇವರು ನಡೆಸಿಕೊಟ್ಟರು.ಅ

ಶ್ರೀಮತಿ ರಾಧಿಕಾ ಮಿರ್ಜಿ ಕರ್ನಾಟಕ ಗಮಕಕಲಾ ಪರಿಷತ್ತು, (ರಿ )ಬೆಂಗಳೂರು.

ಬೆಳಗಾವಿ ಜಿಲ್ಲಾ ಘಟಕದವರು ಹಮ್ಮಿಕೊಳ್ಳುತ್ತಿರುವ ಕಾರ್ಯಕ್ರಮಗಳ ಪ್ರಶಂಸಿಸಿದರು. ಈ ಸಂದರ್ಭದಲ್ಲಿ ಶ್ರೀಹರ್ಷ ದಂಪತಿಗಳನ್ನು ಸತ್ಕರಿಸಿ ಗೌರವಿಸಲಾಯಿತು.

ಮಂಗಳಾ ಕಾನೆಟ್ಕರ್ ಸ್ವಾಗತಿಸಿದರು. ಶ್ರೀಮತಿ ಪ್ರಸನ್ನ ಹಾಗೂ ಶ್ರೀಮತಿ ಶುಭಾ ಕಡಗದಕೈ ಪರಿಚಯಿಸಿದರು. ಶ್ರೀಮತಿ ರಾಜೇಶ್ವರಿ ಜಮ್ಮಿಹಾಳ ವಂದಿಸಿದರು.

## ಸಿಲಿಂಡರ್ ಸ್ಫೋಟ ಪ್ರಕರಣ: ಚಿಕಿತ್ಸೆ ಫಲಕಾರಿಯಾಗದೇ ಇಬ್ಬರು ಸಾವು



ಬೆಳಗಾವಿ: ಬೆಳಗಾವಿಯ ಮನೆಯೊಂದರಲ್ಲಿ ಸಂಭವಿಸಿದ ಸಿಲಿಂಡರ್ ಸ್ಫೋಟ ಪ್ರಕರಣದಲ್ಲಿ ಗಂಭೀರವಾಗಿ ಗಾಯಗೊಂಡಿದ್ದ ಇಬ್ಬರು ಚಿಕಿತ್ಸೆ ಫಲಕಾರಿಯಾಗದೇ ಸಾವನ್ನಪ್ಪಿದ್ದಾರೆ.

ಬೆಳಗಾವಿಯ ಬಸವನಗಲ್ಲಿ ಮನೆಯಲ್ಲಿ ಜನವರಿ 28ರಂದು ಮಧ್ಯಾಹ್ನ ಸಿಲಿಂಡರ್ ಸ್ಫೋಟಗೊಂಡು ಒಂದೇ ಕುಟುಂಬದ ಐವರು ಗಂಭೀರವಾಗಿ ಗಾಯಗೊಂಡಿದ್ದರು. ಗಾಯಾಳುಗಳನ್ನು ಭಿಮ್ಸ್ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಇದೀಗ ಗಾಯಾಳುಗಳಲ್ಲಿ ಇಬ್ಬರು ಚಿಕಿತ್ಸೆ ಫಲಕಾರಿಯಾಗದೇ ಕೊನೆಯುಸಿರೆಳೆದಿದ್ದಾರೆ. ಉಡುಪಿ ಮೂಲದ ಕಾಮಾಕ್ಷಿ ಭಟ್ ಹಾಗೂ ಹೇಮಂತ್ ಭಟ್ ಮೃತರು ಎಂದು ತಿಳಿದುಬಂದಿದೆ.

ಇನ್ನು ಗಾಯಾಳುಗಳಲ್ಲಿ ಇನ್ನಿಬ್ಬರ ಸ್ಥಿತಿ ಚಿಂತಾಜನಕವಾಗಿದ್ದು, ಸಾವು–ಬದುಕಿನ ನಡುವೆ ಹೋರಾಟ ನಡೆಸಿದ್ದಾರೆ. ಚಿಕಿತ್ಸೆ ಮುಂದುವರೆದಿದೆ.

# ಸ್ನೇಹಿತನ ಗುಂಡೇಟಿಗೆ ಮಹಿಳಾ ಟೆಕ್ಕಿ ಬಲಿ

ಮುಂಬೈ: ಮಹಾರಾಷ್ಟ್ರದ ಪುಣೆಯಲ್ಲಿ ಸ್ನೇಹಿತನ ಗುಂಡೇಟಿಗೆ ಮಹಿಳಾ ಟೆಕ್ಕಿಯೊಬ್ಬಳು



ಬಲಿಯಾಗಿದ್ದಾಳೆ ಎಂದು ಪೊಲೀಸರು ಮಾಹಿತಿ ನೀಡಿದ್ದಾರೆ. ಹಿಂಜವಾಡಿಯಲ್ಲಿರುವ ಒಯೊ ಟೌನ್ ಹೌಸ್ ಹೋಟೆಲ್ನಲ್ಲಿ ಕೃತ್ಯ ನಡೆದಿದೆ.


ರಿಷಬ್ ನಿಗಮ್ ಕೊಲೆಗೈದ ಆರೋಪಿಯಾಗಿದ್ದು, ಪೊಲೀಸರು ಬಂಧಿಸಿದ್ದಾರೆ. ವಂದನಾ ದ್ವಿವೇದಿ ಕೊಲೆಯಾದ ಮಹಿಳಾ ಟೆಕ್ಕಿ. ಇಬ್ಬರು ಹಂಜವಾಡಿಯಲ್ಲಿರುವ ಐಟಿ ಕಂಪನಿ ಒಂದರಲ್ಲಿ ವಂದನಾ ಕೆಲಸ ಮಾಡುತ್ತಿದ್ದಳು. ಬಂಧಿತ ರಿಷಬ್ ಉತ್ತರ ಪ್ರದೇಶ ಲಖನೌ ನಿವಾಸಿ ಆಗಿದ್ದಾನೆ.

ಕಳೆದ 10 ವರ್ಷಗಳಿಂದ ಇಬ್ಬರು ಲವ್ ಮಾಡುತ್ತಿದ್ದರು. ಅಂತೆಯೇ ಉತ್ತರ ಪ್ರದೇಶದಿಂದ ರಿಷಬ್, ವಂದನಾಳನ್ನು ಭೇಟಿಯಾಗಲು ಬಂದಿದ್ದ. ಜನವರಿ 25 ರಂದು ಇಬ್ಬರು ಹೋಟೆಲ್ ಬುಕ್ ಮಾಡಿದ್ದರು. ಭೇಟಿ ಹೆಸರಲ್ಲಿ ಬಂದು ಕೊಲೆ ಮಾಡಿ ಪರಾರಿಯಾಗಿದ್ದಾನೆ ಎಂದು ಪೊಲೀಸರು ತಿಳಿಸಿದ್ದಾರೆ. ಪೊಲೀಸರಿಗೆ ಸಿಕ್ಕ ಸಿಸಿಟಿವಿ ವಿಡಿಯೋ ಪ್ರಕಾರ, ರಾತ್ರಿ 10 ಗಂಟೆ ಸುಮಾರಿಗೆ ವಂದನಾಳನ್ನು ಕೊಲೆ ಮಾಡಿ ಹೋಟೆಲ್ನಿಂದ ಪರಾರಿಯಾಗಿದ್ದಾನೆ. ಕೇಸ್ ದಾಖಲಿಸಿಕೊಂಡಿರುವ ಪೊಲೀಸರು, ತನಿಖೆಯನ್ನು ಆರಂಭಿಸಿದ್ದಾರೆ. ವಿಚಾರಣೆ ಹಿನ್ನೆಲೆಯಲ್ಲಿ ಹೋಟೆಲ್ ಕೂಡ ಸೀಲ್ ಮಾಡಿದ್ದಾರೆ ಎನ್ನಲಾಗಿದೆ.

# ನ್ಯಾಕ್ ಅನುಷ್ಠಾನಕ್ಕೆ ಸಬೂಬು ಬೇಡ: ನಿಷ್ಠಿ

ಕೆಂಭಾವಿ: ಕಲ್ಯಾಣ ಕರ್ನಾಟಕ ಭಾಗದ ಬಹುತೇಕ ಕಾಲೇಜುಗಳು ನ್ಯಾಕ್ ಅನುಷ್ಠಾನ ಮಾಡುವ ಮೂಲಕ ಶೈಕ್ಷಣಿಕ ಕ್ರಾಂತಿಗೆ ಮುಂದಾಗಿದ್ದು. ಮುಂಬರುವ ದಿನಗಳಲ್ಲಿ ಕೆಂಭಾವಿ ಕಾಲೇಜು ಕೂಡ ನ್ಯಾಕ್ ಅನುಷ್ಠಾನ ಮಾಡುವ ಮೂಲಕ ಮಾದರಿ ಕಾಲೇಜಾಗಿ ಹೊರಹೊಮ್ಮಲಿ ಎಂದು ಕಲ್ಬುರ್ಗಿ ಪ್ರಾದೇಶಿಕ ಜಂಟಿ ನಿರ್ದೇಶಕರ ಕಚೇರಿಯ ನೋಡಲ್ ಅಧಿಕಾರಿ ಡಾ ಸಂಗಣ್ಣ ವಿ. ನಿಷ್ಠಿ ಹೇಳಿದರು.

ಪಟ್ಟಣದ ಮಾತೋಶ್ರೀ ಗಂಗಾಬಾಯಿ ಶಾಂತಗೌಡ ಪೋಲೀಸ್ ಪಾಟೀಲ್ ಮೆಮೋರಿಯಲ್ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಐಕ್ಯೂಎಸಿ ಘಟಕದ ವತಿಯಿಂದ ಸೋಮವಾರ ಹಮ್ಮಿಕೊಂಡಿದ್ದ ಒಂದು ದಿನದ ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದ ಅವರು, ಇಲ್ಲಿಯವರೆಗೂ ಕೆಂಭಾವಿ ಕಾಲೇಜು ನ್ಯಾಕ್ ಅನುಷ್ಠಾನಕ್ಕೆ ಕೆಲವು ತಾಂತ್ರಿಕ ಕಾರಣಗಳ ಹೇಳಿಕೆಯ ಸಬೂಬುಗಳಿಂದ ಮುಂದೂಡುತ್ತಲೇ ಬಂದಿದೆ ಆದರೆ ಮುಂದಿನ ದಿನಮಾನಗಳಲ್ಲಿ ಯಾವುದೇ ಸಬೂಬುಗಳನ್ನು ಹೇಳದೆ ನ್ಯಾಕಿನ ಏಳು ಕ್ರೈಟೇರಿಯಗಳನ್ನು ಅಚ್ಚುಕಟ್ಟಾಗಿ ನಿರ್ವಹಿಸಿಲು ಕಾಲ




ಕಾಲಕ್ಕೆ ಕಾಲೇಜಿನಲ್ಲಿ ತರಬೇತಿ ನೀಡುವುದಾಗಿ ತಿಳಿಸಿದ ಅವರು, ಕಾಲೇಜಿನ ಪೂರ್ಣಕಾಲಿಕ ಹಾಗೂ ಅತಿಥಿ ಉಪನ್ಯಾಸಕರು ಸೇರಿದಂತೆ ಬೋಧಕೇತರ ಸಿಬ್ಬಂದಿಗಳು ಪೂರ್ವ ತಯಾರಿ ಮಾಡಿಕೊಳ್ಳುವಂತೆ ಸೂಚಿಸಿದರು.

ಪ್ರಾಂಶುಪಾಲ ಡಾ.ನಾಗಪ್ಪ ಚವಲ್ಕರ್ ಅಧ್ಯಕ್ಷತೆ ವಹಿಸಿದ್ದರು. ಡಾ. ನಂದಾ ವಾರದ, ಡಾ ಬಸಮ್ಮ ಎಸ್, ನಸ್ರೀನ್ ತಾಜಾ, ಡಾ ಪ್ರಸಾದ ಭಂಡಾರಿ ಉಪಸ್ಥಿತರಿದ್ದರು. ಮಂಜುನಾಥ ಚೆಟ್ಟಿ ಸ್ವಾಗತಿಸಿದರು. ನಿರೂಪಣೆ ಮಹಿಬೂಬಸಾಬ್ ನಿರೂಪಿಸಿದರು ಡಾ ಸಿದ್ದಲಿಂಗ ರಾಠೋಡ್ ವಂದಿಸಿದರು.

### ಸಪ್ತಸ್ವರ ಸಂಗೀತ ವಿದ್ಯಾಲಯದ 24ನೇ ವಾರ್ಷಿಕೋತ್ಸವ ಸಮಾರಂಭದಲ್ಲಿ ಜೋಷಿ ಅಭಿಮತ

# “ಗುರುವೇ ನಮಃ” ಭಾವನೆ ಇರಲಿ; “ಗುರುಏನ್ ಮಹಾ?” ಭಾವನೆ ಬೇಡ

ಬೆಳಗಾವಿ: ನಗರದ ಐಎಂಇಆರ್ ಸಭಾಭವನದಲಿ ್ಲದಿ.28.1.24 ರವಿವಾರ ದಂದು ಸಪ್ತಸ್ವರ ಸಂಗೀತ 'ವಿದ್ಯಾಲಯದ 24ನೇ ವಾರ್ಷಿಕೋತ್ಸವ ಸಮಾರಂಭ ಜರುಗಿತು ದ. ಮುಖ್ಯ ಅತಿಥಿಗಳು, ಸಂಗೀತ ವಿದ್ಯಾಲಯದ ಗುರುಮಾತೆ ಹಾಗೂ ಶಿಕ್ಷಕರು ದೀಪ ಬೆಳಗಿಸಿ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.ಶ್ರೀ ಗಣೇಶ ಸ್ತುತಿಯೊಂದಿಗೆ ಕಾರ್ಯಕ್ರಮ ಆರಂಭಗೊಂಡಿತು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಖ್ಯಾತಲೇಖಕ / ನಾಟಕಕಾರ ಶಿರೀಷ ಜೋಷಿ ಮಾತನಾಡಿ, 'ನನ್ನ ಮತ್ತುಸಪ್ತಸ್ವರ ಸಂಗೀತ ವಿದ್ಯಾಲಯದ ನಂಟು ಹೊಸತಲ್ಲ. ಇದು ಬಹಳ ದಿನಗಳಿಂದ ಸದೃಢವಾಗಿ ಬೆಳೆದು–ಬೆಸೆದುಕೊಂಡು ಬಂದ ಬಾಂಧವ್ಯ. ಎರೆಡು ದಶಕಕ್ಕಿಂತಲೂ ಹೆಚ್ಚಿನ ಸಮಯದಿಂದ ಸಂಗೀತ ಶಾಲೆಯನ್ನು ಯಶಸ್ವಿಯಾಗಿ ನಡೆಸಿಕೊಂಡು ಬರುವದಲ್ಲದೇ ಸಮಾಜಕ್ಕೆಉತ್ತಮ ಸಂಗೀತಕಾರರನ್ನು ಕೊಡುಗೆಯಾಗಿ ನೀಡುತ್ತಿರುವ ಸಪ್ತಸ್ವರ ಸಂಗೀತ ವಿದ್ಯಾಲಯದ ಕಾರ್ಯ ಹಾಗೂ ಗುರುಮಾತೆ ನಿರ್ಮಲಾ ಪ್ರಕಾಶ ಅವರ ಕಾರ್ಯ ಶ್ಲಾಘನೀಯ' ಎಂದರು.

ಮುಂದುವರೆದು ಮಾತನಾಡಿ ಸಂಗೀತದಲ್ಲಿ ಗುರುವಿನ ಪಾತ್ರದ ಮಹತ್ವದ ಬಗ್ಗೆ ವಿವರಿಸಿ, ತಮ್ಮ ಭಾವನಾತ್ಮಕ ಅನುಭವಗಳನ್ನು ಹಂಚಿಕೊಂಡರು. 'ವಿದ್ಯಾರ್ಥಿಗಳಲ್ಲಿ “ಗುರುವೇ ನಮಃ” ಎಂಬ ಭಾವನೆಇರಬೇಕು ವಿನಃ “ಗುರುಏನ್ ಮಹಾ?”ಎಂಬ ಭಾವನೇ ಎಂದಿಗೂ ಬರಬಾರದು'ಎಂದು ಹಾಸ್ಯ ಚಟಾಕಿಸಿಡಿಸಿದರು. ರಂಗಭೂಮಿಯ



ಮೇಲೆ ನಡೆದ ಅನುಭವಗಳನ್ನು ಹಂಚಿಕೊಂಡರು.

ಸಪ್ತಸ್ವರ ಸಂಗೀತ ವಿದ್ಯಾಲಯದ ಗುರುಮಾತೆ ನಿರ್ಮಲಾ ಪ್ರಕಾಶ ಅವರು ಪ್ರಾಸ್ತಾವಿಕವಾಗಿ ಮಾತನಾಡಿ, ಕಷ್ಟ–ಸುಖಗಳ ನಡುವೆ 24 ವರ್ಷಗಳಿಂದ ಸಂಗೀತ ಶಾಲೆ ನಡೆದು ಬಂದ ಹಾದಿಯ ಬಗ್ಗೆ ಮೆಲಕು ಹಾಕಿದರು. 'ಸಂಗೀತ ಶಾಲೆಗೆ ದೊರೆತಿರುವ ಪ್ರಸಿದ್ಧಿ, ಖ್ಯಾತಿಗೆ ಪೋಷಕರು ಹಾಗೂ ವಿದ್ಯಾರ್ಥಿಗಳೇ ಕಾರಣ.ಸಂಸ್ಥೆಯ ಬೆಳವಣಿಗೆಯಲ್ಲಿ ಪ್ರತ್ಯಕ್ಷವಾಗಿಅಥವಾ ಪರೋಕ್ಷವಾಗಿ ಸಹಕಾರಿಯಾದ ಪ್ರತಿಯೊಬ್ಬರಿಗೂ ನಾನು ಚಿರಋಣಿ. ಇದೇಆಸಕ್ತಿಯಿಂದ ಮುಂದಿನ ವರ್ಷ ನಮ್ಮ ವಿದ್ಯಾಲಯತನ್ನ ಬೆಳ್ಳಿ ಹಬ್ಬ ಆಚರಿಸಿಕೊಳ್ಳಲು ಸಜ್ಜಾಗಿದೆ' ಎಂದರು. ಇತ್ತೀಚಿಗಷ್ಟೇ ಅಗಲಿದ ವಾಮನ್‌ವಾಗೂಕರ್‌ಅವರನ್ನು ನೆನೆದು ಭಾವುಕರಾದರು.

ನಂತರ ಸಪ್ತಸ್ವರ ಸಂಗೀತ ವಿದ್ಯಾಲಯದ ವಿದ್ಯಾರ್ಥಿಗಳು ತಮ್ಮ ಪ್ರತಿಭೆಗಳನ್ನು ಪ್ರದರ್ಶಿಸಿದರು.ಸೋಲೋ ಸಿಂಗಿಂಗ, ಗ್ರೂಪ್ ಸಾಂಗ, ಹಾರ್ಮೋನಿಯಂ, ತಬಲಾ ವಾದನ, ಭರತನಾಟ್ಯ, ನೃತ್ಯ ಪ್ರದರ್ಶನಗಳು ಪ್ರೇಕ್ಷಕರನ್ನು ಮಂತ್ರಮುಗ್ಧರನ್ನಾಗಿಸಿದವು.

ಕಾರ್ಯಕ್ರಮದಲ್ಲಿ ಸೂರ್ಯ ಪ್ರಕಾಶ ಐಯರ್, ಡಾ.ಎಸ್.ಬಿ. ಕುಲಕರ್ಣಿ, ನಿರಂಜನ ಮೂರ್ತಿ, ನಾರಾಯಣ ಗಣಾಚಾರಿ, ಜಿತೇಂದ್ರ ಸಾಬಣ್ಣವರ, ಶೆಫಾಲಿ ಕ್ಷೀರಸಾಗರ, ಸುಮೇಧಾ ಅಗಾಷೆ ಉಪಸ್ಥಿತರಿದ್ದರು.

ಕಾರ್ಯ ಕ್ರಮದ ಸ್ವಾಗತ ಭಾಷಣ– ಸುಷ್ಮಾ ಕೃಷ್ಣಮೂರ್ತಿ, ಮುಖ್ಯ ಅತಿಥಿಗಳ ಪರಿಚಯ– ಕು.ಪೂರ್ವಿರಾಜ ಪುರೋಹಿತ, ವಂದನಾರ್ಪಣೆ– ಕು.ಶ್ರೀಪತಿ ದೇವ, ನಿರೂಪಣೆ– ವೀಣಾ ಹೆಗಡೆ, ಶೀತಲ ರಾಜಪುರೋಹಿತ ಅವರುಗಳು ನಡೆಸಿಕೊಟ್ಟರು.

ವಾರ್ಷಿಕೋತ್ಸವ ಕಾರ್ಯಕ್ರಮಕ್ಕೆ ಆಗಮಿಸಿದ ಆಮಂತ್ರಿತರು, ಪಾಲಕರು ಹಾಗೂ ವಿದ್ಯಾರ್ಥಿಗಳಿಗಾಗಿ ಊಟದ ವ್ಯವಸ್ಥೆಯನ್ನೂ ಸಭಾಂಗಣದ ಆವರಣದಲ್ಲಿಯೇ ಮಾಡಲಾಗಿತ್ತು.

## ಪಟ್ಟಣ ಸಹಕಾರ ಬ್ಯಾಂಕುಗಳ ಅಧಿಕಾರಿಗಳಿಗೆ ಜ.30 ರಂದು ರಾಜ್ಯ ಮಟ್ಟದ ತರಬೇತಿ

ಬೆಳಗಾವಿ: ಬೆಂಗಳೂರಿನ ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ನಿಗಮ ಹಾಗೂ ಕರ್ನಾಟಕ ಇನ್‌ಸ್ಟಿಟ್ಯೂಟ್ ಆಫ್ ಕೋ–ಆಪರೇಟಿವ್ ಮ್ಯಾನೇಜ್‌ಮೆಂಟ್ ವತಿಯಿಂದ ಬೆಳಗಾವಿ ವಿಭಾಗದ ಪಟ್ಟಣ ಸಹಕಾರ ಬ್ಯಾಂಕುಗಳ ಮುಖ್ಯಕಾರ್ಯನಿರ್ವಾಹಕರು ಮತ್ತು ಹಿರಿಯ ಅಧಿಕಾರಿಗಳ ಸರ್ವತೋಮುಖ ಬೆಳವಣಿಗೆಗಾಗಿ ಒಂದು ದಿನದ ರಾಜ್ಯ ಮಟ್ಟದ ತರಬೇತಿ ಕಾರ್ಯಕ್ರಮವನ್ನು ಜ.30ರಂದು ಬೆಳಗ್ಗೆ 10.30ಕ್ಕೆ ಗಾಂಧಿನಗರದ ಸಂಕಮ್ ರೆಸಿಡೆನ್ಸಿ ಹೋಟೆಲ್‌ನಲ್ಲಿ ಹಮ್ಮಿಕೊಳ್ಳಲಾಗಿದೆ.

ಈ ಸಂದರ್ಭದಲ್ಲಿ ಬೆಂಗಳೂರಿನ ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ನಿಗಮ ಶಾಸಕರಾಗಿರುವ ಜಿ. ಟಿ. ದೇವೆಗೌಡರು ಕಾರ್ಯಕ್ರಮವನ್ನು ಉದ್ಘಾಟನೆ ಮಾಡಲಿದ್ದಾರೆ. ಬೆಳಗಾವಿ ಜಿಲ್ಲಾ ಸಹಕಾರ ಯೂನಿಯನ್ ಅಧ್ಯಕ್ಷರಾಗಿರುವ ಬಸಗೌಡ.ಡಿ.ಪಾಟೀಲ ಅಧ್ಯಕ್ಷತೆ ವಹಿಸಲಿದ್ದಾರೆ.

ಮುಖ್ಯಅತಿಥಿಗಳಾಗಿ ಬೆಂಗಳೂರಿನ ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ನಿ. ಉಪಾಧ್ಯಕ್ಷ ಜಗದೀಶ ಎಂ.ಕವಟಗಿಮಠ, ನಿಗಮದ ನಿರ್ದೇಶಕರಾದ ಬಸವರಾಜ. ನಿ. ಅರಬಗೊಂಡ, ಗದಿಗೆಪ್ಪಗೌಡ ಪಾಟೀಲ, ಈರಣ್ಣ ಪಟ್ಟಣಶೆಟ್ಟಿ, ವೃತ್ತಿಪರ ನಿದೇಶಕರಾಗಿರುವ ಬಾಪೂಗೌಡ ಪಾಟೀಲ, ವ್ಯವಸ್ಥಾಪಕ ನಿರ್ದೇಶಕರಾದ ಕೆ.ಎಸ್.ನವೀನ್, ಕಾರ್ಯದರ್ಶಿಯಾದ ಲಕ್ಷ್ಮೀಪತಯ್ಯ, ಸಹಕಾರ ಸಂಘಗಳ ಸಂಯುಕ್ತ ನಿಬಂಧಕರಾಗಿದ ಡಾ. ಸುರೇಶಗೌಡ, ಸಹಕಾರ ಸಂಘಗಳ ಉಪನಿಬಂಧಕರಾದ ಮಣಿ ಎಂ. ಎನ್, ರವೀಂದ್ರ ಪಿ ಪಾಟೀಲ ಭಾಗವಹಿಸಲಿದ್ದಾರೆ.

ಬೆಳಗ್ಗೆ 11 ರಿಂದ ಸಂಜೆ 5 ಗಂಟೆಯ ವರೆಗೆ ಆದಾಯ ತೆರಿಗೆ, ಟಿಡಿಎಸ್, ಜಿ.ಎಸ್.ಟಿ. ಸೇರಿದಂತೆ ವಿವಿಧ ವಿಷಯದ ಕುರಿತು ಉಪನ್ಯಾಸ ಕಾರ್ಯಾಗಾರ ನಡೆಯಲಿದೆ.

## ಅರ್ಜಿ ಆಹ್ವಾನ

ಬೆಳಗಾವಿ: ಹಿಂದುಳಿದ ವರ್ಗಗಳ ಅಲೆಮಾರಿ/ಅರೆ ಅಲೆಮಾರಿ ಜನಾಂಗದ ವಸತಿ ರಹಿತರಿಗೆ ಹೊಸದಾಗಿ ಮನೆ ಮಂಜೂರಾತಿ ಕುರಿತು ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತರು ನಿಗಧಿತ ಅರ್ಜಿ ನಮೂನೆಯನ್ನು ಜಿಲ್ಲಾ ಅಥವಾ ತಾಲೂಕಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿಯಿಂದ ಪಡೆದುಕೊಂಡು. ಅರ್ಜಿಯನ್ನು ಫೆ 10 ಒಳಗಾಗಿ ಸಲ್ಲಿಸಬಹುದಾಗಿದೆ.

**ಅರ್ಜಿ ಸಲ್ಲಿಸಬೇಕಾದ ದಾಖಲೆಗಳ ವಿವರ:**

ಆಧಾರ ಕಾರ್ಡ್, ಪಡಿತರ ಚೀಟಿ, ಜಾತಿ ಹಾಗೂ ಆದಾಯ ಪ್ರಮಾಣ ಪತ್ರ, ಬ್ಯಾಂಕ್ ಖಾತೆ, ಚುನಾವಣಾ ಗುರುತಿನ ಚೀಟಿ, ನಿವೇಶನದ ಖಾತಾ ಸಂಖ್ಯೆಯ ಪ್ರತಿಯನ್ನು ಲಗತ್ತಿಸಿ ಅರ್ಜಿಗಳನ್ನು ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಅಥವಾ ತಾಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಾರ್ಯಾಲಯಕ್ಕೆ ಸಲ್ಲಿಸಬೇಕೆಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಜಿಲ್ಲಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸ್ವ–ಸಹಾಯ ಸಂಘಗಳಿಗೆ ತರಬೇತಿ

ಬೆಳಗಾವಿ: ಕರ್ನಾಟಕ ಸರಕಾರ ಗ್ರಾಮೀಣ ಅಭಿವೃದ್ಧಿ ಸಂಸ್ಥೆ ಬೆಂಗಳೂರು ಮತ್ತು ಪಂಚಾಯತ ರಾಜ ಇಲಾಖೆ, ಮಹಾತ್ಮಾ ಗಾಂಧಿ ಗ್ರಾಮೀಣ ಅಭಿವೃದ್ಧಿ ಸಂಸ್ಥೆ ಬೆಂಗಳೂರು, ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮೀಣ ಅಭಿವೃದ್ಧಿ ಯೋಜನೆ ಹಾಗೂ ಮಹಿಳಾ ಕಲ್ಯಾಣ ಸಂಸ್ಥೆ ಬೆಳಗಾವಿ ಇವರುಗಳ ಸಂಯುಕ್ತಾಶ್ರಯದಲ್ಲಿ ಮಂಗಳವಾರ ದಿನಾಂಕ 30 ಜನೇವರಿ 2023 ರಿಂದ 03 ಫೇಬ್ರುವರಿವರೆಗೆ 5 ದಿನಗಳ ಕಾಲ ಆಯ್ದ ಸ್ವ–ಸಹಾಯ ಸಂಘಗಳ ಸದಸ್ಯರಿಗೆ ಹಾಗೂ ಗ್ರಾಮ ಪಂಚಾಯತ ಸದಸ್ಯರುಗಳಿಗೆ ನವೀಕರಿಸಬಹುದಾದ ಇಂಧನ, ಘನತ್ಯಾಜ್ಯ ನಿರ್ವಹಣೆ, ಮಳೆ ನೀರು ಕೊಯ್ಲು ಮುಂತಾದ ವಿಷಯಗಳ ಕುರಿತು ತರಬೇತಿ ನಡೆಯಲಿದೆ. ತರಬೇತಿಯು ಖಾನಾಪುರ ತಾಲೂಕಿನ ಕಕ್ಕೇರಿ, ಮುನವಳ್ಳಿ, ಬೆಳಗಾವಿ ತಾಲೂಕಿನ ಅಗಸಗಾ, ವಣ್ಣೂರ ಹಾಗೂ ಹುಕ್ಕೇರಿ ತಾಲೂಕಿನ ಬೊರಗಲ್ ಗ್ರಾಮಗಳಲ್ಲಿ ಜರುಗಲಿವೆ. ಸಂಪನ್ಮೂಲ ವ್ಯಕ್ತಿಗಳಾಗಿ ಎಂ.ಜಿ.ಆಯ್.ಆರ್.ಡಿ ಸಂಸ್ಥೆಯ ಶ್ರೀ.ಮಂಜುನಾಥ.ಈ.ಸಿ. ಹಾಗೂ ಮಹಿಳಾ ಕಲ್ಯಾಣ ಸಂಸ್ಥೆಯ ಎಂ.ಎಂ.ಗಡಗಲಿ, ಶ್ರೀಮತಿ.ಸುರೇಖಾ.ಪಾಟೀಲ, ಸುಗಂಧಾ ಅಲ್ಲಟ್ಟಿ, ಶ್ರೀ.ಪ್ರದೀಪ ಪಟ್ಟಣಶೆಟ್ಟಿ, ಭಾಗವಹಿಸಲಿದ್ದಾರೆ ಎಂದು ಮಹಿಳಾ ಕಲ್ಯಾಣ ಸರಸ್ಥೆಯ ಗೌರವ ಕಾರ್ಯದರ್ಶಿ ಶ್ರೀಮತಿ. ವೈಜಯಂತಿ.ಎಂ.ಚೌಗಲಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬಸವೇಶ್ವರ ಹಾಗೂ ದಾನಮ್ಮದೇವಿ ಟ್ರಸ್ಟಿಂದ ಸಾಮಗ್ರಿಗಳ ವಿತರಣೆ

ಬೆಳಗಾವಿ: ಶಾಹಪೂರದ ಶ್ರೀ ಜಗಜ್ಯೋತಿ ಬಸವೇಶ್ವರ ಕಲ್ಯಾಣ ಮಂದಿರ ಟ್ರಸ್ಟ್ ವತಿಯಿಂದ ಪ್ರತಿವರ್ಷದಂತೆ ಗುರುವಾರ 22 ಫೆಬ್ರುವರಿ 2024ರಂದು ಶ್ರೀ ದಾನಮ್ಮದೇವಿ 39ನೇ ವಾರ್ಷಿಕೋತ್ಸವ ಸಮಾರಂಭದ ನಿಮಿತ್ತ ವಿಕಲ ಚೇತನ, ಅಂಧ ಮಕ್ಕಳ ಶಾಲೆ, ವೃದ್ಧಾಶ್ರಮ, ಅನಾಥಾಶ್ರಮ ಇಂತಹ ಸಂಘ ಸಂಸ್ಥೆಗಳಿಗೆ ಈ ಸಂಸ್ಥೆಯ ವತಿಯಿಂದ ಅವಶ್ಯವಿರುವ ಸಾಮಗ್ರಿಗಳನ್ನು ವಿತರಿಸಲಾಗುತ್ತಿದೆ.

ದಿನಾಂಕ 8.2.2024 ರೊಳಗಾಗಿ ಇಚ್ಛಿಸುವ ಸಂಘಸಂಸ್ಥೆಯವರು ಲೇಖನ ರೂಪದಲ್ಲಿ ಈ ಕೆಳಗಿನ ವಿಳಾಸಕ್ಕೆ ತಮ್ಮ ಮಾಹಿತಿ ನೀಡಬೇಕೆಂದು ಟ್ರಸ್ಟ್ ಅಧ್ಯಕ್ಷರಾದ ಚಂದ್ರಶೇಖರ ಬೆಂಬಳಗಿಯವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಸಂಪರ್ಕಿಸಬೇಕಾದದ್ದು : 0831–2420011/83131–31810 ಶ್ರೀ ದಾನಮ್ಮದೇವಿ ಟ್ರಸ್ಟ್ ಶಹಾಪೂರ, ಬೆಳಗಾವಿ.

VOL. 04 | ISSUE. 303 | RNI. KARKAN/2020/79084 | REG.NO G-2/PMG/KA/NK/BM/139/2024-26

BELAGAVI VARADI KANNADA DAILY MORNING : Editor, Printer, Publisher & Owned By : Satish Basavani Gudagenatti. Basavani House No.53, Ashray Colony Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089